# ಡಾ|| ರಾಜ್‌ಕುಮಾರ್ ಅಕಾಡೆಮಿ ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು

## ಅಕ್ಟೋಬರ್ ೩ನೇ ವಾರ

13-10-2025 TO 18-10-2025



- ಐಸಿಎಗೆ ಕನ್ನಡತಿ
- ಮೂವರಿಗೆ ಅರ್ಥಶಾಸ್ತ್ರದ ನೊಬೆಲ್
- 2040ರಲ್ಲಿ ಚಂದ್ರನ ಮೇಲೆ ಭಾರತೀಯರು
- ಗಾಜಾದಲ್ಲಿ ಹೊಸ ಬೆಳಕು?

## ❖ ನವಲಗುಂದ ಧುರಿ; ತಯಾರಕರ ಕೊರತೆ

**ಸಂದರ್ಭ: ಶತಮಾನಗಳ ಇತಿಹಾಸವುಳ್ಳ ಮತ್ತು ಭೌಗೋಳಿಕ ಮಾನ್ಯತೆ (ಜಿಐ) ಪಡೆದಿರುವ ಧಾರವಾಡ ಜಿಲ್ಲೆ ನವಲಗುಂದದ ಧುರಿಗಳ (ಜಮಖಾನ) ತಯಾರಿಕೆಗೆ ತಯಾರಕರ ಕೊರತೆ ಕಾಡುತ್ತಿದೆ.**



- ನವಲಗುಂದದ ಕರ್ನಾಟಕ ಕರಕುಶಲ ಅಭಿವೃದ್ಧಿ ನಿಗಮದ (ಕಾವೇರಿ ಎಂಪೋರಿಯಂ) ಘಟಕದಲ್ಲಷ್ಟೇ ಸದ್ಯ ಜಮಖಾನಗಳ ಉತ್ಪಾದನೆ ಆಗುತ್ತಿದೆ. ಇವುಗಳ ತಯಾರಿಕೆ ಮಾಡುವವರ ಸಂಖ್ಯೆ 17ಕ್ಕೆ ಇಳಿದಿದೆ.
- 'ಪಾರಂಪರಿಕ ನೇಯ್ಗೆ ಕಲೆಯನ್ನು ಮಕ್ತುಲ್ ಸಾಬ್ ಜಮಖಾನ್ದಾರ್ ಅವರು ನಮಗೆ ಕಲಿಸಿದರು. ನಾನು ತರಬೇತಿ ಪಡೆದಾಗ 150ಕ್ಕೂ ಹೆಚ್ಚು ಮಂದಿ ಕಾರ್ಮಿಕರು ತಯಾರಿಸುತ್ತಿದ್ದರು. ಕ್ರಮೇಣ ಅವರ ಸಂಖ್ಯೆ ಕುಸಿಯುತೊಡಗಿತು' ಎಂದ ನವಲಗುಂದ ನೇಕಾರರ ಸಂಘದ ಅಧ್ಯಕ್ಷೆ.
- 'ಜಮಖಾನ ತಯಾರಿಸುವವರಿಗೆ ಸರ್ಕಾರದಿಂದ ವಿಶೇಷ ನೆರವು ಇಲ್ಲ. ಜಮಖಾನ ಮಾರಾಟದಿಂದ ತಿಂಗಳಿಗೆ ₹2 ಲಕ್ಷದವರೆಗೆ ಆದಾಯಗಳಿಸುವ ಸಾಧ್ಯತೆ ಇದ್ದರೂ, ತಯಾರಕರ ಕೊರತೆಯಿಂದ ಅದು ಸಾಧ್ಯವಾಗುತ್ತಿಲ್ಲ. ಒಂದೊಂದು ಜಮಖಾನ ದರ ₹ 1 ಸಾವಿರದಿಂದ ₹ 10 ಸಾವಿರದವರೆಗೆ ಇರುತ್ತದೆ. ಸದ್ಯ ತಿಂಗಳಿಗೆ 100 ರಿಂದ 200 ಜಮಖಾನ ತಯಾರಿಸಲಾಗುತ್ತಿದೆ'.

### '**ಪರಂಪರೆಯೂ ಕಾರಣ**'

- 'ಜಮಖಾನ ತಯಾರಿಕೆ, ಮಾರಾಟದ ಹೊಣೆಯನ್ನು ಸರ್ಕಾರ ವಹಿಸಿಕೊಂಡಿದೆ. ಹೊಸದಾಗಿ ತರಬೇತಿ ಪಡೆದವರು ಆ ಕೆಲಸ ಮುಂದುವರಿಸುವುದಿಲ್ಲ. ಮುಖ್ಯವಾಗಿ ಕೌಶಲ ಗೊತ್ತಿರುವವರು ಮನೆಯ ಹೆಣ್ಣುಮಕ್ಕಳಿಗೆ ಕಲಿಸುವುದಿಲ್ಲ. ಹೊಸ ಪೀಳಿಗೆಗೆ ಈ ಬಗ್ಗೆ ಆಸಕ್ತಿ ಇಲ್ಲ. ತಯಾರಕರ ಸಂಖ್ಯೆ ಕುಸಿಯಲು ಇದೂ ಕಾರಣ' ಎಂದು ಕೈಮಗ್ಗ ಹಾಗೂ ಜವಳಿ ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದರು.

## ❖ 'ಗುತ್ತಿಗೆದಾರರಿಗಾಗಿ ವಿದ್ಯುತ್ ಪಂಪ್ಡ್ ಸ್ಟೋರೇಜ್ ಯೋಜನೆ'

**ಸಂದರ್ಭ: ಗುತ್ತಿದಾರರಿಗೆ ಅನುಕೂಲ ಮಾಡಿಕೊಡಲೆಂದೇ ಶರಾವತಿ ಮತ್ತು ವಾರಾಹಿ ಪಂಪ್ಡ್ ಸ್ಟೋರೇಜ್ ಯೋಜನೆಗಳನ್ನು ರೂಪಿಸಲಾಗಿದೆ ಎಂದು ಪರಿಸರ ಹೋರಾಟಗಾರ ಅಖಿಲೇಶ್ ಚಿಪ್ಳಿ ಆರೋಪಿಸಿದರು.**

- ಕೇಂದ್ರ ಅರಣ್ಯ, ಪರಿಸರ ಮತ್ತು ವನ್ಯಜೀವಿ ಸಚಿವಾಯಲದಿಂದ ಅನುಮತಿ ಸಿಕ್ಕಿಲ್ಲ. ಈ ಅನುಮತಿಗಾಗಿ ರಾಜ್ಯ ಸರ್ಕಾರವು ಈ ವರ್ಷದ ಜನವರಿಯಲ್ಲಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದೆ. ಆದರೆ, 2024ರಲ್ಲಿಯೇ ಆಂಧ್ರಪ್ರದೇಶದ 'ಮೇಘಾ ಎಂಜಿನಿಯರಿಂಗ್ ವರ್ಕ್ಸ್' ಎಂಬ ಕಂಪನಿಗೆ ಟೆಂಡರ್ ಆಗಿದೆ ಎಂದು ಹೇಳಿದರು.
- ಬ್ಯಾಟರಿ ಸ್ಟೋರೇಜ್ ಎನರ್ಜಿ ಸಿಸ್ಟಂ ಮೂಲಕ ಎಲ್ಲಿ ಬೇಕಾದರೂ ವಿದ್ಯುತ್ ಸ್ಟೋರೇಜ್ ಮಾಡಲು ಅವಕಾಶವಿದೆ. ಆದರೂ ಪಶ್ಚಿಮ ಘಟ್ಟದ ಸಂರಕ್ಷಿತ ಪ್ರದೇಶದಲ್ಲಿ ಶರಾವತಿ ಮತ್ತು ವಾರಾಹಿ ಪಂಪ್ಡ್ ಸ್ಟೋರೇಜ್ ಯೋಜನೆಗಳನ್ನು ಅನುಷ್ಠಾನ ಮಾಡಲು ಸರ್ಕಾರ ಹೊರಟಿದೆ ಎಂದು ಬೇಸರ ವ್ಯಕ್ತಪಡಿಸಿದರು.

Dr Rajkumar IAS/KAS Academy

- ಗುಂಡಿಬೈಲು, ಹೆನ್ನಿ, ಹಿರೇಹೆನ್ನಿ ಮುಂತಾದ ಪ್ರದೇಶಗಳಲ್ಲಿ 350ಕ್ಕೂ ಅಧಿಕ ಕುಟುಂಬಗಳು ಯಾವುದೇ ಹಕ್ಕುಪತ್ರ ಇಲ್ಲದೇ ಬಹಳ ವರ್ಷಗಳಿಂದ ಬದುಕುತ್ತಿವೆ. ಈ ಪಂಪ್ಡ್ ಸ್ಟೋರೇಜ್ ಯೋಜನೆಯಡಿ ಈ ಕುಟುಂಬಗಳನ್ನು ಕೂಡ ಒಕ್ಕಲೆಬ್ಬಿಸಲಾಗುತ್ತದೆ. ಆದರೆ, ಹಕ್ಕುಪತ್ರ ಇಲ್ಲದೇ ಇರುವುದರಿಂದ ಇವರಿಗೆ ಯಾವುದೇ ಪರಿಹಾರ ಸಿಗುವುದಿಲ್ಲ ಎಂದು ಹೇಳಿದರು.
- 1,800 ಟನ್ ಸ್ಫೋಟಕಗಳನ್ನು ಬಳಸಿ ಇಲ್ಲಿ ಸುರಂಗಗಳನ್ನು ನಿರ್ಮಿಸಲಾಗುತ್ತಿದೆ. ಗುರುತ್ವಾಕರ್ಷಣೆಗೆ ವಿರುದ್ಧವಾಗಿ ನೀರನ್ನು ಮೇಲಕ್ಕೆ ಹರಿಸಬೇಕಿರುವುದರಿಂದ ಉತ್ಪಾದನೆಗಿಂತ ಶೇ 25ರಷ್ಟು ಅಧಿಕ ವಿದ್ಯುತ್ ಇಲ್ಲಿ ವ್ಯಯವಾಗಲಿದೆ ಎಂದು ವಿವರಿಸಿದರು.
- ಪರಿಸರವಾದಿ ಶಂಕರ್ ಶರ್ಮ ಮಾತನಾಡಿ, 'ಈ ಯೋಜನೆ ಕುರಿತು ತಯಾರಿಸಿದ ವಿಸ್ತೃತ ಯೋಜನಾ ವರದಿಯು ಹಸಿ ಸುಳ್ಳುಗಳಿಂದ ಕೂಡಿದೆ. ಮಾಡಲೇಬೇಕಾದ ಯೋಜನೆ ಎಂದು ಎಲ್ಲಿಯೂ ಹೇಳಿಲ್ಲ. ಈ ಯೋಜನೆಗಾಗಿ 400 ಎಕರೆ ಕಾಡು ಕಡಿಯಬೇಕಾಗುತ್ತದೆ ಎಂಬುದನ್ನು ಹೇಳಿದ್ದಾರೆ. ವಿನಾಶದ ಅಂಚಿನಲ್ಲಿರುವ ಸಿಂಹಬಾಲದ ಸಿಂಗಲೀಕ ಸಹಿತ ಅನೇಕ ಜೀವಜಂತುಗಳು ನಾಶವಾಗಲಿವೆ. ಹಾಗಾಗಿ ಈ ಯೋಜನೆಯನ್ನು ಕೈಬಿಡಬೇಕು ಎಂದು ಆಗ್ರಹಿಸಿದರು. ಪರಿಸರ ಹೋರಾಟಗಾರ ಜೋಸೆಫ್ ಹೂವರ್ ಉಪಸ್ಥಿತರಿದ್ದರು.

Academy

## ❖ ತಾಲಿಬಾನ್: ಪಾಕ್‌ಗೆ ದೂರ ಭಾರತಕ್ಕೆ ಇನ್ನಷ್ಟು ಹತ್ತಿರ



ಅಫ್ಗಾನಿಸ್ತಾನದ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಾಕಿ ಅವರು ನವದೆಹಲಿಯಲ್ಲಿ ಶುಕ್ರವಾರ ವಿದೇಶಾಂಗ ಸಚಿವ ಜೈ ಶಂಕರ್ ಅವರನ್ನು ಭೇಟಿ ಮಾಡಿದರು —ಎಎಫ್‌ಪಿ ಚಿತ್ರ

# ತಾಲಿಬಾನ್: ಪಾಕ್‌ಗೆ ದೂರ ಭಾರತಕ್ಕೆ ಇನ್ನಷ್ಟು ಹತ್ತಿರ

**ಭಾರತ ಮತ್ತು ಪಾಕಿಸ್ತಾನ ಹಾಗೂ ಪಾಕಿಸ್ತಾನ ಮತ್ತು ಅಫ್ಗಾನಿಸ್ತಾನದ ನಡುವಿನ ಸಂಬಂಧ ಹಳಸಿರುವ ಸಂದರ್ಭದಲ್ಲಿ ತಾಲಿಬಾನ್ ಸಚಿವರು ಭಾರತಕ್ಕೆ ಭೇಟಿ ನೀಡಿರುವುದು ಭೌಗೋಳಿಕ ರಾಜಕೀಯದ ದೃಷ್ಟಿಯಿಂದ ಮಹತ್ವ ಪಡೆದಿದೆ. ಭಾರತವು ಅಫ್ಗನ್‌ನಲ್ಲಿರುವ ತಾಲಿಬಾನ್ ಆಡಳಿತವನ್ನು ಇನ್ನೂ ಅಂಗೀಕರಿಸಿಲ್ಲ. ಆದರೆ, ಅನೌಪಚಾರಿಕ ಸಂಬಂಧ ಹೊಂದಿದೆ. ಈಗ ಎರಡೂ ದೇಶಗಳು ತಮ್ಮ ರಾಜತಾಂತ್ರಿಕ ಸಂಬಂಧವನ್ನು ವೃದ್ಧಿಸಲು ಮುಂದಾಗಿವೆ. ಇದು ನೆರೆಯ ಪಾಕಿಸ್ತಾನದ ಕಣ್ಣು ಕೆಂಪಾಗಿಸಿದೆ**

ಪ್ರಜಾವಾಣಿ ವಾರ್ತೆ

ಕೆಲವೇ ವರ್ಷಗಳ ಹಿಂದೆ ಊಹಿಸಿಕೊಳ್ಳಲೂ ಅಸಾಧ್ಯವಾಗಿದ್ದ ವಿದ್ಯಮಾನ ನಡೆದಿದೆ. ಅಫ್ಗಾನಿಸ್ತಾನದಲ್ಲಿ ಅಧಿಕಾರ ನಡೆಸುತ್ತಿರುವ ತಾಲಿಬಾನ್ ಸರ್ಕಾರದ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಾಕಿ ಪ್ರವಾಸಕ್ಕಾಗಿ ಭಾರತಕ್ಕೆ ಬಂದಿದ್ದಾರೆ. ವಾರದವರೆಗೆ ಅವರು ಇಲ್ಲಿ ಇರಲಿದ್ದಾರೆ. ಭಾರತದೊಂದಿಗೆ ರಾಜತಾಂತ್ರಿಕ, ವ್ಯಾಪಾರ ಮತ್ತು ಆರ್ಥಿಕ ಒಪ್ಪಂದಗಳ ಬಗ್ಗೆ ಅವರು ಕೇಂದ್ರ ಸಚಿವರು ಮತ್ತು ಅಧಿಕಾರಿಗಳೊಂದಿಗೆ ಚರ್ಚೆಗಳನ್ನು ನಡೆಸುತ್ತಿದ್ದಾರೆ.

ಇದು ವಿಶೇಷ ವಿದ್ಯಮಾನ ಎನ್ನಲು ಕಾರಣಗಳಿವೆ; 1994ರಲ್ಲಿ ತಾಲಿಬಾನ್ ಹುಟ್ಟು ಪಡೆದಾಗ ಅದು ಪಾಕಿಸ್ತಾನಿ ಬೆಂಬಲಿತ ಮತ್ತೊಂದು ಭಯೋತ್ಪಾದಕ ಗುಂಪು ಎಂದೇ ಭಾರತ ಭಾವಿಸಿತ್ತು. ಭಾರತವು ಇರಾನ್ ಮತ್ತು ರಷ್ಯಾದೊಂದಿಗೆ ಅಫ್ಗಾನಿಸ್ತಾನದಲ್ಲಿ ತಾಲಿಬಾನ್ ವಿರೋಧಿಗಳನ್ನು ಬೆಂಬಲಿಸುತ್ತಿತ್ತು. 2001ರಲ್ಲಿ ಅಮೆರಿಕವು ಅಫ್ಗನ್ ಮೇಲೆ ಹಿಡಿತ ಸಾಧಿಸಿ, ಅಲ್ಲಿ ಅಮೆರಿಕ ಬೆಂಬಲಿತ ಸರ್ಕಾರ ರಚನೆಯಾದ ಮೇಲೆ ಭಾರತ ನಿರಂತರ 20 ವರ್ಷ ಆ ಸರ್ಕಾರವನ್ನು ಬೆಂಬಲಿಸಿತು. 1999ರಲ್ಲಿ ಭಾರತದ ವಿಮಾನವನ್ನು ಅಪಹರಿಸಿದ್ದವರಿಗೆ ತಾಲಿಬಾನ್ ಆಶ್ರಯ ನೀಡಿದೆ ಎಂದು ಭಾರತ ಭಾವಿಸಿತ್ತು. ಜತೆಗೆ, ತನ್ನ ನಾಲ್ವರು ಅಧಿಕಾರಿಗಳ ಸಾವಿಗೆ ಕಾರಣವಾಗಿದ್ದ 2008ರ ಕಾಬೂಲ್ ಉಗ್ರ ದಾಳಿಯ ಬಗ್ಗೆಯೂ ಭಾರತ ಅಸಮಾಧಾನ ವ್ಯಕ್ತಪಡಿಸಿತ್ತು. ಹೀಗೆ ವಿವಿಧ ಕಾರಣಗಳಿಂದ ತಾಲಿಬಾನ್ ಮತ್ತು ಭಾರತದ ನಡುವಿನ ಸಂಬಂಧ ಹಳಸಿತ್ತು.

2021ರಲ್ಲಿ ತಾಲಿಬಾನ್ ಸಂಘಟನೆಯು ಅಫ್ಗಾನಿಸ್ತಾನದ ಸರ್ಕಾರವನ್ನು ಪದಚ್ಯುತಗೊಳಿಸಿ ಅಧಿಕಾರವನ್ನು ಕೈವಶ ಮಾಡಿಕೊಂಡ ನಂತರ ಅಲ್ಲಿನ ಭಾರತದ ರಾಯಭಾರ ಕಚೇರಿಯನ್ನು ಮುಚ್ಚಲಾಗಿತ್ತು. ವೀಸಾ ನೀಡುವುದನ್ನು ಸ್ಥಗಿತಗೊಳಿಸಿತ್ತು. ಅನಿವಾರ್ಯ ಕಾರಣಗಳಿಗಾಗಿ ಕೆಲವೇ ಕೆಲವು ಸಿಬ್ಬಂದಿಯನ್ನು ಮಾತ್ರ ಅಲ್ಲಿ ನಿಯೋಜಿಸಲಾಗಿತ್ತು. ಮೇಲಾಗಿ, ತಾಲಿಬಾನ್ ಸರ್ಕಾರವನ್ನು ಇದುವರೆಗೂ ಭಾರತ ಅಂಗೀಕರಿಸಿಯೇ ಇಲ್ಲ. ಇಂಥ ಹಿನ್ನೆಲೆ ಇದ್ದರೂ ಮುತ್ತಾಕಿ ಅವರು ಭಾರತಕ್ಕೆ ಭೇಟಿ ನೀಡಿದ್ದಾರೆ. ಈ ಭೇಟಿ ಎರಡೂ ದೇಶಗಳ ಮಟ್ಟದಲ್ಲಿ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಮಹತ್ವ ಪಡೆದಿದೆ. ತಾಲಿಬಾನ್ ಸಚಿವರೊಬ್ಬರು ಭಾರತಕ್ಕೆ ಭೇಟಿ ನೀಡುತ್ತಿರುವುದೇ ಇದೇ ಮೊದಲು.

ಅಫ್ಗಾನಿಸ್ತಾನದ ತಾಲಿಬಾನ್ ಸರ್ಕಾರವನ್ನು ಸಂಪೂರ್ಣವಾಗಿ ಅಂಗೀಕರಿಸಿರುವುದು ರಷ್ಯಾ ಒಂದೇ. ಅಮೆರಿಕವು ಮುತ್ತಾಕಿ ಅವರ ಪ್ರಯಾಣದ ಮೇಲೆ ನಿರ್ಬಂಧ ವಿಧಿಸಿರುವುದರಿಂದ ರಷ್ಯಾ ಮೂಲಕವೇ ಅವರು ಭಾರತಕ್ಕೆ ಬಂದಿದ್ದಾರೆ. ಮುತ್ತಾಕಿ ಅವರ ಭೇಟಿಯಿಂದ ದೇಶದ ಅಭಿವೃದ್ಧಿ, ಪ್ರಾದೇಶಿಕ ಸ್ಥಿರತೆಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಕೇಂದ್ರ ಸರ್ಕಾರ ಪ್ರತಿಪಾದಿಸಿದೆ. ಇನ್ನೊಂದೆಡೆ, ಭಾರತವನ್ನು ತನ್ನ ಆಪ್ತ ಸ್ನೇಹಿತ ಎಂದು ಬಣ್ಣಿಸಿರುವ ಮುತ್ತಾಕಿ, ಎರಡೂ ದೇಶಗಳ ಸಂಬಂಧ ವೃದ್ಧಿಗೆ ಈ ಭೇಟಿ ನೆರವಾಗಲಿದೆ ಎಂದಿದ್ದಾರೆ.

**ಶತ್ರುವಿನ ಶತ್ರು ಮಿತ್ರ:** ವಾಸ್ತವವಾಗಿ, ಭಾರತವು ತಾಲಿಬಾನ್‌ನೊಂದಿಗೆ ಸ್ನೇಹಹಸ್ತ ಚಾಚಲು ಮುಖ್ಯ ಕಾರಣ, ಪಾಕಿಸ್ತಾನ. ಪಾಕಿಸ್ತಾನವು ತಾಲಿಬಾನ್‌ನ ಮೊದಲ ಆಡಳಿತ ಅವಧಿಯಲ್ಲಿ (1996–2001) ಅದರೊಂದಿಗೆ ಉತ್ತಮ ಸಂಬಂಧ ಹೊಂದಿತ್ತು. ಆದರೆ, ಎರಡನೇ ಅವಧಿಯಲ್ಲಿ ಅವರ ಸಂಬಂಧದಲ್ಲಿ ಬಿರುಕು ಮೂಡಿ, ಅದು ಹಿರಿದಾಗುತ್ತಲೇ ಸಾಗಿತು. ಪಾಕಿಸ್ತಾನದ ರಕ್ಷಣಾ ಸಚಿವರು 'ಅಫ್ಗಾನಿಸ್ತಾನ ನಮ್ಮ ಶತ್ರು ದೇಶ' ಎಂದು ಕರೆಯುವ ಮಟ್ಟಿಗೆ ಸಂಬಂಧ ಹಳಸಿತು. ಪಾಕಿಸ್ತಾನದೊಂದಿಗೆ ದೂರವಾದಷ್ಟೂ ತಾಲಿಬಾನ್, ಭಾರತಕ್ಕೆ ಹತ್ತಿರವಾಗತೊಡಗಿತು.

ಹಾಗೆಂದು ತಾಲಿಬಾನ್ ಸಚಿವರ ಭಾರತ ಭೇಟಿ ತೀರಾ ಆಕಸ್ಮಿಕವೇನಲ್ಲ. ಭಾರತವು ಹಂತಹಂತವಾಗಿ ತಾಲಿಬಾನ್ ಜತೆಗಿನ ಸಂಬಂಧವನ್ನು ಉತ್ತಮಪಡಿಸುತ್ತಿದೆ. 2021ರಿಂದ, ತಾಲಿಬಾನ್ ಸರ್ಕಾರವನ್ನು ಅಂಗೀಕರಿಸದಿದ್ದರೂ, ಮಾನವೀಯತೆಯ ಆಧಾರದಲ್ಲಿ ಆರಂಭದಿಂದಲೂ ನೆರವು ನೀಡುತ್ತಿದೆ. 2021ರಲ್ಲಿ ಅಫ್ಗನ್‌ನೊಂದಿಗೆ ಎಲ್ಲ ಸಂಪರ್ಕ ಕಡಿದುಕೊಂಡಿದ್ದ ಭಾರತವು 2022ರ ಜೂನ್‌ನಲ್ಲಿ ಅದರೊಂದಿಗೆ ಸಣ್ಣಮಟ್ಟದ ಸಂವಹನ ಆರಂಭಿಸಿತ್ತು. ನಂತರ ವೀಸಾ ನೀಡಲು ಆರಂಭಿಸಿತು. ಕಳೆದ ನವೆಂಬರ್‌ನಲ್ಲಿ ದೆಹಲಿಯಲ್ಲಿ ರಾಜತಾಂತ್ರಿಕ ಅಧಿಕಾರಿಯನ್ನು ನೇಮಿಸಿದ ತಾಲಿಬಾನ್, ಮೊದಲು ಮುಂಬೈ, ನಂತರ ಹೈದರಾಬಾದ್‌ನಲ್ಲಿ ಕಾನ್ಸಲ್ ಕಚೇರಿಗಳನ್ನೂ ಆರಂಭಿಸಿತು. ಇದರ ಜತೆಗೆ, ಮೂರು ವರ್ಷಗಳಿಂದಲೂ ಎರಡು ದೇಶಗಳ ಪ್ರತಿನಿಧಿಗಳು ಹೊರದೇಶಗಳಲ್ಲಿ ಹಲವು ಬಾರಿ ಭೇಟಿ ಮಾಡಿ ಸಂಬಂಧ ಸುಧಾರಣೆಯ ಬಗ್ಗೆ ಮಾತುಕತೆ ನಡೆಸಿದ್ದರು. ಈಗ ತಾಲಿಬಾನ್ ಸರ್ಕಾರದ ಸಚಿವರೇ ಭಾರತ ಭೇಟಿಗೆ ಆಗಮಿಸಿದ್ದಾರೆ.

ಆಧಾರ: ಪಿಟಿಐ, ಬಿಬಿಸಿ, ದಿ ನ್ಯೂಯಾರ್ಕ್ ಟೈಮ್ಸ್

### ತಾಲಿಬಾನ್ ಜತೆ ಸ್ನೇಹಕ್ಕೆ ವಿರೋಧ

ಭಾರತವು ಅಫ್ಗಾನಿಸ್ತಾನದ ತಾಲಿಬಾನ್ ಸರ್ಕಾರದ ಜತೆಗೆ ಸಂಬಂಧವೃದ್ಧಿಯ ಪ್ರಯತ್ನಗಳನ್ನು ನಡೆಸುತ್ತಿರುವುದಕ್ಕೆ ಕೆಲವರು ವಿರೋಧ ವ್ಯಕ್ತವಾಗಿದೆ. ಹಿಂದೂ ರಾಷ್ಟ್ರೀಯವಾದಿ ಪಕ್ಷದ ನೇತೃತ್ವದ ಕೇಂದ್ರ ಸರ್ಕಾರವು ತಾಲಿಬಾನ್‌ನಂಥ ಮತೀಯವಾದಿ ಮುಸ್ಲಿಂ ಸರ್ಕಾರದೊಂದಿಗೆ ಕೈಜೋಡಿಸುತ್ತಿರುವುದರ ಬಗ್ಗೆ ಕಳವಳವೂ ವ್ಯಕ್ತವಾಗಿದೆ. ದೆಹಲಿಯ ಅಫ್ಗಾನಿಸ್ತಾನದ ರಾಯಭಾರ ಕಚೇರಿಯಲ್ಲಿ ನಡೆದ ಮಾಧ್ಯಮಗೋಷ್ಠಿಗೆ ಪತ್ರಕರ್ತೆಯರನ್ನು ನಿರ್ಬಂಧಿಸಲಾಗಿತ್ತು, ಅದರ ಬಗ್ಗೆಯೂ ಕೇಂದ್ರ ಸರ್ಕಾರ ಟೀಕೆಗೆ ಗುರಿಯಾಗಿದೆ.

### ಸಂದೇಹದಿಂದಲೇ ಕಂಡಿದ್ದ ಭಾರತ

ಭಾರತ ಮತ್ತು ತಾಲಿಬಾನ್ ಸಂಬಂಧ ಯಾವತ್ತೂ ಉತ್ತಮವಾಗಿರಲಿಲ್ಲ. 1996–2001ರ ನಡುವೆ ಅಫ್ಗಾನಿಸ್ತಾನದಲ್ಲಿ ತಾಲಿಬಾನ್ ಆಡಳಿತವಿದ್ದಾಗ ಭಾರತ ಅದರೊಂದಿಗೆ ರಾಜತಾಂತ್ರಿಕ ಸಂಬಂಧ ಹೊಂದಿರಲಿಲ್ಲ. ಅಮೆರಿಕ ನೇತೃತ್ವದ ಪಡೆಗಳು 2001ರಲ್ಲಿ ತಾಲಿಬಾನ್‌ನಿಂದ ಅಧಿಕಾರ ಕಸಿದುಕೊಂಡು ಪ್ರಜಾಸತ್ತಾತ್ಮಕವಾಗಿ ಹೊಸ ಸರ್ಕಾರ ರಚನೆಯಾದಾಗ, ಭಾರತ ಹೊಸ ಸರ್ಕಾರವನ್ನು ಬೆಂಬಲಿಸಿತ್ತು. ಅಲ್ಲದೇ 2001ರ ಬಳಿಕ 300 ಕೋಟಿ ಡಾಲರ್‌ನಷ್ಟು (ಈಗಿನ ಮೌಲ್ಯದ ಪ್ರಕಾರ ಅಂದಾಜು ₹26,600 ಕೋಟಿ) ವ್ಯಯಿಸಿ ಹೊಸ ಅಫ್ಗಾನಿಸ್ತಾನ ನಿರ್ಮಾಣಕ್ಕೆ ನೆರವಾಗಿತ್ತು. 2021ರಲ್ಲಿ ಮತ್ತೆ ತಾಲಿಬಾನ್ ಅಧಿಕಾರಕ್ಕೆ ಬಂದಾಗಲೂ ಅದರೊಂದಿಗಿನ ರಾಜತಾಂತ್ರಿಕ ಸಂಬಂಧ ಕಡಿದುಕೊಂಡಿತ್ತು. ಮಾನವೀಯ ನೆರವಿನಂತಹ ಸಾಮಾಜಿಕ ಕಾರ್ಯಗಳಿಗಷ್ಟೇ ಒತ್ತು ನೀಡಿತ್ತು.

ತಾಲಿಬಾನ್ ಸಂಘಟನೆಯು ಪಾಕಿಸ್ತಾನದೊಂದಿಗೆ ಉತ್ತಮ ಒಡನಾಟ ಹೊಂದಿದ್ದು ಭಾರತವು ಅದರಿಂದ ಅಂತರ ಕಾಯ್ದುಕೊಳ್ಳಲು ಪ್ರಮುಖ ಕಾರಣ. ತಾಲಿಬಾನ್, ಪಾಕಿಸ್ತಾನದ ಇನ್ನೊಂದು ಮುಖ ಎಂಬ ಸಂದೇಹ ಭಾರತಕ್ಕೆ ಇತ್ತು. ತನ್ನ ಮೇಲೆ ಹಗೆ ಸಾಧಿಸಲು ಪಾಕಿಸ್ತಾನವು ತಾಲಿಬಾನ್ ಸಂಘಟನೆಯನ್ನು ಬಳಸಬಹುದು ಎಂಬ ಅನುಮಾನವೂ ಅದಕ್ಕಿತ್ತು.

**ಬದಲಾದ ನೀತಿ:** ಈಗ ಚಿತ್ರಣ ಬದಲಾಗಿದೆ. ಅದರೊಂದಿಗೆ ಅಫ್ಗಾನಿಸ್ತಾನ ಕುರಿತಂತೆ ಭಾರತದ ನೀತಿಯೂ ಬದಲಾದಂತೆ ಕಾಣುತ್ತಿದೆ.

ತಾಲಿಬಾನ್–ಪಾಕಿಸ್ತಾನದ ಸಂಬಂಧ ಹಳಸಿದೆ. ಐಎಸ್, ಅಲ್‌ಖೈದಾದಂತಹ ಉಗ್ರ ಸಂಘಟನೆಗಳು ಭಾರತದ ಮೇಲೆ ದಾಳಿ ನಡೆಸಲು ಅಫ್ಗಾನಿಸ್ತಾನದ ನೆಲವನ್ನು ಬಳಸಬಹುದು ಎಂಬ ಆತಂಕ ಭಾರತಕ್ಕೆ ಇದೆ. ಆದರೆ, ಬೇರೆ ದೇಶಗಳ ಮೇಲೆ ದಾಳಿ ನಡೆಸಲು ತನ್ನ ನೆಲವನ್ನು ಬಳಸಿಕೊಳ್ಳಲು ಯಾರಿಗೂ ಅವಕಾಶ ನೀಡುವುದಿಲ್ಲ ಎಂದು ತಾಲಿಬಾನ್ ಆಡಳಿತ ಸ್ಪಷ್ಟವಾಗಿ ಹೇಳಿದೆ. ಅಲ್ಲದೇ ಅದು ಸ್ನೇಹ ಹಸ್ತವನ್ನೂ ಚಾಚಿದೆ. ಚೀನಾ ಮತ್ತು ಪಾಕಿಸ್ತಾನ ಪ್ರಭಾವವನ್ನು ಕಡಿಮೆಗೊಳಿಸಲು ಇರಾನ್ ಮತ್ತು ಮಧ್ಯ ಏಷ್ಯಾ ರಾಷ್ಟ್ರಗಳೊಂದಿಗೆ ಸಂಪರ್ಕ ಸಾಧಿಸಲು ಅಫ್ಗಾನಿಸ್ತಾನ ಮುಖ್ಯ. ಹೀಗಾಗಿ, ತಾಲಿಬಾನ್ ಆಡಳಿತವನ್ನು ಅಧಿಕೃತವಾಗಿ ಅಂಗೀಕರಿಸದಿದ್ದರೂ ಅದರೊಂದಿಗಿನ ರಾಜತಾಂತ್ರಿಕ ಬಾಂಧವ್ಯವನ್ನು ಸುಧಾರಿಸುವ ದಿಸೆಯಲ್ಲಿ ಭಾರತ ಎಚ್ಚರಿಕೆ ಇಟ್ಟಿದೆ ಎಂದು ವಿಶ್ಲೇಷಿಸಲಾಗುತ್ತಿದೆ.




### ಅಂದು ಪರಮಾಪ್ತ, ಇಂದು ಬದ್ಧವೈರಿ

ಪಾಕಿಸ್ತಾನ ಮತ್ತು ತಾಲಿಬಾನ್ ಹಿಡಿತದಲ್ಲಿದ್ದ ಅಫ್ಗಾನಿಸ್ತಾನ ಒಂದು ಕಾಲದಲ್ಲಿ ಆಪ್ತ ರಾಷ್ಟ್ರಗಳು. ಆದರೆ, ಈಗ ಇವೆರಡೂ ವೈರಿ ದೇಶಗಳಾಗಿ ಮಾರ್ಪಟ್ಟಿವೆ. ತಾಲಿಬಾನ್ ಈಗ ಭಾರತದೊಂದಿಗೆ ಉತ್ತಮ ಸಂಬಂಧ ಹೊಂದುತ್ತಿರುವುದು ಪಾಕಿಸ್ತಾನದ ಕೆಂಗಣ್ಣಿಗೆ ಗುರಿಯಾಗಿದೆ. ಇದೇ ಹೊತ್ತಿನಲ್ಲಿ, ಎರಡೂ ರಾಷ್ಟ್ರಗಳ ನಡುವೆ ಸೇನಾ ಸಂಘರ್ಷವೂ ಆರಂಭವಾಗಿದೆ. ಹಾಗಾಗಿ, ಅಫ್ಗನ್ ಜೊತೆಗಿನ ಅದರ ಸಂಬಂಧ ಸರಿಪಡಿಸಲಾಗದಷ್ಟು ಹದಗೆಟ್ಟಿದೆ.

1996-2001ರ ನಡುವೆ ಅಫ್ಗಾನಿಸ್ತಾನದಲ್ಲಿ ತಾಲಿಬಾನ್ ಆಡಳಿತವಿದ್ದಾಗ ಪಾಕಿಸ್ತಾನವು ಅದರೊಂದಿಗೆ ಉತ್ತಮ ಬಾಂಧವ್ಯ ಹೊಂದಿತ್ತು. 2001ರಲ್ಲಿ ಅದರ ಆಡಳಿತ ಪತನಗೊಂಡ ನಂತರವೂ ಪಾಕಿಸ್ತಾನ ತಾಲಿಬಾನ್‌ನೊಂದಿಗೆ ಉತ್ತಮ ಸಂಬಂಧವನ್ನು ಮುಂದುವರಿಸಿತ್ತು. 2021ರಲ್ಲಿ ತಾಲಿಬಾನ್ ಮತ್ತೆ ಅಧಿಕಾರಕ್ಕೆ ಬಂದ ನಂತರ ಆರಂಭದಲ್ಲಿ ಉತ್ತಮ ಸಂಬಂಧ ಇದ್ದರೂ ಇತ್ತೀಚಿನ ವರ್ಷಗಳಲ್ಲಿ ಅದು ಹಳಸಿದೆ. ತಾಲಿಬಾನ್ ಆಡಳಿತವನ್ನು ಸದಾ ತನ್ನ ನಿಯಂತ್ರಣದಲ್ಲಿ ಇಟ್ಟುಕೊಳ್ಳಬಹುದು ಎಂಬ ಲೆಕ್ಕಾಚಾರದಲ್ಲಿ ಪಾಕಿಸ್ತಾನ ಇತ್ತು. ಆದರೆ, ಎರಡನೇ ಬಾರಿ ಅಧಿಕಾರಕ್ಕೆ ಏರಿದ ನಂತರ ತಾಲಿಬಾನ್, ಭಾರತ ಸೇರಿದಂತೆ ಇತರ ದೇಶಗಳೊಂದಿಗೆ ಉತ್ತಮ ರಾಜತಾಂತ್ರಿಕ ಬಾಂಧವ್ಯ ಹೊಂದಲು ಯತ್ನಿಸುತ್ತಿದೆ. ಸ್ವತಂತ್ರವಾಗಿ ನಿರ್ಧಾರ ಕೈಗೊಳ್ಳುತ್ತಿದೆ. ನೆರೆ ರಾಷ್ಟ್ರದ ಒತ್ತಡಕ್ಕೆ ಮಣಿಯುತ್ತಿಲ್ಲ. ಅಲ್ಲದೇ ಅದರ ಕೈಗೊಂಬೆಯಾಗಿ ಇರಲು ಒಪ್ಪುತ್ತಿಲ್ಲ. ಇದು ಪಾಕಿಸ್ತಾನದ ಅಸಮಾಧಾನಕ್ಕೆ ಪ್ರಮುಖ ಕಾರಣ ಎಂದು ಹೇಳಲಾಗುತ್ತಿದೆ.

ಜೊತೆಗೆ, ತೆಹ್ರಿಕ್–ಇ–ತಾಲಿಬಾನ್ ಪಾಕಿಸ್ತಾನ (ಟಿಟಿಪಿ) ಭಯೋತ್ಪಾದಕ ಸಂಘಟನೆಯು ಪಾಕಿಸ್ತಾನದ ಮೇಲೆ ನಿರಂತರವಾಗಿ ದಾಳಿ ನಡೆಸುತ್ತಿದೆ. ಈ ಸಂಘಟನೆಗೆ ತಾಲಿಬಾನ್ ಬೆಂಬಲ ನೀಡುತ್ತಿದ್ದು, ಅದರ ಮುಖಂಡರಿಗೆ ಅಫ್ಗಾನಿಸ್ತಾನದಲ್ಲಿ ಆಶ್ರಯ ನೀಡಿದೆ. ತನ್ನ ನೆಲದಲ್ಲಿ ದುಷ್ಕೃತ್ಯಗಳನ್ನು ಎಸಗಲು ನೆರವು ನೀಡುತ್ತಿದೆ ಎಂಬುದು ಪಾಕಿಸ್ತಾನದ ಆರೋಪ. ಈ ಸಂಘಟನೆಯು ಒಂದು ವರ್ಷದಲ್ಲಿ ಪಾಕ್ ನೆಲದಲ್ಲಿ ಕನಿಷ್ಠ 600 ದಾಳಿಗಳನ್ನು ಸಂಘಟಿಸಿದೆ ಎಂದು ಅಂದಾಜಿಸಲಾಗಿದೆ. ದಾಳಿಯಲ್ಲಿ ಸೈನಿಕರು ಹಾಗೂ ನಾಗರಿಕರು ಭಾರಿ ಸಂಖ್ಯೆಯಲ್ಲಿ ಮೃತಪಟ್ಟಿದ್ದಾರೆ.

ಈಗ ತಾಲಿಬಾನ್ ಆಡಳಿತವು ಭಾರತದೊಂದಿಗಿನ ಸಂಬಂಧವನ್ನು ಸುಧಾರಿಸುವತ್ತ ಹೆಜ್ಜೆ ಹಾಕಿರುವುದು ಅದನ್ನು ಇನ್ನಷ್ಟು ಕೆರಳಿಸಿದೆ. ಶುಕ್ರವಾರ ಅಲ್ಲಿನ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಾಕಿ ಮತ್ತು ಭಾರತದ ವಿದೇಶಾಂಗ ಸಚಿವ ಜೈಶಂಕರ್ ಅವರು ದ್ವಿಪಕ್ಷೀಯ ಮಾತುಕತೆ ನಡೆಸಿದ ನಂತರ ಬಿಡುಗಡೆ ಮಾಡಿದ ಜಂಟಿ ಹೇಳಿಕೆಯಲ್ಲಿ ಕಾಶ್ಮೀರ ಭಾರತದ ಅವಿಭಾಜ್ಯ ಅಂಗ ಮತ್ತು ಭಯೋತ್ಪಾದನೆ ಪಾಕ್‌ನ ಆಂತರಿಕ ವಿಚಾರ ಎಂದು ಹೇಳಿರುವುದಕ್ಕೆ ಪಾಕಿಸ್ತಾನವು ತನ್ನಲ್ಲಿರುವ ಅಫ್ಗನ್ ರಾಜತಾಂತ್ರಿಕ ಅಧಿಕಾರಿಯನ್ನು ಕರೆಸಿಕೊಂಡು ಪ್ರತಿಭಟನೆ ದಾಖಲಿಸಿದೆ. ಈ ಭೇಟಿಯ ಹೊತ್ತಿನಲ್ಲೇ ಕಾಬೂಲ್ ಮೇಲೆ ವಾಯುದಾಳಿ ನಡೆಸಿದೆ. ಗಡಿಯಲ್ಲಿ ಎರಡೂ ಸೇನೆಗಳ ನಡುವೆ ಭಾರಿ ಕಾಳಗ ಆರಂಭವಾಗಿದೆ.

## ❖ ದೇಶದಲ್ಲಿ ಲಕ್ಷಕ್ಕೂ ಅಧಿಕ ಏಕೋಪಾಧ್ಯಾಯ ಶಾಲೆಗಳು

**ಸಂದರ್ಭ: ದೇಶದಲ್ಲಿ ಏಕೋಪಾಧ್ಯಾಯ ಶಾಲೆಗಳ ಸಂಖ್ಯೆ ಒಂದು ಲಕ್ಷಕ್ಕೂ ಅಧಿಕ. ಇಂಥ ಶಾಲೆಗಳಲ್ಲಿ 33 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ.**

- ಆಂಧ್ರಪ್ರದೇಶದಲ್ಲಿ ಇಂಥ ಶಾಲೆಗಳ ಸಂಖ್ಯೆ ಹೆಚ್ಚು ಇದ್ದು, ಮೊದಲ ಸ್ಥಾನದಲ್ಲಿದೆ. ನಂತರದ ಸ್ಥಾನಗಳಲ್ಲಿ ಉತ್ತರ ಪ್ರದೇಶ, ಜಾರ್ಖಂಡ್, ಮಹಾರಾಷ್ಟ್ರ, ಕರ್ನಾಟಕ ಹಾಗೂ ಲಕ್ಷದ್ವೀಪ ಇವೆ. ಶಿಕ್ಷಣ ಸಚಿವಾಲಯವು ಬಿಡುಗಡೆ ಮಾಡಿರುವ 2024–25ನೇ ಶೈಕ್ಷಣಿಕ ವರ್ಷಕ್ಕೆ ಸಂಬಂಧಿಸಿದ ದತ್ತಾಂಶದಲ್ಲಿ ಈ ಮಾಹಿತಿ ಇದೆ.
- ಏಕೋಪಾಧ್ಯಾಯ ಶಾಲೆಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆಯ ದೃಷ್ಟಿಯಿಂದ ನೋಡಿದಾಗ, ಉತ್ತರ ಪ್ರದೇಶ ಅಗ್ರ ಸ್ಥಾನದಲ್ಲಿದ್ದು, ನಂತರದ ಸ್ಥಾನಗಳಲ್ಲಿ ಜಾರ್ಖಂಡ್, ಪಶ್ಚಿಮ ಬಂಗಾಳ ಹಾಗೂ ಮಧ್ಯಪ್ರದೇಶ ಇವೆ ಎಂದು ಸಚಿವಾಲಯ ತಿಳಿಸಿದೆ.


ಪ್ರಮುಖ ಅಂಶಗಳು

- ಹಿಂದಿನ ವರ್ಷಗಳಿಗೆ ಹೋಲಿಸಿದಲ್ಲಿ ಏಕೋಪಾಧ್ಯಾಯ ಶಾಲೆಗಳ ಸಂಖ್ಯೆಯಲ್ಲಿ ಇಳಿಕೆ ಆಗಿದೆ. 2022-23ನೇ ಸಾಲಿನಲ್ಲಿ 1,18,190 ಇದ್ದ ಇಂಥ ಶಾಲೆಗಳ ಸಂಖ್ಯೆ 2023-24ನೇ ಸಾಲಿನಲ್ಲಿ 1,10,971 ಇತ್ತು. ಶೇ 6ರಷ್ಟು ಇಳಿದಿದೆ
- ದೆಹಲಿಯಲ್ಲಿ ಏಕೋಪಾಧ್ಯಾಯ ಶಾಲೆಗಳ ಸಂಖ್ಯೆ 9 ಹಾಗೂ ಅಂಡಮಾನ್ ಮತ್ತು ನಿಕೋಬಾರ್ ದ್ವೀಪದಲ್ಲಿ 4
- ಕೇಂದ್ರಾಡಳಿತ ಪ್ರದೇಶಗಳಾದ ಪುದುಚೇರಿ, ಲಡಾಖ್, ದಾದ್ರಾ ಮತ್ತು ನಗರ ಹವೇಲಿ, ದಮನ್-ದಿಯು ಹಾಗೂ ಚಂಡೀಗಢದಲ್ಲಿ ಇಂಥ ಶಾಲೆಗಳೇ ಇಲ್ಲ
- ಏಕೋಪಾಧ್ಯಾಯ ಶಾಲೆಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳ ವಿಚಾರದಲ್ಲಿ ಕರ್ನಾಟಕವು ದೇಶದಲ್ಲಿಯೇ 5ನೇ ಸ್ಥಾನದಲ್ಲಿದೆ. ರಾಜ್ಯದಲ್ಲಿ ಇಂಥ ಶಾಲೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ 2,23,142
- ಪ್ರತಿ ಶಾಲೆಯಲ್ಲಿ ಪ್ರವೇಶ ಪಡೆಯುವ ಮಕ್ಕಳ ಸರಾಸರಿ ಸಂಖ್ಯೆ ದೃಷ್ಟಿಯಿಂದ ಚಂಡೀಗಢ ಮತ್ತು ದೆಹಲಿಯಲ್ಲಿ ಗರಿಷ್ಠ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಪ್ರವೇಶ ಪಡೆಯುತ್ತಿರುವುದು ಕಂಡುಬಂದಿದೆ. ಇಲ್ಲಿ ಪ್ರತಿಶಾಲೆಯಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಸರಾಸರಿ ಸಂಖ್ಯೆ ಕ್ರಮವಾಗಿ 1,222 ಮತ್ತು 808

ಸಚಿವಾಲಯ ಹೇಳುವುದೇನು?

- ಬೋಧನಾ ಗುಣಮಟ್ಟ ಸುಧಾರಣೆಗೆ ಸರ್ಕಾರ ಹಲವಾರು ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ. ಶಾಲೆಗಳ ವಿಲೀನದಂತಹ ಕ್ರಮಗಳ ಮೂಲಕ 'ಶಾಲೆಗಳ ಮರುಹೊಂದಾಣಿಕೆ' ಕಾರ್ಯ ಜಾರಿಗೊಳಿಸಲಾಗಿದೆ
- ಏಕೋಪಾಧ್ಯಾಯ ಶಾಲೆಗಳು ಬೋಧನೆ-ಕಲಿಕೆ ಪ್ರಕ್ರಿಯೆಗೆ ಅಡ್ಡಿ ಉಂಟು ಮಾಡುತ್ತವೆ. ಶೂನ್ಯ ದಾಖಲಾತಿ ಇರುವ ಶಾಲೆಗಳ ಶಿಕ್ಷಕರನ್ನು ಏಕೋಪಾಧ್ಯಾಯ ಶಾಲೆಗಳಿಗೆ ನಿಯೋಜನೆ ಮಾಡಲಾಗುತ್ತಿದೆ

## ❖ ಡೀಪ್‌ಫೇಕ್, ಎ.ಐ ನಿಯಂತ್ರಣಕ್ಕೆ ಕಾನೂನು ಅಗತ್ಯ: ನ್ಯಾ. ನಾಗರತ್ನ

**ಸಂದರ್ಭ: ಡೀಪ್‌ಫೇಕ್ ಮತ್ತು ಎ.ಐ ಮೂಲಕ ಮಕ್ಕಳ ಮೇಲೆ ನಡೆಯಬಹುದಾದ ದೌರ್ಜನ್ಯ ಗಳ ನಿಗ್ರಹಕ್ಕೆ ಸೂಕ್ತ ಕ್ರಮ ಕೈಗೊಳ್ಳುವುದು ಅತ್ಯಗತ್ಯ ವಾಗಿದೆ ಎಂದು ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಬಿ.ವಿ ನಾಗರತ್ನ ಅವರು ಹೇಳಿದರು.**

- ಕಾರ್ಯಕ್ರಮವೊಂದರಲ್ಲಿ ಮಾತ ನಾಡಿದ ಅವರು, 'ಸೂಕ್ತ ಮುನ್ನೆಚ್ಚ ರಿಕೆಯ ಮೂಲಕ ನಾವು ದೌರ್ಜನ್ಯ ಮತ್ತು ಮಕ್ಕಳ ಕಳ್ಳಸಾಗಾಣಿಕೆಯನ್ನು ತಡೆಯಲು ಸಾಧ್ಯವಿದೆ' ಎಂದು ತಿಳಿಸಿದರು.
- 'ವಿಕಾಸಗೊಳ್ಳುತ್ತಿರುವ ಹೊಸ ತಂತ್ರಜ್ಞಾನಗಳು ಉಂಟು ಮಾಡುತ್ತಿರುವ ಅಪಾಯಗಳು ಜಗತ್ತಿಗೆ ತೂಗುಗತ್ತಿ ಯಂತಾಗಿವೆ. ಮಕ್ಕಳ ಮೇಲಿನ ದೌರ್ಜನ್ಯಕ್ಕೆ ಸಂಬಂಧಿಸಿದ ವಿಚಾರ ಗಳ ಮೇಲೆ ನಿಗಾ ಇಡಲು ಮತ್ತು ಆನ್‌ಲೈನ್ ವೇದಿಕೆಗಳಲ್ಲಿ ವಯಸ್ಸಿನ ಮಿತಿ ಹೇರಲು ಕಾನೂನು ರೂಪಿಸಬೇಕು' ಎಂದರು.
- 'ಎಐ ಮತ್ತು ಇತರ ತಂತ್ರಜ್ಞಾನಗಳು ಹೆಣ್ಣುಮಕ್ಕಳ ಮೇಲೆ ಹೇಗೆ ಪರಿಣಾಮ ಬೀರುತ್ತದೆ ಮತ್ತು ಅವುಗಳನ್ನು ಹೇಗೆ ನಿಗ್ರಹಿಸಬಹುದು ಎಂಬುವುದರ ಕುರಿತು ಅಧ್ಯಯನಕ್ಕೆ 'ಹೆಣ್ಣುಮಕ್ಕಳ ವಿರುದ್ಧದ ಎ.ಐ ಸೈಬರ್ ಅಪರಾಧಗಳ ನಿಗ್ರಹ ಸಲಹಾ ಸಮಿತಿ' ರಚನೆಯ ಸಾಧ್ಯತೆಯನ್ನು ಸುಪ್ರೀಂ ಕೋರ್ಟ್ ಪರಿಗಣಿಸಬಹುದು' ಎಂದು ತಿಳಿಸಿದರು.

## ❖ ನೆರವು ಸಾಮಗ್ರಿ: ಗಾಜಾ ಪ್ರವೇಶಕ್ಕೆ ಸಿದ್ಧತೆ

**ಸಂದರ್ಭ: ಗಾಜಾ ಪಟ್ಟಿಯೊಳಗೆ ಹೆಚ್ಚಿನ ನೆರವು ಸಾಮಗ್ರಿಗಳನ್ನು ಕೊಂಡೊಯ್ಯುವ ಸಿದ್ಧತೆಗಳು ಭಾನುವಾರ ಆರಂಭಗೊಂಡಿವೆ. 'ಭಾನುವಾರದಿಂದ ಪ್ರತಿ ದಿನವು ನೆರವು ಸಾಮಗ್ರಿಗಳನ್ನು ಹೊತ್ತ 600 ಟ್ರಕ್‌ಗಳು ಗಾಜಾ ಪ್ರವೇಶಿಸಲಿವೆ' ಎಂದು ಇಸ್ರೇಲ್ ಹೇಳಿದೆ.**


- ಕದನ ವಿರಾಮದ ಒಪ್ಪಂದದಂತೆ ಸಕಲ ಸಿದ್ಧತೆ ನಡೆಯುತ್ತಿದೆ. 'ನಾವು ಸುಮಾರು 400 ಟ್ರಕ್‌ಗಳನ್ನು ಕಳುಹಿಸುತ್ತಿದ್ದೇವೆ' ಎಂದು ಈಜಿಪ್ಟ್ ಹೇಳಿದೆ. ಆದರೆ, ಇಸ್ರೇಲ್ ಸೇನೆಯ ಪರಿಶೀಲನೆ ಬಳಿಕವೇ ಎಲ್ಲ ಟ್ರಕ್ ಗಳು ಗಾಜಾ ಪ್ರವೇಶಿಸಲಿವೆ.

Dr Rajkumar IAS Academy

- ಇಸ್ರೇಲ್ ನೆರವು ಕೇಂದ್ರ ಧ್ವಂಸ: ವಿಶ್ವಸಂಸ್ಥೆಯ ನೆರವು ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿ ಇಸ್ರೇಲ್ ತನ್ನದೇ ನೆರವು ಕೇಂದ್ರಗಳನ್ನು ಸ್ಥಾಪಿಸಿತ್ತು. ಇದಕ್ಕೆ ಅಮೆರಿಕದ ಬೆಂಬಲವೂ ಇತ್ತು. ಇವುಗಳನ್ನು 'ಗಾಜಾ ಮಾನವೀಯ ನೆರವು ಫೌಂಡೇಶನ್' ನಿರ್ವಹಿಸುತ್ತಿತ್ತು.ಗಾಜಾ ಪಟ್ಟಿಯ ವಿವಿಧೆಡೆ ಸ್ಥಾಪಿಸಲಾಗಿದ್ದ ಈ ಕೇಂದ್ರಗಳನ್ನು ಜನರು ಕಿತ್ತುಹಾಕುತ್ತಿದ್ದಾರೆ. ಈ ಕೇಂದ್ರಕ್ಕೆ ಬರುವ ಜನರನ್ನು ನಿಯಂತ್ರಿಸುವ ಸಲುವಾಗಿ ಅಳವಡಿಸಲಾಗಿದ್ದ ಬೇಲಿಗಳನ್ನೂ ಕಿತ್ತೆಸೆದಿದ್ದಾರೆ.
- 'ನೆರವು ಕಾರ್ಯಗಳಲ್ಲಿ ಹಮಾಸ್ ಮಧ್ಯ ಪ್ರವೇಶಿಸುತ್ತಿತ್ತು, ಇದನ್ನು ತಡೆಯಲು ಇಂಥ ಕೇಂದ್ರಗಳನ್ನು ತೆರೆಯಲಾಗಿತ್ತು. ಇವುಗಳು ಉತ್ತಮ ಕೆಲಸ ಮಾಡಿವೆ' ಎಂದು ಇಸ್ರೇಲ್ ಮತ್ತು ಅಮೆರಿಕ ಹೊಗಳಿವೆ. ಈ ಕೇಂದ್ರದ ಮುಂದೆ ಆಹಾರಕ್ಕಾಗಿ ನಿಂತಿದ್ದ ನೂರಾರು ಜನರನ್ನು ಇಸ್ರೇಲ್ ಸೇನೆ ಹತ್ಯೆ ಮಾಡಿತ್ತು.

<u>ಇಸ್ರೇಲ್‌ಗೆ ಟ್ರಂಪ್ ಭೇಟಿ</u>

- ಕದನ ವಿರಾಮ ಒಪ್ಪಂದಕ್ಕೆ ಬರುವಂತೆ ಇಸ್ರೇಲ್ ಮತ್ತು ಹಮಾಸ್ ಸಂಘಟನೆಯನ್ನು ಒತ್ತಾಯಿಸಿದ್ದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಸೋಮವಾರ ಇಸ್ರೇಲ್‌ಗೆ ಭೇಟಿ ನೀಡಲಿದ್ದಾರೆ. ಒತ್ತೆಯಾಳುಗಳ ಕುಟುಂಬಗಳನ್ನು ಅವರು ಇಸ್ರೇಲ್ ಸಂಸತ್ತಿನಲ್ಲಿ ಭೇಟಿ ಮಾಡಲಿದ್ದಾರೆ. ಶ್ವೇತಭವನವು ಬಿಡುಗಡೆ ಮಾಡಿದ ಅಧ್ಯಕ್ಷರ ಕಾರ್ಯಕ್ರಮ ಪಟ್ಟಿಯಲ್ಲಿ ಈ ಮಾಹಿತಿ ಇದೆ.
- ಇಸ್ರೇಲ್ ಬಳಿಕ ಟ್ರಂಪ್ ಅವರು ಈಜಿಪ್ಟ್‌ಗೆ ಭೇಟಿ ನೀಡಲಿದ್ದಾರೆ. ಪ್ರಾದೇಶಿಕ ಹಾಗೂ ಅಂತರರಾಷ್ಟ್ರೀಯ ನಾಯಕರು ಪಾಲ್ಗೊಳ್ಳುವ 'ಶಾಂತಿ ಶೃಂಗಸಭೆ'ಯಲ್ಲಿ ಟ್ರಂಪ್ ಸೋಮವಾರ ಭಾಗವಹಿಸಲಿದ್ದಾರೆ ಎಂದು ಈಜಿಪ್ಟ್ ಅಧ್ಯಕ್ಷ ಅಬ್ದುಲ್ ಫತ್ತಾಹ್ ಅಲ್ ಸೀಸಿ ಕಚೇರಿ ಮಾಹಿತಿ ನೀಡಿದೆ.

## ❖ 20 ಒತ್ತೆಯಾಳು ಬಿಡುಗಡೆ: ಪ್ಯಾಲೆಸ್ಟೀನ್ ಕೈದಿಗಳ ಬಿಡುಗಡೆ ಮಾಡಿದ ಇಸ್ರೇಲ್

**ಸಂದರ್ಭ: ಗಾಜಾದಲ್ಲಿ ಒತ್ತೆಯಾಳು ಗಳಾಗಿದ್ದ ಕೊನೆಯ 20 ಮಂದಿಯನ್ನು ಕದನ ವಿರಾಮ ಒಪ್ಪಂದದ ಭಾಗವಾಗಿ ಹಮಾಸ್ ಬಿಡುಗಡೆ ಮಾಡಿದೆ.**

- ಮೊದಲ ಹಂತದ ಒತ್ತೆಯಾಳುಗಳ ಹಸ್ತಾಂತರ ಪ್ರಕ್ರಿಯೆ ಪೂರ್ಣಗೊಂಡಿತು ಎಂಬ ಸುದ್ದಿ ಇಸ್ರೇಲ್ ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿದ್ದಂತೆಯೇ 'ಹೋಸ್ಟೇಜಸ್ ಸ್ಕ್ವೇರ್'ನಲ್ಲಿ ಸೇರಿದ್ದ ಕುಟುಂಬಸ್ಥರು ಆನಂದಬಾಷ್ಪ ಸುರಿಸಿದರು. ಒತ್ತೆಯಾಳುಗಳು ತಮ್ಮ ಕುಟುಂಬ ಮತ್ತು ಮನೆಯನ್ನು ಸೇರುವ ಫೋಟೊವನ್ನು ಇಸ್ರೇಲ್ ಬಿಡುಗಡೆ ಮಾಡಿದೆ.
- ಪ್ಯಾಲೆಸ್ಟೀನ್ ಕೈದಿಗಳ ಬಿಡುಗಡೆ: ಇನ್ನೊಂದೆಡೆ, ಇಸ್ರೇಲ್ ಜೈಲುಗಳಲ್ಲಿದ್ದ ಪ್ಯಾಲೆಸ್ಟೀನ್ ಕೈದಿಗಳನ್ನು ಹೊತ್ತ ಬಸ್‌ಗಳು ವೆಸ್ಟ್‌ಬ್ಯಾಂಕ್‌ನ ರಾಮಲ್ಲಾಹ್ ಮತ್ತು ಗಾಜಾಪಟ್ಟಿಗೆ ಬಂದಿವೆ ಎಂದು ಹಮಾಸ್‌ನ ಕೈದಿಗಳ ಕಚೇರಿಯು ತಿಳಿಸಿದೆ.
- ಹಮಾಸ್ ತನ್ನ ಬಳಿ ಒತ್ತೆಯಾಳಾಗಿ ಇರಿಸಿಕೊಂಡಿದ್ದ ಜನರನ್ನು ಬಿಡುಗಡೆ ಮಾಡಿದ ನಂತರ ಇಸ್ರೇಲ್ 1,900ಕ್ಕೂ ಹೆಚ್ಚು ಕೈದಿಗಳನ್ನು ಬಿಡುಗಡೆ ಮಾಡಿದೆ.
- ಶಾಂತಿಸ್ಥಾಪನೆಗೆ ಕಾರ್ಯೋನ್ಮುಖರಾಗಿ: 'ಯುದ್ಧಭೂಮಿಯಲ್ಲಿ ಸಾಧಿಸುವುದಕ್ಕೆ ಏನೂ ಇಲ್ಲ, ಪಶ್ಚಿಮ ಏಷ್ಯಾದಲ್ಲಿ ಶಾಂತಿ ಸ್ಥಾಪನೆಗೆ ಕಾರ್ಯೋನ್ಮುಖರಾಗಿ' ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇಸ್ರೇಲ್ ಸಂಸದರಿಗೆ ಕರೆ ನೀಡಿದರು.
- 'ಇಸ್ರೇಲ್ ಶಸ್ತ್ರ ಬಳಸಿ ಪಡೆಯಬೇಕಾಗಿದ್ದನ್ನು ನಮ್ಮ ನೆರವಿನಿಂದ ಪಡೆದುಕೊಂಡಿದೆ' ಎಂದು ಹೇಳಿದರು. ಸಂಘರ್ಷದಿಂದ ನಲುಗಿರುವ ಗಾಜಾವನ್ನು ಮರುಸ್ಥಾಪಿಸುವುದಾಗಿ ಭರವಸೆ ನೀಡಿದರು. ಭಯೋತ್ಪಾದನೆ ಮತ್ತು ಹಿಂಸಾಚಾರದ ಪಥವನ್ನು ಬದಲಿಸುವಂತೆ ಪ್ಯಾಲೆಸ್ಟೀನಿಯನ್ನರನ್ನು ಒತ್ತಾಯಿಸಿದರು.
- ಒತ್ತೆಯಾಳುಗಳ ಕುಟುಂಬಗಳನ್ನು ಟ್ರಂಪ್ ಅವರು ಇಸ್ರೇಲ್‌ನಲ್ಲಿ ಭೇಟಿ ಮಾಡಲಿದ್ದಾರೆ. ಬಳಿಕ ಅವರು ಅವರು ಈಜಿಪ್ಟ್‌ಗೆ ಭೇಟಿ ನೀಡಲಿದ್ದಾರೆ ಎಂದು ಶ್ವೇತಭವನವು ಮಾಹಿತಿ ನೀಡಿದೆ.

## ❖ 303 ಗ್ರಾಮ ಜಿಬಿಎ ಯೋಜನಾ ಪ್ರದೇಶ

**ಸಂದರ್ಭ: ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ (ಬಿಡಿಎ) ನಗರ ಯೋಜನೆಯ ಜವಾಬ್ದಾರಿಯಿಂದ ಮುಕ್ತಗೊಳಿಸ ಲಾಗಿದೆ.**

- 'ಗ್ರೇಟರ್ ಬೆಂಗಳೂರು ಪ್ರದೇಶ'ವನ್ನು (ಹಿಂದಿನ ಬಿಬಿಎಂಪಿ) 'ಗ್ರೇಟರ್ ಬೆಂಗಳೂರು ಸ್ಥಳೀಯ ಯೋಜನಾ ಪ್ರದೇಶ'ವೆಂದು ಘೋಷಿಸ ಲಾಗಿದ್ದು, ನಗರ ಯೋಜನೆಯ ಸಂಪೂರ್ಣ ಜವಾಬ್ದಾರಿಯನ್ನು ಜಿಬಿಎಗೆ ವಹಿಸಲಾಗಿದೆ.
- ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ– 1961 ರಂತೆ 'ಗ್ರೇಟರ್ ಬೆಂಗಳೂರು ಸ್ಥಳೀಯ ಯೋಜನಾ ಪ್ರದೇಶ'ವನ್ನು ಅಕ್ಟೋಬರ್ 10ರಂದು ಘೋಷಿಸಿ ನಗರಾಭಿವೃದ್ಧಿ ಇಲಾಖೆ ಆದೇಶ ಹೊರಡಿಸಿದೆ.
- ಬಿಡಿಎ ಹಾಗೂ ಸರ್ಕಾರದಿಂದ ಈ ಹಿಂದಿನ ಎಲ್ಲ ನಿಯಮಗಳು, ಆದೇಶಗಳು, ನಿರ್ದೇಶನಗಳು, ಅನುಮೋದನೆ/ ಮಂಜೂರಾತಿಗಳು ಮುಂದುವರಿಯಲಿವೆ. 'ಗ್ರೇಟರ್ ಬೆಂಗಳೂರು ಸ್ಥಳೀಯ ಯೋಜನಾ ಪ್ರದೇಶ'ದ ಮಹಾಯೋಜನೆ ಅನು ಮೋದನೆ ಆಗುವವರೆಗೂ ಪರಿಷ್ಕೃತ ಮಾಸ್ಟರ್ ಪ್ಲಾನ್ (ಆರ್‌ಎಂಪಿ–2015) ಮತ್ತು ವಲಯ ನಿಯಮಾವಳಿಗಳನ್ನು ಅನುಸರಿಸಬೇಕು ಎಂದು ಹೇಳಲಾಗಿದೆ.
- ಬಿಡಿಎಯಿಂದ ನಗರ ಯೋಜನೆ ಜವಾಬ್ದಾರಿಯನ್ನು ಜಿಬಿಎಗೆ ವಹಿಸ ಬೇಕೆಂಬ ನಿರ್ಣಯ ಜಿಬಿಎ ಮೊದಲ ಸಭೆಯಲ್ಲಿ ಅಂಗೀಕರಿಸಲಾಗಿತ್ತು. ಆ ಪ್ರಕಾರ ಅಧಿಸೂಚನೆ ಹೊರಡಿಸಲಾಗಿದೆ.

Dr Rajkumar IAS/KAS Academy

- ಜಿಬಿಎ 'ಯೋಜನಾ ಪ್ರಾಧಿಕಾರ'ವೂ ಆಗಿದ್ದು, ತನ್ನ ವ್ಯಾಪ್ತಿಯಲ್ಲಿನ ವಸತಿ ಬಡಾವಣೆಗಳು, ಕೈಗಾರಿಕಾ ಬಡಾವಣೆ ಗಳನ್ನು ಅನುಮೋದಿಸುವ ಅಧಿಕಾರ ವನ್ನು ಹೊಂದಿದೆ. ಅಲ್ಲದೆ ನಗರದ ಮಾಸ್ಟರ್ ಪ್ಲಾನ್ ತಯಾರಿಸುವ ಜವಾಬ್ದಾರಿಯನ್ನು ಹೊಂದಿದ್ದು, ಅದನ್ನು ನಗರ ಪಾಲಿಕೆಗಳು ಕಟ್ಟುನಿಟ್ಟಾಗಿ ಅನುಸರಿಸುವಂತೆ ಮೇಲ್ವಿಚಾರಣೆ ಮಾಡಲಿದೆ.
- ಜಿಬಿಎ ರೂಪಿಸುವ ಮಾಸ್ಟರ್ ಪ್ಲಾನ್‌ನಂತೆಯೇ, ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಐಎಡಿಬಿ) ತನ್ನ ವ್ಯಾಪ್ತಿಯ ಕೈಗಾರಿಕಾ ಬಡಾವಣೆ ಹಾಗೂ ಕಟ್ಟಡಗಳ ನಕ್ಷೆಯನ್ನು ಅನುಮೋದಿಸಬೇಕಾಗುತ್ತದೆ.
- ಯೋಜನಾ ಪ್ರಾಧಿಕಾರವಾಗಿರುವ ಜಿಬಿಎ ತನ್ನ ವಾರ್ಷಿಕ ವರದಿ, ಲೆಕ್ಕ ತಪಾಸಣಾ ವರದಿ, ಆಯವ್ಯಯವನ್ನು ಪ್ರತಿ ಹಣಕಾಸು ವರ್ಷದ ಅಂತ್ಯಕ್ಕೆ ಸರ್ಕಾರಕ್ಕೆ ಸಲ್ಲಿಸಬೇಕು. ಸ್ಥಳೀಯ ಯೋಜನಾ ಪ್ರಕ್ರಿಯೆಗಳನ್ನು ನಿರ್ವಹಿಸಲು ಜಿಬಿಎ ಮುಖ್ಯ ಆಯುಕ್ತರು ಅಧಿಕಾರಿಗಳ ಸಮಿತಿಯನ್ನು ರಚಿಸಲಿದ್ದಾರೆ. ಈಗಾಗಲೇ ಜಿಬಿಎಯಲ್ಲಿ ನಗರ ಯೋಜನೆ ಅಧಿಕಾರಿಗಳಿದ್ದು, ಅವರನ್ನು ಒಳಗೊಂಡ ಸಮಿತಿ ಕಾರ್ಯನಿರ್ವಹಿಸಲಿದೆ.

**<u>ಬಿಎಂಐಸಿಎಪಿಎ ಸೇರಿಲ್ಲ</u>**

- 'ಗ್ರೇಟರ್ ಬೆಂಗಳೂರು ಸ್ಥಳೀಯ ಯೋಜನಾ ಪ್ರದೇಶ'ದಲ್ಲಿ ಬೆಂಗಳೂರು– ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್‌ನ ಸ್ಥಳೀಯ ಯೋಜನಾ ಪ್ರದೇಶವನ್ನು (ಬಿಎಂಐಸಿಎಪಿಎ) ಸೇರಿಸಿಲ್ಲ. ಹೀಗಾಗಿ, 719.29 ಚದರ ಕಿ.ಮೀ ವ್ಯಾಪ್ತಿಯ ಜಿಬಿಎ ಪ್ರದೇಶದಲ್ಲಿ, 683 ಚದರ ಕಿ.ಮೀ ಮಾತ್ರ ಈಗ 'ಗ್ರೇಟರ್ ಬೆಂಗಳೂರು ಸ್ಥಳೀಯ ಯೋಜನಾ ಪ್ರದೇಶ'ವಾಗಿದೆ. ನೈಸ್‌ನೊಂದಿಗೆ ಭೂ ವ್ಯಾಜ್ಯ ಇರುವುದರಿಂದ ಈ ಪ್ರದೇಶವನ್ನು ಸದ್ಯಕ್ಕೆ ಸೇರಿಸಿಲ್ಲವಾದರೂ, ಮುಂದಿನ ದಿನಗಳಲ್ಲಿ ಸೇರಿಸಲಾಗುತ್ತದೆ ಎಂದು ನಗರ ಯೋಜನೆ ವಿಭಾಗದ ಅಧಿಕಾರಿಗಳು ತಿಳಿಸಿದರು.

## ❖ 'ಕ್ವಾಂಟಮ್ ಆರ್ಥಿಕ ರಾಜ್ಯವಾಗಿ ಅಭಿವೃದ್ಧಿ'

**ಸಂದರ್ಭ: 2035ರ ವೇಳೆಗೆ ಕರ್ನಾಟಕವನ್ನು 20 ಶತಕೋಟಿ ಡಾಲರ್ ಮೊತ್ತದ ವಹಿವಾಟಿನ 'ಕ್ವಾಂಟಮ್ ಆರ್ಥಿಕ ರಾಜ್ಯ'ವಾಗಿ ಅಭಿವೃದ್ಧಿಪಡಿಸಲಾಗುವುದು. ಅಲ್ಲದೇ, ಬೆಂಗಳೂರು ನಗರದಲ್ಲಿ ಕ್ಯೂ–ಸಿಟಿ (ಕ್ವಾಂಟಮ್ ಸಿಟಿ) ಸ್ಥಾಪಿಸಲು ಭೂಮಿ ನಿಗದಿಪಡಿಸಲಾಗಿದೆ ಎಂದು ವಿಜ್ಞಾನ–ತಂತ್ರಜ್ಞಾನ ಸಚಿವ ಎನ್.ಎಸ್ ಬೋಸರಾಜು ಹೇಳಿದ್ದಾರೆ.**

- ಸ್ವಿಟ್ಜರ್ಲೆಂಡ್‌ನ ಜಿನಿವಾದ ಬಯೋಟೆಕ್ ಕ್ಯಾಂಪಸ್‌ನಲ್ಲಿ ಆಯೋಜಿಸ ಲಾಗಿದ್ದ 'ಸ್ವಿಸ್‌ನೆಕ್ಸ್ ಕ್ವಾಂಟಮ್ ಸಮಿಟ್'ನಲ್ಲಿ ಭಾಗವಹಿಸಿ ಅವರು ಮಾತನಾಡಿದರು.
- ಕ್ವಾಂಟಮ್ ಕ್ಷೇತ್ರದಲ್ಲಿ ಸಹಭಾಗಿತ್ವ, ಸಂಶೋಧನೆ ಹಾಗೂ ಆವಿಷ್ಕಾರಕ್ಕೆ ವಿಪುಲ ಅವಕಾಶಗಳಿದ್ದು, ಸಹಭಾಗಿತ್ವದ ಸಂಶೋಧನೆಗೆ ಕರ್ನಾಟಕ ರಾಜ್ಯ ಸರ್ಕಾರದ ಜೊತೆ ಕೈಜೋಡಿಸುವಂತೆ ಭೋಸರಾಜು ಸಲಹೆ ನೀಡಿದರು.
- ಭಾರತ ಸರ್ಕಾರ ಸುಮಾರು ₹6,000 ಕೋಟಿ ವೆಚ್ಚದಲ್ಲಿ ರಾಷ್ಟ್ರೀಯ ಕ್ವಾಂಟಮ್ ಮಿಷನ್ ಆರಂಭಿಸಿದೆ. ಈ ಮಿಷನ್ ನಾವೀನ್ಯ, ಕೌಶಲ ಮತ್ತು ಸ್ಟಾರ್ಟ್ ಅಪ್ ಬೆಂಬಲದ ಮೂಲಕ 50ರಿಂದ 1000 ಕ್ಯೂ ಬಿಟ್ ಕ್ವಾಂಟಮ್ ಕಂಪ್ಯೂಟರ್‌ಗಳನ್ನು ಅಭಿವೃದ್ಧಿಪಡಿಸುವುದು, ಸುರಕ್ಷಿತ ಕ್ವಾಂಟಮ್ ಸಂವಹನ ಜಾಲಗಳನ್ನು ನಿರ್ಮಿಸುವುದು ಮತ್ತು ಕಂಪ್ಯೂಟಿಂಗ್, ಸಂವಹನ, ಸಂವೇದನೆ ಮತ್ತು ಸಾಮಗ್ರಿಗಳಿಗಾಗಿ ರಾಷ್ಟ್ರೀಯ ಕೇಂದ್ರಗಳನ್ನು ಸ್ಥಾಪಿಸುವ ಗುರಿಯನ್ನು ಹೊಂದಿದೆ. ಕರ್ನಾಟಕ ಈ ರಾಷ್ಟ್ರಯ ದೃಷ್ಟಿಕೋನವನ್ನು ಅಳವಡಿಸಿಕೊಂಡಿ ರುವ ಪ್ರಮುಖ ರಾಜ್ಯವಾಗಿ ಹೊರ ಹೊಮ್ಮಿದೆ ಎಂದರು.

- ಇದೇ ಸಂದರ್ಭದಲ್ಲಿ ಬೋಸರಾಜು ಅವರು ಕ್ಯೂ–ಸಿಟಿ ಫೇಸ್ ಒನ್‌ನ ಪರಿಕಲ್ಪನೆಯ ವಿಡಿಯೊವನ್ನು ಅನಾವರಣಗೊಳಿಸಿದರು.

## ❖ ‘ಸಂಬಂಧ ವೃದ್ಧಿಗೆ ರೂಪುರೇಷೆ’: ಕೆನಡಾ ವಿದೇಶಾಂಗ ಸಚಿವೆ ಅನಿತಾ ಜತೆಗೆ ಸಚಿವ ಜೈಶಂಕರ್ ಮಾತುಕತೆ

**ಸಂದರ್ಭ: ‘ಭಾರತ ಮತ್ತು ಕೆನಡಾ ನಡುವಿನ ಸಂಬಂಧ, ಒಪ್ಪಂದ ಬಲಪಡಿಸಲು ಉಭಯ ರಾಷ್ಟ್ರಗಳು ಮಹತ್ವಾಕಾಂಕ್ಷೆಯ ರೂಪುರೇಷೆಗಳನ್ನು ಸಿದ್ಧಪಡಿಸಿವೆ’ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಎಸ್.ಜೈಶಂಕರ್ ಹೇಳಿದ್ದಾರೆ.**

- ಭಾರತ ಪ್ರವಾಸ ಕೈಗೊಂಡಿರುವ ಕೆನಡಾ ವಿದೇಶಾಂಗ ಸಚಿವೆ ಅನಿತಾ ಆನಂದ್ ಅವರ ಜತೆಗೆ ವ್ಯಾಪಾರ, ಹೂಡಿಕೆ, ಗಣಿ, ಇಂಧನ ಸೇರಿ ವಿವಿಧ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಮಾತುಕತೆ ನಡೆಸಿದ ಬಳಿಕ ಆ ಬಗ್ಗೆ ಮಾಧ್ಯಮಗಳಿಗೆ ಜೈಶಂಕರ್ ಮಾಹಿತಿ ನೀಡಿದ್ದಾರೆ.
- ‘ಕಳೆದ ಕೆಲವು ತಿಂಗಳಲ್ಲಿ ಭಾರತ ಮತ್ತು ಕೆನಡಾ ಸಂಬಂಧವು ವೃದ್ಧಿ ಸುತ್ತಿದ್ದು, ಇದನ್ನು ಮತ್ತಷ್ಟು ಬಲಗೊಳಿಸು ವುದಕ್ಕೆ ಅಗತ್ಯ ಕಾರ್ಯವಿಧಾನಗಳನ್ನು ಮರು ರೂಪಿಸಲು ನಾವು ಕೆಲಸ ಮಾಡುತ್ತಿದ್ದೇವೆ’ ಎಂದು ತಿಳಿಸಿದರು.
- ಅಲ್ಲದೇ, ಕೃಷಿ, ವಿಜ್ಞಾನ, ಕೃತಕ ಬುದ್ಧಿಮತ್ತೆ ಕ್ಷೇತ್ರಗಳಲ್ಲೂ ಸಹಕಾರ ಹೆಚ್ಚಿಸುವ ನಿಟ್ಟಿನಲ್ಲಿ ಮಾತುಕತೆ ನಡೆದಿದೆ ಎಂದಿದ್ದಾರೆ.

IAS/KAS Academy



# ಮುಟ್ಟಿನ ರಜೆ ಮಹಿಳೆಯರ ಹಕ್ಕು

ಕರ್ನಾಟಕ ಸರ್ಕಾರವು 'ಮುಟ್ಟಿನ ರಜೆ' ನೀಡುವ ನಿರ್ಧಾರ ಕೈಗೊಳ್ಳುವ ಮೂಲಕ ಮಹಿಳೆಯರ ಬಹುಕಾಲದ ಬೇಡಿಕೆಗೆ ಸ್ಪಂದಿಸಿದೆ. ಉದ್ಯೋಗನಿರತ ಮಹಿಳೆಯರಿಗೆ ಮುಟ್ಟಿನ ರಜೆ ನೀಡಿದ ಮೊದಲ ರಾಜ್ಯ ಕರ್ನಾಟಕ ಅಲ್ಲ. ಬಿಹಾರ, ಕೇರಳ, ಒಡಿಶಾ, ಸಿಕ್ಕಿಂ ರಾಜ್ಯಗಳಲ್ಲಿ ವಿವಿಧ ರೂಪಗಳಲ್ಲಿ ಮುಟ್ಟಿನ ರಜೆ ಸೌಲಭ್ಯ ಇದೆ. ಆದಾಗ್ಯೂ, ದೇಶದ ವ್ಯಾಪ್ತಿಯಲ್ಲಿ ಈ ಕುರಿತು ಆಗಿರುವ ಸಾಧನೆ ಕಡಿಮೆ ಎಂದೇ ಹೇಳಬೇಕು. ಯಾವ ರಾಜ್ಯದಲ್ಲಿ ಯಾವ ವಲಯದಲ್ಲಿ ಮುಟ್ಟಿನ ರಜೆಯ ಸೌಲಭ್ಯ ಕಲ್ಪಿಸಲಾಗಿದೆ; ರಾಜ್ಯದಲ್ಲಿ ಮುಟ್ಟಿನ ರಜೆ ನೀತಿ ಜಾರಿಯ ವಿಚಾರದಲ್ಲಿ ಇರುವ ತೊಡಕುಗಳೇನು ಎನ್ನುವ ವಿವರಗಳು ಇಲ್ಲಿವೆ

ಪ್ರಜಾವಾಣಿ ವಾರ್ತೆ



ಮಹಿಳಾ ಉದ್ಯೋಗಿಗಳಿಗೆ ತಿಂಗಳಿಗೊಂದು ವೇತನಸಹಿತ ಮುಟ್ಟಿನ ರಜೆ ನೀಡುವ 'ಮುಟ್ಟಿನ ರಜೆ ನೀತಿ–2025' ಅನ್ನು ರಾಜ್ಯ ಸಚಿವ ಸಂಪುಟ ಅಂಗೀಕರಿಸಿದೆ. ಈ ಬಗ್ಗೆ ದೇಶವ್ಯಾಪಿ ಮೆಚ್ಚುಗೆ ವ್ಯಕ್ತವಾಗಿದ್ದು, ಮಹಿಳಾ ಕಾರ್ಯಪಡೆಯನ್ನು ಒಳಗೊಳ್ಳುವ ಮತ್ತು ಲಿಂಗಸೂಕ್ಷ್ಮತೆಯನ್ನು ಬೆಳೆಸುವ ದಿಸೆಯಲ್ಲಿ ಅತ್ಯುತ್ತಮ ಕ್ರಮ ಎನ್ನಲಾಗುತ್ತಿದೆ. ಸರ್ಕಾರಿ, ಖಾಸಗಿ ವಲಯಗಳಿಗೂ ಅನ್ವಯವಾಗುವಂತೆ ಈ ನಿರ್ಧಾರ ಕೈಗೊಂಡ ಮೊದಲ ರಾಜ್ಯ ಕರ್ನಾಟಕ.

ನೀತಿ ಜಾರಿಯಾದ ನಂತರ ರಾಜ್ಯದ ಸರ್ಕಾರಿ, ಗಾರ್ಮೆಂಟ್ಸ್, ಐಟಿ, ಬಹುರಾಷ್ಟ್ರೀಯ ಕಂಪನಿಗಳು ಮತ್ತು ಖಾಸಗಿ ವಲಯದ ಉದ್ಯೋಗಿಗಳಿಗೆ ತಿಂಗಳಲ್ಲಿ ಒಂದು ದಿನ ಮುಟ್ಟಿನ ರಜೆಯ ಸೌಲಭ್ಯ ದೊರೆಯಲಿದೆ. ಕರ್ನಾಟಕದಲ್ಲಿ ವರ್ಷಕ್ಕೆ ಆರು ದಿನ ವೇತನಸಹಿತ ಮುಟ್ಟಿನ ರಜೆ ನೀಡಬೇಕು ಎಂದು 2024ರಲ್ಲಿ ಮುಟ್ಟಿನ ರಜೆ ನೀತಿ ಸಮಿತಿ ಶಿಫಾರಸು ಮಾಡಿತ್ತು. ನಂತರ ರಜೆಯ ದಿನಗಳನ್ನು ತಿಂಗಳಿಗೆ ಒಂದರಂತೆ 12ಕ್ಕೆ ಏರಿಸಿ, ಆ ನಿಯಮವನ್ನು ಸಚಿವ ಸಂಪುಟದಲ್ಲಿ ಅಂಗೀಕರಿಸಲಾಗಿದೆ.

ಮಹಿಳೆಯರಿಗೆ ಮುಟ್ಟಿನ ರಜೆಯನ್ನು ಕಾನೂನುಬದ್ಧಗೊಳಿಸಲು ನೀತಿ ರೂಪಿಸುವಂತೆ ಸುಪ್ರೀಂ ಕೋರ್ಟ್, ರಾಜ್ಯಗಳಿಗೆ ಹಿಂದೆಯೇ ಸೂಚಿಸಿತ್ತು. ಆದಾಗ್ಯೂ, ಬೆರಳೆಣಿಕೆಯ ರಾಜ್ಯಗಳಲ್ಲಿ ಮಾತ್ರ ಕೆಲವು ವಲಯಗಳಿಗೆ ಸೀಮಿತಗೊಳಿಸಿ ಮುಟ್ಟಿನ ರಜೆಯ ಸೌಲಭ್ಯ ಕಲ್ಪಿಸಲಾಗಿದೆ.

**ಬಿಹಾರ:** ಉದ್ಯೋಗಿಗಳಿಗೆ ಮುಟ್ಟಿನ ರಜೆ ಸೌಲಭ್ಯ ನೀಡಿದ ಮೊದಲ ರಾಜ್ಯ ಬಿಹಾರ. ಅಲ್ಲಿ, ಮುಟ್ಟಿನ ಸಂದರ್ಭದಲ್ಲಿ ಸತತ ಎರಡು ದಿನ ರಜೆ ನೀಡಲಾಗುತ್ತಿದೆ. ಆದರೆ, ಈ ಸೌಲಭ್ಯವು ಸರ್ಕಾರಿ ನೌಕರರಿಗೆ ಸೀಮಿತವಾಗಿದೆ. 1992ರ ಜ.2ರಂದು ಅಂದಿನ ಮುಖ್ಯಮಂತ್ರಿ ಲಾಲೂಪ್ರಸಾದ್ ಈ ನಿರ್ಧಾರ ಕೈಗೊಂಡಿದ್ದರು.

**ಕೇರಳ:** ಕೊಚ್ಚಿ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳ ಪ್ರಯತ್ನದ ಫಲವಾಗಿ ಕೇರಳದ ವಿಶ್ವವಿದ್ಯಾಲಯಗಳಲ್ಲಿ ಮುಟ್ಟಿನ ಸಂದರ್ಭದಲ್ಲಿ ವಿದ್ಯಾರ್ಥಿನಿಯರಿಗೆ ರಜೆ ನೀಡುವ ಪರಿಪಾಟ ಆರಂಭವಾಯಿತು. ಮುಟ್ಟಿನ ಕಾಲದಲ್ಲಿ ಆರೋಗ್ಯ ಕಾಪಾಡಿಕೊಳ್ಳಲು ಅನುವಾಗುವಂತೆ, 2023ರ ಜನವರಿಯಲ್ಲಿ ಉನ್ನತ ಶಿಕ್ಷಣ ಸಚಿವೆ ಆರ್.ಬಿಂದು ಅವರು ವಿದ್ಯಾರ್ಥಿನಿಯರಿಗೆ ಹಾಜರಾತಿಯಲ್ಲಿ ಶೇ 2ರಷ್ಟು ವಿನಾಯಿತಿ ಘೋಷಿಸಿದರು.

**ಒಡಿಶಾ:** ಸರ್ಕಾರಿ ಮತ್ತು ಖಾಸಗಿ ವಲಯದ ಉದ್ಯೋಗಿಗಳಿಗೆ ಒಂದು ದಿನ ವೇತನಸಹಿತ ಮುಟ್ಟಿನ ರಜೆ ನೀಡುವುದಾಗಿ 2024ರ ಸ್ವಾತಂತ್ರ್ಯೋತ್ಸವದಂದು ಆಗಿನ ಉಪಮುಖ್ಯಮಂತ್ರಿ ಪ್ರವತಿ ಪರಿದಾ ಘೋಷಿಸಿದ್ದರು.

**ಸಿಕ್ಕಿಂ:** ರಾಜ್ಯದ ಹೈಕೋರ್ಟ್‌ನಲ್ಲಿ ಮಹಿಳಾ ಉದ್ಯೋಗಿಗಳಿಗೆ, ವೈದ್ಯರ ಶಿಫಾರಸಿನ ಆಧಾರದಲ್ಲಿ 2–3 ದಿನ ಮುಟ್ಟಿನ ರಜೆ ಪಡೆಯಬಹುದಾದ ಸೌಲಭ್ಯ ನೀಡಲಾಗಿದೆ. ಸಿಕ್ಕಿಂ ವಿಶ್ವವಿದ್ಯಾಲಯದಲ್ಲಿಯೂ ವಿದ್ಯಾರ್ಥಿನಿಯರಿಗೆ ಮತ್ತು ಸಿಬ್ಬಂದಿಗೆ ಒಂದು ದಿನದ ಮುಟ್ಟಿನ ರಜೆ ನೀಡಲಾಗುತ್ತಿದೆ. ಆದರೆ, ಇತರೆ ರಾಜ್ಯಗಳಂತೆ ರಾಜ್ಯವ್ಯಾಪಿ ಮುಟ್ಟಿನ ರಜೆ ನೀಡುವ ವ್ಯವಸ್ಥೆ ಸಿಕ್ಕಿಂನಲ್ಲಿ ಇಲ್ಲ; ಈ ಸೌಲಭ್ಯವು ಕೆಲವು ವಲಯ/ಸಂಸ್ಥೆಗಳಿಗೆ ಮಾತ್ರ ಸೀಮಿತವಾಗಿದೆ.

ಆಧಾರ: ದೇಫಾರ್‌ಗರ್ಲ್ಸ್.ಒಆರ್‌ಜಿ, ಫ್ರೀ ಪೀರಿಯಡ್ಸ್ ಕೆನಡಾ, ಮಾಧ್ಯಮ ವರದಿಗಳು

## ಸ್ವಾಗತಿಸುವೆ, ಆದರೆ ಆತಂಕವೂ ಇದೆ...



ಸರ್ಕಾರದ ನಿರ್ಧಾರವನ್ನು ಹೆಣ್ಣಾಗಿ ನಾನು ಸ್ವಾಗತಿಸುತ್ತೇನೆ. ಇದು ಬಹಳ ದೊಡ್ಡ ಕ್ರಮ. ಆದರೆ, ಇದರ ಅನುಷ್ಠಾನದಲ್ಲಿ ಕೆಲವು ಸಮಸ್ಯೆಗಳೂ ಇವೆ. ಸಣ್ಣ ಮತ್ತು ಮಧ್ಯಮ ಗಾತ್ರದ ಉದ್ದಿಮೆಗಳ ಮೇಲೆ ಈ ಬಗೆಯ ರಜೆಯು ಹೆಚ್ಚುವರಿ ಹೊರೆಯಂತೆ ಆಗಬಹುದು. ಈ ಉದ್ದಿಮೆಗಳು ಈಗಾಗಲೇ ಹಲವು ಸಮಸ್ಯೆಗಳನ್ನು ಎದುರಿಸುತ್ತಿವೆ. ಮುಟ್ಟಿನ ರಜೆಯ ಕಾರಣದಿಂದಾಗಿ ಉಂಟಾಗುವ ಹೆಚ್ಚುವರಿ ಹೊರೆಯು ಯಾರ ಹೆಗಲಿಗೆ ವರ್ಗಾವಣೆ ಆಗುತ್ತದೆ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಹೊರೆಯನ್ನು ಸರ್ಕಾರ ಅಥವಾ ಸರ್ಕಾರದ ಯಾವುದೇ ಸಂಸ್ಥೆ ಹೊರುತ್ತದೆ ಎಂದಾದರೆ ಸ್ವಾಗತಾರ್ಹ. ಮುಟ್ಟಿನ ರಜೆ ಎಂಬುದು ಅನಿರೀಕ್ಷಿತವಾಗಿ ಎದುರಾಗುವ ರಜೆ ಆಗುತ್ತದೆ. ಸಣ್ಣ ಮತ್ತು ಮಧ್ಯಮ ಪ್ರಮಾಣದ ಉದ್ದಿಮೆಗಳಲ್ಲಿ ಹೆಚ್ಚಿನ ಸಂಖ್ಯೆಯ ಸಿಬ್ಬಂದಿ ಇರುವುದಿಲ್ಲ. ಕೆಲಸದ ಸ್ಥಳದಲ್ಲಿ ಬಹಳ ಮಹತ್ವದ ಪಾತ್ರ ವಹಿಸುವ ಮಹಿಳಾ ಸಿಬ್ಬಂದಿ ಇದ್ದಕ್ಕಿದ್ದಂತೆ ಈ ರಜೆಯನ್ನು ಪಡೆದಲ್ಲಿ, ಅವರ ಪಾಲಿನ ಕೆಲಸವನ್ನು ಯಾರು ನಿರ್ವಹಿಸುತ್ತಾರೆ ಎಂಬ ಪ್ರಶ್ನೆ ಎದುರಾಗುತ್ತದೆ. ಹೀಗಾಗಿ ಈ ರಜೆಯು ಮಹಿಳೆಯರಿಗೆ ಉದ್ಯೋಗಾವಕಾಶಗಳು ಕ್ಷೀಣಿಸುವುದಕ್ಕೆ ಕಾರಣ ಆಗಬಹುದೇ ಎಂಬ ಆತಂಕವೂ ಇದೆ.

**ಉಮಾರೆಡ್ಡಿ,** ಎಫ್‌ಕೆಸಿಸಿಐ ಅಧ್ಯಕ್ಷೆ

## ಮಹಿಳೆಯ ಸ್ವಾಭಿಮಾನಕ್ಕೆ ಧಕ್ಕೆಯಾಗದಿರಲಿ



ಹೆಣ್ಣುಮಕ್ಕಳಿಗೆ ಋತುಚಕ್ರದ ಸಮಯದಲ್ಲಿ ಆರೋಗ್ಯದಲ್ಲಿ ಅನೇಕ ರೀತಿಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ದೈಹಿಕವಾಗಿ ಮಾತ್ರವಲ್ಲದೆ, ಭಾವನಾತ್ಮಕವಾಗಿಯೂ ಸಮಸ್ಯೆ ಅನುಭವಿಸುತ್ತಾರೆ. ಅದರಲ್ಲೂ ಮೊದಲ ದಿನದ ನೋವು, ಹೇಳಲಾಗದ ಯಾತನೆ. ಅದನ್ನು ಅನುಭವಿಸಿದವರಿಗಷ್ಟೇ ಗೊತ್ತು. ಹಾಗಾಗಿ, ಹೆಣ್ಣುಮಕ್ಕಳ ಕಷ್ಟಗಳ ಬಗ್ಗೆ ಕಾಳಜಿ ವಹಿಸಿ, ಯಾವುದೇ ರೀತಿಯ ಪ್ರಮಾಣಪತ್ರ ಕೇಳದೇ ಉದ್ಯೋಗಸ್ಥ ಮಹಿಳೆಯರಿಗೆ ತಿಂಗಳಲ್ಲಿ ಒಂದು ದಿನದ ರಜೆ ನೀಡಬೇಕು ಎಂಬ ರಾಜ್ಯ ಸರ್ಕಾರಿ ನೌಕರರ ಸಂಘದ ಬೇಡಿಕೆಯನ್ನು ಸರ್ಕಾರ ಈಡೇರಿಸಿರುವುದು ತುಂಬಾ ಮಹತ್ವದ್ದು. ಈ ನಿರ್ಣಯವು ಒಂದು ದಿಟ್ಟ ಹೆಜ್ಜೆ. ಈ ಕುರಿತು ಯಾವುದೇ ಗೊಂದಲಗಳಿಗೆ ಅವಕಾಶ ಇಲ್ಲದಂತೆ ಸೂಕ್ತ ಕಾನೂನು ರೂಪಿಸಬೇಕು. ರಜೆ ನೀಡುವಾಗ ಮಹಿಳೆಯರ ಸ್ವಾಭಿಮಾನಕ್ಕೆ ಧಕ್ಕೆಯಾಗದಂತೆ ಪುರುಷ ಮೇಲಧಿಕಾರಿಗಳು ನಡೆದುಕೊಳ್ಳುವಂತಹ ವಾತಾವರಣ ನಿರ್ಮಾಣವಾಗಬೇಕು

**ಯಶೋಧ,** ಉಪಾಧ್ಯಕ್ಷೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ

## 'ಅಸಂಘಟಿತ ವಲಯಕ್ಕೂ ಅನ್ವಯವಾಗಲಿ'

ರಾಜ್ಯ ಸರ್ಕಾರ ರೂಪಿಸಲು ಹೊರಟಿರುವ ನೀತಿ ಸರ್ಕಾರಿ ಮತ್ತು ಖಾಸಗಿ ವಲಯದ ಉದ್ಯೋಗಿಗಳಿಗೆ ಅನ್ವಯವಾಗಲಿದೆ. ಇದರಿಂದ ಸಂಘಟಿತ ವಲಯದಲ್ಲಿ ದುಡಿಯುವ ಮಹಿಳೆಯರಿಗೆ ಪ್ರಯೋಜನವಾಗಲಿದ್ದು, ಅಸಂಘಟಿತ ವಲಯದಲ್ಲಿ ಕೆಲಸ ಮಾಡುವ ಮಹಿಳೆಯರಿಗೂ ಅನ್ವಯವಾಗಬೇಕು ಎಂಬ ಒತ್ತಾಯ ಕೇಳಿಬಂದಿದೆ. ಕಾರ್ಮಿಕ ಕಲ್ಯಾಣ ಮಂಡಳಿ ಅಥವಾ ಇಂತಹದೇ ಬೇರೆ ವ್ಯವಸ್ಥೆಯ ಮೂಲಕ ಈ ನೀತಿಯ ಪ್ರಯೋಜನ ಅವರಿಗೂ ಸಿಗುವಂತೆ ಮಾಡಬೇಕು ಎಂಬುದು ಅಸಂಘಟಿತ ವಲಯದ ಕಾರ್ಮಿಕ ಸಂಘಟನೆಗಳ ಒತ್ತಾಯ.

ಅಸಂಘಟಿತ ವಲಯದ ಮಹಿಳೆಯರು ಕಠಿಣ ಕೆಲಸಗಳನ್ನು ನಿರ್ವಹಿಸುತ್ತಿರುತ್ತಾರೆ. ಮುಟ್ಟಿನ ಸಮಯದಲ್ಲಿ ನೋವು ತೀವ್ರವಾಗಿದ್ದರೆ ಕೆಲಸ ಮಾಡುವುದು ತುಂಬಾ ಕಷ್ಟ. ಸಂಘಟಿತ ವಲಯದ ಕೆಲವು ಮಹಿಳಾ ಉದ್ಯೋಗಿಗಳು ಆ ದಿನಗಳಂದು ಮನೆಯಿಂದಲೇ ಕೆಲಸ ಮಾಡಬಹುದು. ಆದರೆ, ಇವರಿಗೆ ಅಂತಹ ಅವಕಾಶ ಇಲ್ಲ. ಒಂದು ವೇಳೆ ರಜೆ ಮಾಡಿದರೂ, ಆ ದಿನದ ವೇತನ ಸಿಗುವುದಿಲ್ಲ. ಬಡ ಮಹಿಳಾ ಕಾರ್ಮಿಕರೇ ಹೆಚ್ಚಿರುವ ಈ ವಲಯದಲ್ಲಿ ವೇತನ ಸಹಿತ ಮುಟ್ಟಿನ ರಜೆ ನೀತಿ ಅನ್ವಯವಾದರೆ ತುಂಬಾ ಅನುಕೂಲವಾಗುತ್ತದೆ ಎಂಬುದು ಮಹಿಳಾ ಹೋರಾಟಗಾರರ ವಾದ.

## ದುರುಪಯೋಗದ ವಾದ ಸರಿಯಲ್ಲ



ಮಹಿಳೆಯರಿಗೆ ಮುಟ್ಟು ಒಂದು ಜೈವಿಕ ಸ್ಥಿತಿ. ಆ ದಿನಗಳಲ್ಲಿ ಬಹುತೇಕ ಮಹಿಳೆಯರಿಗೆ ವಿಶ್ರಾಂತಿಯ ಅಗತ್ಯವಿರುತ್ತದೆ. ದುಡಿಯುವ ಮಹಿಳೆಯರಿಗಂತೂ ರಜೆ ತೀರಾ ಅವಶ್ಯಕ. ಗೃಹಿಣಿಯರಿಗೆ, ಕಾಲೇಜು ವಿದ್ಯಾರ್ಥಿನಿಯರಿಗೆ ವಿಶ್ರಾಂತಿ ಪಡೆಯುವ ಆಯ್ಕೆಯಾದರೂ ಇರುತ್ತದೆ. ಆದರೆ, ಉದ್ಯೋಗಸ್ಥ ಮಹಿಳೆಯರಿಗೆ ಅದು ಸಾಧ್ಯವಿಲ್ಲ. ಮಹಿಳೆಯರಿಗೆ ಈ ಸಂದರ್ಭದಲ್ಲಿ ಮೂರ್ನಾಲ್ಕು ದಿನ ನೋವು ಇರುತ್ತದೆ. ಎಷ್ಟು ದಿನ ರಜೆ ನೀಡುವುದು ಎನ್ನುವುದರ ಬಗ್ಗೆಯೂ ಸಮಿತಿಯಲ್ಲಿ ಚರ್ಚಿಸಿದೆವು. ಸಮಿತಿಯಲ್ಲಿ ಸ್ತ್ರೀರೋಗ ತಜ್ಞೆಯೂ ಇದ್ದರು. ಕೆಲವರಿಗೆ ಮೊದಲ ದಿನ ನೋವು ಬರುತ್ತೆ, ಕೆಲವರಿಗೆ ಎರಡನೇ ದಿನ, ಮತ್ತೆ ಕೆಲವರಿಗೆ ಮೂರನೇ ದಿನ ನೋವು ಕಾಡುತ್ತೆ ಎಂದು ವೈದ್ಯೆ ಹೇಳಿದರು. ಕೊನೆಗೆ, ಅವರ ಆಯ್ಕೆಯ ಒಂದು ದಿನ ರಜೆ ಹಾಕಲು ಅವಕಾಶ ನೀಡಬೇಕು ಎಂದು ತೀರ್ಮಾನಕ್ಕೆ ಬರಲಾಯಿತು.

ಮುಟ್ಟಿನ ರಜೆ ನೀತಿಯ ಜಾರಿಯಲ್ಲಿರುವ ತೊಡಕಿನ ಬಗ್ಗೆ ಕೆಲವರು ಮಾತನಾಡುತ್ತಿದ್ದಾರೆ. ಮಹಿಳೆಯರಿಗೆ ಉದ್ಯೋಗಾವಕಾಶಗಳು ಕಡಿಮೆಯಾಗುತ್ತವೆ, ಅವರ ಉತ್ಪಾದಕತೆ ಕಡಿಮೆ ಆಗುತ್ತದೆ ಎಂದು ಕೆಲವರು ಹೇಳುತ್ತಿದ್ದಾರೆ. ಯಾವುದೇ ಹೊಸ ಕಾನೂನು ಮಾಡಿದರೂ ಇಂಥ ಕೆಲವು ತೊಡಕುಗಳು ಇದ್ದೇ ಇರುತ್ತವೆ. ಹೆರಿಗೆ ರಜೆ ಕಾನೂನು ಮಾಡುವಾಗಲೂ ಕೆಲವರು ಇದೇ ರೀತಿಯ ಆಕ್ಷೇಪ ಎತ್ತಿದ್ದರು. ನಂತರ ಅದು ಜಾರಿಯಾಗಲಿಲ್ಲವೇ. ನಾವು ಮುಖ್ಯವಾಗಿ ಅರ್ಥ ಮಾಡಿಕೊಳ್ಳಬೇಕಾದದ್ದು ಏನೆಂದರೆ, ಮಹಿಳೆಯರು ಇರುವುದು ಕೇವಲ ಉದ್ಯಮಿಗಳ ಉತ್ಪಾದನೆ ಹೆಚ್ಚಿಸಲೋ ಅಥವಾ ಹೆಚ್ಚು ಕೆಲಸ ಮಾಡಲೋ ಅಲ್ಲ. ಮುಟ್ಟಿನ ರಜೆಯಿಂದ ಅವರ ಕೆಲಸದ ಕ್ಷಮತೆ ಹೆಚ್ಚಾಗುತ್ತದೆ, ಅವರ ಸಾಮಾಜಿಕ ಉತ್ಪಾದನೆ ಹೆಚ್ಚಾಗುತ್ತದೆ. ಮುಟ್ಟಿನ ರಜೆ ಪಡೆದ ಹೆಣ್ಣು, ಅದನ್ನು ತನಗಾಗಿ, ಕುಟುಂಬಕ್ಕಾಗಿ ಬಳಸುತ್ತಾಳೆ; ಅದು ಅವಳು ಸಮಾಜಕ್ಕೆ ವಾಪಸ್ ಕೊಡುವ ರೀತಿಯೂ ಆಗಿದೆ.

ಕೆಲವರು ಮುಟ್ಟಿನ ರಜೆ ನೀತಿ ದುರುಪಯೋಗವಾಗುತ್ತದೆ ಎಂದು ಹೇಳುತ್ತಿದ್ದಾರೆ. ಮಹಿಳೆಯರಿಗೆ ಏನಾದರೂ ಒಳ್ಳೆಯದು ಮಾಡುವ ಪ್ರಯತ್ನಗಳು ನಡೆದಾಗಲೆಲ್ಲ ಕೆಲವರು ದುರುಪಯೋಗದ ವಾದ ಮುಂದಿಡುತ್ತಾರೆ. ಮಹಿಳೆಯರನ್ನು ಕೆಲಸಕ್ಕೆ ತೆಗೆದುಕೊಳ್ಳುವುದಿಲ್ಲ ಎನ್ನುವಂಥ ನಕಾರಾತ್ಮಕ ವಾದಗಳೂ ಇವೆ. ಶಾಲೆಗಳಲ್ಲಿ, ಗಾರ್ಮೆಂಟ್ಸ್‌ನಲ್ಲಿ ಮಹಿಳೆಯರನ್ನೇ ಹೆಚ್ಚಾಗಿ ನೇಮಕ ಮಾಡಿಕೊಳ್ಳಲಾಗುತ್ತಿದೆ. ಗಾರ್ಮೆಂಟ್ಸ್‌ನಲ್ಲಿ ಸುಮಾರು ನಾಲ್ಕು ಲಕ್ಷ ಮಹಿಳೆಯರು ಕೆಲಸ ಮಾಡುತ್ತಿದ್ದಾರೆ. ಈ ವಲಯದಲ್ಲಿ ಪುರುಷರ್ಯಾರೂ ಕೆಲಸ ಮಾಡುವುದಿಲ್ಲ. ಇಂಥ ವಲಯಗಳಲ್ಲಿ ಉದ್ಯೋಗದಾತರು ಕೆಲಸಕ್ಕೆ ತೊಂದರೆಯಾಗದಂತೆ ಪರ್ಯಾಯ ವ್ಯವಸ್ಥೆಗಳನ್ನು ಮಾಡಿಕೊಳ್ಳಬೇಕು. ಉದಾಹರಣೆಗೆ, ಮಹಿಳಾ ಉದ್ಯೋಗಿಗಳ ಸಂಖ್ಯೆಯನ್ನು ಅಲ್ಪಪ್ರಮಾಣದಲ್ಲಿ ಹೆಚ್ಚಿಸುವುದು. ಸರ್ಕಾರವೂ ಇದೇ ಕ್ರಮ ಅನುಸರಿಸಬೇಕು.

ಮುಟ್ಟಿನ ರಜೆಯಿಂದ ಕೆಲವು ಸಣ್ಣಪುಟ್ಟ ಸಮಸ್ಯೆಗಳು ಉದ್ಭವವಾಗಬಹುದು. ಹಾಗೆಂದು ರಜೆ ನೀಡದೇ ಇರುವುದು ಉತ್ತಮ ಸಮಾಜ/ವ್ಯವಸ್ಥೆಯ ಲಕ್ಷಣವಲ್ಲ; ಮುಟ್ಟಿನ ರಜೆ ನೀಡಲೇಬೇಕು. ಯಾವುದೇ ಕಂಪನಿ/ಕಚೇರಿಯಲ್ಲಿ ಮುಟ್ಟಿನ ರಜೆ ನೀಡದೇ ಇರುವುದು ನಿಯಮದ ಉಲ್ಲಂಘನೆ ಆಗುತ್ತದೆ. ಅವರು ಅದಕ್ಕೆ ತಕ್ಕ ಶಿಕ್ಷೆ ಅನುಭವಿಸಬೇಕಾಗುತ್ತದೆ.

ಮಾನವ ಜನಾಂಗದ ಮುಂದುವರಿಕೆಗೆ ಕಾರಣವಾದ ಹೆಣ್ತನದ ನೋವಿನ ಬಗ್ಗೆ ಸಮಾಜ, ಸರ್ಕಾರಕ್ಕೆ ಸಹಾನುಭೂತಿ ಇರಬೇಕು. ಮುಟ್ಟಿನ ರಜೆ ಮಹಿಳೆಯರ ಹಕ್ಕು ಎನ್ನುವುದನ್ನು ಎಲ್ಲರೂ ನೆನಪಿಡಬೇಕು.

**ಪ್ರತಿಭಾ ಆರ್.,** ಮುಟ್ಟಿನ ರಜೆ ನೀತಿ ಸಮಿತಿ ಸದಸ್ಯೆ, ಗಾರ್ಮೆಂಟ್ಸ್ ಆ್ಯಂಡ್ ಟೆಕ್ಸ್‌ಟೈಲ್ ವರ್ಕರ್ಸ್ ಯೂನಿಯನ್ ಅಧ್ಯಕ್ಷೆ

## ಏಳು ರಾಷ್ಟ್ರಗಳಲ್ಲಿದೆ ರಜೆ ನೀತಿ

ಜಗತ್ತಿನಲ್ಲಿ ಏಳು ರಾಷ್ಟ್ರಗಳು ಮುಟ್ಟಿನ ರಜಾ ನೀತಿಯನ್ನು ರೂಪಿಸಿವೆ.

**1. ಸ್ಪೇನ್:** 2003ರಲ್ಲಿ ಈ ನೀತಿಯನ್ನು ಜಾರಿಗೆ ತಂದಿದ್ದು, ಋತುಚಕ್ರದ ಸಮಯದಲ್ಲಿ ಮಹಿಳಾ ಉದ್ಯೋಗಿಗಳು ಮೂರರಿಂದ ಐದು ದಿನ ರಜೆ ತೆಗೆದುಕೊಳ್ಳಬಹುದು. ಆದರೆ, ಇದಕ್ಕೆ ವೈದ್ಯರ ಟಿಪ್ಪಣಿ ಅಗತ್ಯ. ಇದು ವೇತನಸಹಿತ ರಜೆ ಆಗಿದ್ದರೂ, ಆ ದಿನಗಳಲ್ಲಿ ದಿನದ ಸಂಬಳದ ಶೇ 75ರಷ್ಟು ಮಾತ್ರ ಸರ್ಕಾರ ಪಾವತಿ ಮಾಡುತ್ತದೆ

**2. ಇಂಡೊನೇಷ್ಯಾ:** ಇಲ್ಲಿ 2003ರಿಂದಲೇ ಈ ನೀತಿ ಜಾರಿಯಲ್ಲಿದೆ. ಮುಟ್ಟಿನ ಸಮಯದಲ್ಲಿ ಮೊದಲ ಎರಡು ದಿನಗಳಿಗೆ ವೇತನಸಹಿತ ರಜೆ ನೀಡುವುದಕ್ಕೆ ಇದರಲ್ಲಿ ಅವಕಾಶ ಇದೆ. ಆದರೆ, ರಜೆ ನೀಡುವುದು ಪ್ರತಿ ಉದ್ಯೋಗದಾತ ಕಂಪನಿಯ ವಿವೇಚನೆಗೆ ಬಿಟ್ಟಿದ್ದು. ಹಾಗಾಗಿ ಕಂಪನಿಗಳು ಈ ನೀತಿಯನ್ನು ಕಡ್ಡಾಯವಾಗಿ ಅನುಷ್ಠಾನ ಮಾಡಬೇಕು ಎಂಬುದಿಲ್ಲ

**3. ಜಪಾನ್:** 1947ರಲ್ಲೇ ಈ ಸಂಬಂಧ ಶಾಸನ ಜಾರಿಗೆ ಬಂದಿದೆ. ಇದರ ಪ್ರಕಾರ, ಕಠಿಣ ಕೆಲಸ ಮಾಡುವ ಮಹಿಳೆಯರಿಗೆ ಋತುಚಕ್ರದ ಸಮಯದಲ್ಲಿ ಕೆಲಸ ಮಾಡುವಂತೆ ಕಂಪನಿಗಳು ಸೂಚಿಸುವಂತಿಲ್ಲ. ಅವರು ರಜೆ ತೆಗೆದುಕೊಳ್ಳಬಹುದು. ಆದರೆ, ರಜಾ ದಿನದ ವೇತನ ಪಾವತಿ ಮಾಡುವುದು ಕಡ್ಡಾಯವಲ್ಲ

**4. ದಕ್ಷಿಣ ಕೊರಿಯಾ:** 1953ರಿಂದಲೇ ನೀತಿ ಜಾರಿಯಲ್ಲಿದ್ದು, ಮಹಿಳೆಯರಿಗೆ ತಿಂಗಳಿಗೆ ಒಂದು ದಿನ ವೇತನರಹಿತ ರಜೆ ನೀಡುವ ವ್ಯವಸ್ಥೆ ಇದೆ. ಆದರೆ, 2017ರಲ್ಲಿ ನಡೆಸಿದ ಸಮೀಕ್ಷೆಯ ಪ್ರಕಾರ, ಇಂತಹ ರಜೆ ತೆಗೆದುಕೊಳ್ಳುವ ಮಹಿಳೆಯರ ಪ್ರಮಾಣ ತುಂಬಾ ಕಡಿಮೆ

**5. ತೈವಾನ್:** ಮುಟ್ಟಿನ ದಿನಗಳಲ್ಲಿ ತೀವ್ರ ನೋವಿನಿಂದಾಗಿ ಕೆಲಸ ಮಾಡಲು ಸಾಧ್ಯವಿಲ್ಲದವರು ತಿಂಗಳಿಗೆ ಒಂದು ದಿನ ರಜೆ ಪಡೆಯುವುದಕ್ಕೆ ತೈವಾನ್‌ನಲ್ಲಿ ಅವಕಾಶ ಇದೆ. ಆ ದಿನದ ಅರ್ಧ ವೇತನ ನೀಡಲಾಗುತ್ತದೆ

**6. ವಿಯೆಟ್ನಾಂ:** ಪ್ರತಿ ತಿಂಗಳು ಮಹಿಳಾ ಉದ್ಯೋಗಿಗಳು ಮೂರು ದಿನ ರಜೆ ಪಡೆಯಬಹುದು. ಆ ದಿನದ ವೇತನ ಪಾವತಿ ಕಡ್ಡಾಯವಲ್ಲ. ಕೆಲಸಕ್ಕೆ ಬಂದರೆ ಪ್ರತಿ ದಿನ 30 ನಿಮಿಷಗಳಷ್ಟು ವಿಶ್ರಾಂತಿ ಪಡೆಯುವುದಕ್ಕೂ ಅವಕಾಶ ಇದೆ. ಆದರೆ, ರಜೆ ಪಡೆಯದಿದ್ದ ಉದ್ಯೋಗಿಗಳಿಗೆ ಹೆಚ್ಚುವರಿ ವೇತನ ನೀಡಲಾಗುತ್ತದೆ

**7. ಝೂಂಬಿಯಾ:** ಇಲ್ಲಿ ಪ್ರತಿ ತಿಂಗಳು 'ತಾಯಂದಿರ ದಿನ' ಆಚರಿಸಲಾಗುತ್ತದೆ. ಮಹಿಳಾ ಉದ್ಯೋಗಿಗಳು ಕಾರಣ ನೀಡದೇ ತಿಂಗಳಿಗೆ ಒಂದು ದಿನ ರಜೆ ತೆಗೆದುಕೊಳ್ಳಬಹುದು. ಕಂಪನಿಗಳು ಆ ದಿನದ ವೇತನ ನೀಡುವುದು ಕಡ್ಡಾಯವಲ್ಲ

## ಪದಬಂ

**ಎಡದಿಂದ ಬಲಕ್ಕೆ**

1.ಯಾವುದೇ ಕಳಂಕವಿಲ್ಲದ್ದು (4)
5.ಸಿಡುಬು ಮೊದಲದ್ದರೆ ಪ್ರಮುಖ ಘಟ್ಟ ಕಾಣುತ್ತದೆ! (4)
6.ಪಾನಕ ಕುಡಿದು ತಯಾರಿಸಿದ ಅಡುಗೆ (2)
8.ಪುರದಲ್ಲಿ ಸಿಕ್ಕಿರುವ ಸನ್ಮಾನ! (4)
9.ನಗರದಲ್ಲಿರುವ ಮನುಷ್ಯ ಕಾಣುತ್ತಿದ್ದಾನೆಯೇ? (2)
10.ಕಾದಾಡುವಾಗ ಅರಣ್ಯ ಕಾಣಿಸಿತಲ್ಲಾ! (2)
11.ಅತೀಘೋರವಾದ ವಿಷ (4)
12.ಹತ್ತಿರದಲ್ಲಿ ಕಾಣಿಸಿದ ಅರಳೆ (2)
13.ಸೋಲು ಈ ರೀತಿ ಬಂದಿದೆ (4)
15.ಈ ಪರಿ ನಡೆದ ಮದುವೆ (4)

**ಮೇಲಿಂದ ಕೆಳಕ್ಕೆ**

2.ಗ್ರಾನೈಟ್ ರಾಜಧಾನಿ ಎಂದು ಖ್ಯಾತಿ ಪಡ ರಾಮನಗರ ಜಿಲ್ಲೆಯ ತಾಲೂಕು
3.ತೋಟದ ಕೆಲಸ ಮಾಡುವವನು
4.ದಂತ ಇಲ್ಲಿ ಕಾಣುತ್ತಿದೆ
5.ದಂಡಿ ಸತ್ಯಾಗ್ರಹದಲ್ಲಿ ಪಾಲ್ಗೊಂಡಿದ್ದ ಏ ಕನ್ನಡಿಗ ಈತ
7.ನಿಸ್ಸಾರವಾದನ್ನು ಹೀಗೆನ್ನಿ
9.ಕೈಯಲ್ಲಿರುವ ಹಣ
10.ಸಮಯವನ್ನು ವ್ಯರ್ಥವಾಗಿ ಕಳೆಯುವುದು
13.ಬಟ್ಟೆಯ ಅಗಲದ ಒಂದು ಪ್ರಮಾಣ
14.ಈಟಿ ಇಲ್ಲಿದೆ

## ❖ ನ.1ರಿಂದ 'ಡಿಜಿಟಲ್ ಜೀವಿತ ಪ್ರಮಾಣಪತ್ರ' ಅಭಿಯಾನ

**ಸಂದರ್ಭ: ಕೇಂದ್ರ ಸರ್ಕಾರವು ಪಿಂಚಣಿದಾರರಿಗಾಗಿ ನವೆಂಬರ್ 1ರಿಂದ 30ರವರೆಗೆ ದೇಶದಾದ್ಯಂತ 'ಡಿಜಿಟಲ್ ಜೀವಿತ ಪ್ರಮಾಣಪತ್ರ' (ಡಿಎಲ್‌ಸಿ) ಅಭಿಯಾನವನ್ನು ಆಯೋಜಿಸಿದೆ.**

- 'ಪಿಂಚಣಿ ವಿತರಿಸುವ 19 ಬ್ಯಾಂಕ್‌ಗಳು ಮತ್ತು ವಿವಿಧ ಇಲಾಖೆಗಳ ಸಹಯೋಗದಲ್ಲಿ 2,000 ಜಿಲ್ಲೆಗಳು ಮತ್ತು ಉಪ–ವಿಭಾಗ ಕಚೇರಿ ವ್ಯಾಪ್ತಿಯಲ್ಲಿ ಅಭಿಯಾನ ನಡೆಯಲಿದೆ' ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.
- ದೇಶದ ಮೂಲೆ ಮೂಲೆಗಳಲ್ಲಿರುವ ಪಿಂಚಣಿದಾರರನ್ನು ತಲುಪಿ ಡಿಜಿಟಲ್ ಜೀವಿತ ಪ್ರಮಾಣಪತ್ರ ಬಗ್ಗೆ ಮಾಹಿತಿ ನೀಡುವ ಉದ್ದೇಶದಿಂದ ಪಿಂಚಣಿ ಇಲಾಖೆಯು ಆಯೋಜಿಸುತ್ತಿರುವ ನಾಲ್ಕನೇ ಅಭಿಯಾನ ಇದಾಗಿದೆ.
- 1.8 ಲಕ್ಷ ಪೋಸ್ಟ್‌ಮ್ಯಾನ್‌ಗಳು ಮತ್ತು ಗ್ರಾಮೀಣ ಡಾಕ್ ಸೇವಕರು(ಜಿಡಿಎಸ್) ಎಲ್ಲ ವಿಧದ ಪಿಂಚಣಿದಾರರ ಮನೆ ಬಾಗಿಲಿಗೆ ತೆರಳಿ ಡಿಎಲ್‌ಸಿ ಸೇವೆಗಳ ಬಗ್ಗೆ ತಿಳಿಸಲಿದ್ದಾರೆ.
- ಪಿಂಚಣಿದಾರರು ತಮ್ಮ ಪಿಂಚಣಿಯನ್ನು ಮುಂದುವರಿಸಲು ಪ್ರತಿವರ್ಷ ನವೆಂಬರ್ ತಿಂಗಳಿನಲ್ಲಿ 'ಜೀವಿತ ಪ್ರಮಾಣಪತ್ರ'ವನ್ನು ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.

## ❖ ವ್ಯಾಪಾರ ಮಾತುಕತೆ ಅಮೆರಿಕಕ್ಕೆ ಭಾರತದ ತಂಡ

**ಸಂದರ್ಭ: ವ್ಯಾಪಾರ ಒಪ್ಪಂದ ಕುರಿತ ಮಾತುಕತೆಗಾಗಿ ಭಾರತದ ಹಿರಿಯ ಅಧಿಕಾರಿಗಳ ತಂಡವು ಅಮೆರಿಕಕ್ಕೆ ಇದೇ ವಾರ ಭೇಟಿ ನೀಡಲಿದೆ.**

- ಉಭಯ ದೇಶಗಳ ನಾಯಕರು ಪ್ರಸ್ತಾವಿತ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಕುರಿತು ಮಾತುಕತೆ ನಡೆಸುವಂತೆ ಅಧಿಕಾರಿಗಳಿಗೆ ಈ ವರ್ಷದ ಫೆಬ್ರುವರಿಯಲ್ಲಿ ನಿರ್ದೇಶನ ನೀಡಿದ್ದರು.
- ಅಕ್ಟೋಬರ್–ನವೆಂಬರ್ ವೇಳೆಗೆ ಒಪ್ಪಂದದ ಮೊದಲ ಹಂತದ ಮಾತುಕತೆ ಮುಕ್ತಾಯಗೊಳಿಸುವ ಆಲೋಚನೆ ಅಧಿಕಾರಿಗಳಿಗೆ ಇದೆ.
- ಇದುವರೆಗೆ ಐದು ಸುತ್ತಿನ ಮಾತುಕತೆಗಳು ನಡೆದಿವೆ. ಈ ವಾರದಲ್ಲಿ ಭಾರತದ ತಂಡವು ಅಮೆರಿಕಕ್ಕೆ ಭೇಟಿ ನೀಡಲಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.
- ಕೇಂದ್ರ ವಾಣಿಜ್ಯ ಸಚಿವ ಪೀಯೂಷ್ ಗೋಯಲ್ ನೇತೃತ್ವದ ಅಧಿಕಾರಿಗಳ ನಿಯೋಗ ವ್ಯಾಪಾರ ಒಪ್ಪಂದದ ಮಾತುಕತೆಗಾಗಿ ನ್ಯೂಯಾರ್ಕ್‌ಗೆ ಕಳೆದ ತಿಂಗಳು ಭೇಟಿ ನೀಡಿತ್ತು.
- ಈಗ ಭಾರತದಿಂದ ಆಮದಾಗುವ ಸರಕುಗಳ ಮೇಲೆ ಅಮೆರಿಕವು ಶೇ 50ರಷ್ಟು ಸುಂಕ ವಿಧಿಸುತ್ತಿದೆ. ಇಂಥ ಸಂದರ್ಭದಲ್ಲಿ, ಈ ಮಾತುಕತೆ ಮುಖ್ಯವಾಗಿದೆ ಎನ್ನಲಾಗಿದೆ.
- ಈಗ ಭಾರತ ಮತ್ತು ಅಮೆರಿಕ ನಡುವಿನ ದ್ವಿಪಕ್ಷೀಯ ವ್ಯಾಪಾರ ಮೌಲ್ಯ ₹16.93 ಲಕ್ಷ ಕೋಟಿಯಾಗಿದೆ. 2030ರ ವೇಳೆಗೆ ಇದನ್ನು ₹44.33 ಲಕ್ಷ ಕೋಟಿಗೆ ಹೆಚ್ಚಿಸುವ ಗುರಿಯನ್ನು ಒಪ್ಪಂದವು ಹೊಂದಿದೆ ಎಂದು ತಿಳಿಸಿದ್ದಾರೆ.

Dr Rajkumar IAS/KAS Academy

## ❖ ಚಿಲ್ಲರೆ ಹಣದುಬ್ಬರ ಇಳಿಕೆ

**ಸಂದರ್ಭ: ಸೆಪ್ಟೆಂಬರ್ ತಿಂಗಳಲ್ಲಿ ಚಿಲ್ಲರೆ ಹಣದುಬ್ಬರ ಪ್ರಮಾಣವು ಎಂಟು ವರ್ಷಗಳ ಕನಿಷ್ಠ ಮಟ್ಟವಾದ ಶೇಕಡ 1.54ಕ್ಕೆ ಇಳಿಕೆ ಕಂಡಿದೆ. ತರಕಾರಿಗಳು, ಹಣ್ಣು ಮತ್ತು ದ್ವಿದಳ ಧಾನ್ಯಗಳ ಬೆಲೆಯಲ್ಲಿನ ಇಳಿಕೆಯು ಹಣದುಬ್ಬರ ಪ್ರಮಾಣ ಕಡಿಮೆ ಆಗಲು ಕಾರಣವಾಗಿದೆ.**

- ಗ್ರಾಹಕ ಬೆಲೆ ಸೂಚ್ಯಂಕ ಆಧಾರಿತ ಹಣದುಬ್ಬರ ಪ್ರಮಾಣವು ಆಗಸ್ಟ್‌ನಲ್ಲಿ ಶೇ 2.07ರಷ್ಟು ಇತ್ತು. ಇದು ಕಳೆದ ಸೆಪ್ಟೆಂಬರ್‌ನಲ್ಲಿ ಶೇ 5.49ರಷ್ಟಿತ್ತು. 2017ರ ಜೂನ್‌ನಲ್ಲಿ ಹಣದುಬ್ಬರ ಪ್ರಮಾಣ ಶೇ 1.47 ರಷ್ಟಾಗಿತ್ತು. ಅದಾದ ನಂತರದ ಕನಿಷ್ಠ ಮಟ್ಟವು ಈ ಸೆಪ್ಟೆಂಬರ್‌ನಲ್ಲಿ ದಾಖಲಾಗಿದೆ.
- ಈ ವರ್ಷದಲ್ಲಿ ಚಿಲ್ಲರೆ ಹಣದುಬ್ಬರ ಪ್ರಮಾಣವು ಶೇ 2ಕ್ಕಿಂತ ಕೆಳಗಿನ ಮಟ್ಟಕ್ಕೆ ಬಂದಿರುವುದು ಇದು ಎರಡನೆಯ ಬಾರಿ. ಚಿಲ್ಲರೆ ಹಣದುಬ್ಬರ ಪ್ರಮಾಣವನ್ನು ಶೇ 2ರಿಂದ ಶೇ 6ರ ಒಳಗೆ ನಿಯಂತ್ರಿಸುವ ಹೊಣೆಯು ಆರ್‌ಬಿಐ ಮೇಲಿದೆ.
- ಗ್ರಾಮೀಣ ಪ್ರದೇಶಗಳಲ್ಲಿ ಹಣದುಬ್ಬರ ಪ್ರಮಾಣ ಶೇ 1.07ರಷ್ಟು, ನಗರ ಪ್ರದೇಶಗಳಲ್ಲಿ ಇದು ಶೇ 2.04ರಷ್ಟು ಆಗಿದೆ ಎಂದು ರಾಷ್ಟ್ರೀಯ ಸಾಂಖ್ಯಿಕ ಕಚೇರಿ (ಎನ್‌ಎಸ್‌ಒ) ನೀಡಿರುವ ಅಂಕಿ–ಅಂಶಗಳು ಹೇಳುತ್ತಿವೆ.
- ಕೇರಳದಲ್ಲಿ ಅತಿಹೆಚ್ಚು ಪ್ರಮಾಣದಲ್ಲಿ ಹಣದುಬ್ಬರ (ಶೇ 9.05ರಷ್ಟು) ದಾಖ ಲಾಗಿದೆ. ಉತ್ತರ ಪ್ರದೇಶದಲ್ಲಿ ಶೇ (–)0.61ರಷ್ಟು ಹಣದುಬ್ಬರ ದಾಖಲಾಗಿದ್ದು, ಇದು ಅತ್ಯಂತ ಕನಿಷ್ಠ ಪ್ರಮಾಣ.
- ಡಿಸೆಂಬರ್‌ನಲ್ಲಿ ಹಣಕಾಸು ನೀತಿ ಸಮಿತಿಯ ಸಭೆಯು ನಡೆಯಲಿದ್ದು, ಅಲ್ಲಿ ರೆಪೊ ದರವನ್ನು ಶೇ 0.25ರಷ್ಟು ಕಡಿಮೆ ಮಾಡುವ ತೀರ್ಮಾನ ಕೈಗೊಳ್ಳುವ ಸಾಧ್ಯತೆ ಇದೆ ಎಂದು ಐಸಿಆರ್‌ಎ ಸಂಸ್ಥೆಯ ಮುಖ್ಯ ಅರ್ಥಶಾಸ್ತ್ರಜ್ಞೆ ಅದಿತಿ ನಾಯರ್ ಹೇಳಿದ್ದಾರೆ.

## ❖ ಮೂವರಿಗೆ ಅರ್ಥಶಾಸ್ತ್ರದ ನೊಬೆಲ್

**ಸಂದರ್ಭ: ಅಮೆರಿಕದ ನಾರ್ತ್‌ವೆಸ್ಟರ್ನ್ ವಿಶ್ವವಿದ್ಯಾಲಯದ ಜೋಯೆಲ್ ಮೊಕೀರ್, ಕಾಲೇಜ್ ಡಿ ಫ್ರಾನ್ಸ್ ಮತ್ತು ಲಂಡನ್ ಸ್ಕೂಲ್ ಆಫ್ ಎಕನಾಮಿಕ್ಸ್‌ನ ಫಿಲಿಪ್ ಅಘಿಯಾನ್ ಮತ್ತು ಅಮೆರಿಕದ ಬ್ರೌನ್ ವಿಶ್ವವಿದ್ಯಾಲಯದ ಪೀಟರ್ ಹೊವಿಟ್ ಅವರು 'ನೊಬೆಲ್ ಅರ್ಥಶಾಸ್ತ್ರ ಪ್ರಶಸ್ತಿ'ಗೆ ಆಯ್ಕೆಯಾಗಿದ್ದಾರೆ.**


- 'ನಾವೀನ್ಯದೊಂದಿಗೆ ಆರ್ಥಿಕ ಬೆಳವಣಿಗೆ'ಗೆ ನೀಡಿದ ಕೊಡುಗೆಯನ್ನು ಪರಿಗಣಿಸಿ ನೊಬೆಲ್ ಪುರಸ್ಕಾರಕ್ಕೆ ಆಯ್ಕೆ ಮಾಡಲಾಗಿದೆ ಎಂದು ನೊಬೆಲ್ ಸಮಿತಿಯು ತಿಳಿಸಿದೆ.
- ಈವರೆಗೆ 96 ಮಂದಿಗೆ 56 ಬಾರಿ ಅರ್ಥಶಾಸ್ತ್ರದ ನೊಬೆಲ್ ನೀಡಲಾಗಿದೆ. ಈ ಪೈಕಿ ಮೂವರು ಮಾತ್ರ ಮಹಿಳೆಯರು. ಈ ಪ್ರಶಸ್ತಿಯನ್ನು ಡಿಸೆಂಬರ್ 10ರಂದು ಪ್ರದಾನ ಮಾಡಲಾಗುತ್ತದೆ.
- ವೈದ್ಯವಿಜ್ಞಾನ ಮತ್ತು ಭೌತವಿಜ್ಞಾನ, ರಾಸಾಯನ ವಿಜ್ಞಾನ, ಸಾಹಿತ್ಯ ಮತ್ತು ಶಾಂತಿ ಕ್ಷೇತ್ರದ ನೊಬೆಲ್ ಪುರಸ್ಕಾರವನ್ನು ಈಗಾಗಲೇ ಘೋಷಿಸಲಾಗಿದೆ.

## ❖ ಒಲಿಂಪಿಕ್ಸ್ ಪದಕ ವಿಜೇತರ ಪುರಸ್ಕರಿಸಿದ ಐಒಎ

**ಸಂದರ್ಭ: ಜಾವೆಲಿನ್ ತಾರೆ ನೀರಜ್ ಚೋಪ್ರಾ ಮತ್ತು ಶೂಟರ್ ಮನು ಭಾಕರ್ ಸೇರಿದಂತೆ ಪ್ಯಾರಿಸ್ ಒಲಿಪಿಕ್ಸ್‌ನಲ್ಲಿ ಪದಕಗಳನ್ನು ಗೆದ್ದ ಭಾರತದ ಕ್ರೀಡಾಪಟುಗಳಿಗೆ ಭಾರತ ಒಲಿಂಪಿಕ್ ಸಂಸ್ಥೆ ನಡೆದ ಸಮಾರಂಭದಲ್ಲಿ ನಗದು ಬಹುಮಾನ ನೀಡಿ ಪುರಸ್ಕರಿಸಿತು.**

Dr. Rajkumar IAS/KAS Academy

- ಜಾವೆಲಿನ್‌ನಲ್ಲಿ ಬೆಳ್ಳಿ ಗೆದ್ದಿದ್ದ ಚೋಪ್ರಾ ಅವರು ದೇಶದಿಂದ ಹೊರಗಿದ್ದ ಕಾರಣ ಅವರ ಪರವಾಗಿ ಭಾರತ ಅಥ್ಲೆಟಿಕ್ ಫೆಡರೇಷನ್ ಅಧಿಕಾರಿಯೊಬ್ಬರು ₹75 ಲಕ್ಷ ಮೊತ್ತದ ಚೆಕ್ ಅನ್ನು ಕ್ರೀಡಾ ಸಚಿವ ಮನ್ಸುಖ್ ಮಾಂಡವೀಯ ಅವರಿಂದ ಸ್ವೀಕರಿಸಿದರು.
- ಚೋಪ್ರಾ ಅವರ ಅಂದಿನ ಕೋಚ್ ಆಗಿದ್ದ ಜರ್ಮನಿಯ ಬಾರ್ತೊನೀಝ್ ಅವರಿಗೆ ₹20 ಲಕ್ಷ ಬಹುಮಾನ ನೀಡಲಾಯಿತು. ಚೋಪ್ರಾ ಅವರು ಪ್ರಸ್ತುತ ಝೆಕ್ ಗಣರಾಜ್ಯದ ಯಾನ್ ಜೆಲೆಜ್ನಿ ಅವರಿಂದ ತರಬೇತಿ ಪಡೆಯುತ್ತಿದ್ದಾರೆ.
- ಮನು ಭಾಕರ್ ಅವರು 10 ಮೀ. ಏರ್ ಪಿಸ್ತೂಲ್ ವಿಭಾಗದಲ್ಲಿ ಗೆದ್ದ ವೈಯಕ್ತಿಕ ಕಂಚಿನ ಪದಕಕ್ಕೆ ₹50 ಲಕ್ಷ ಬಹುಮಾನ ಪಡೆದರು. 10 ಮೀ. ಮಿಶ್ರ ಪಿಸ್ತೂಲ್ ವಿಭಾಗದಲ್ಲಿ ಗೆದ್ದ ಕಂಚಿನ ಪದಕಕ್ಕಾಗಿ ಸರಬ್ಜೋತ್ ಸಿಂಗ್ ಜೊತೆ ₹50 ಲಕ್ಷ ಹಂಚಿಕೊಂಡರು. ಮನು ಅವರ ಕೋಚ್ ಜಸ್ಪಾಲ್ ರಾಣಾ ಅವರಿಗೆ ₹10 ಲಕ್ಷ ನೀಡಿ ಗೌರವಿಸಲಾಯಿತು. ಮಿಶ್ರ ತಂಡ ವಿಭಾಗದಲ್ಲಿ ಅವರು ₹15 ಲಕ್ಷ ಮೊತ್ತವನ್ನು ಅಭಿಷೇಕ್ ರಾಣಾ (ಸರಬ್ಜೋತ್ ಅವರ ಕೋಚ್) ಜೊತೆ ಹಂಚಿಕೊಂಡರು.
- 57 ಕೆ.ಜಿ. ಫ್ರೀಸ್ಟೈಲ್‌ನಲ್ಲಿ ಕಂಚಿನ ಪದಕ ಗೆದ್ದ ಕುಸ್ತಿಪಟು ಅಮನ್ ಸೆಹ್ರಾವತ್ ಅವರು ₹50 ಲಕ್ಷ ಬಹುಮಾನ ಪಡೆದರು. ತಮ್ಮ ಕೋಚ್ ಅಲಿ ಶಬನೋವ್ ಪರವಾಗಿ ಅಮನ್ ₹15 ಲಕ್ಷ ಮೊತ್ತ ಸ್ವೀಕರಿಸಿದರು.
- 50 ಮೀ. ರೈಫಲ್ 3 ಪೊಷಿಷನ್ಸ್ ನಲ್ಲಿ ಕಂಚಿನ ಪದಕ ಗೆದ್ದ ಶೂಟರ್ ಸ್ವಪ್ನಿಲ್ ಕುಸಳೆ ಅವರು ₹50 ಲಕ್ಷ ಬಹುಮಾನ ಪಡೆದರು. ಅವರ ಕೋಚ್ ದೀಪಾಲಿ ದೇಶಪಾಂಡೆ ಅವರಿಗೆ ₹15 ಲಕ್ಷ ನೀಡಿ ಪುರಸ್ಕರಿಸಲಾಯಿತು.
- ಕಂಚಿನ ಪದಕ ಗೆದ್ದ ಪುರುಷರ ಹಾಕಿ ತಂಡದ ಸದಸ್ಯರಿಗೆ ತಲಾ ₹10 ಲಕ್ಷ ಬಹುಮಾನ ನೀಡಲಾಯಿತು. ಕೋಚ್ ಕ್ರೇಗ್ ಫುಲ್ಟನ್ ಅವರಿಗೆ ₹20 ಲಕ್ಷ ನೀಡಲಾಯಿತು.
- ಮಾಂಡವೀಯ ಜೊತೆ ಪಿ.ಟಿ.ಉಷಾ ಅವರೂ ಪದಕ ವಿಜೇತರನ್ನು ಗೌರವಿಸಿದರು. ಒಲಿಂಪಿಕ್ ಸಂಸ್ಥೆಯ ಬಹುತೇಕ ಕಾರ್ಯಕಾರಿ ಸಮಿತಿ ಸದಸ್ಯರು ಹಾಜರಿದ್ದರು.




IAS/KAS Academy

## ❖ ಜಾತಿವಾರು ಸಮೀಕ್ಷೆಯಲ್ಲಿ 'ಕಲ್ಯಾಣ'ದ 6 ಜಿಲ್ಲೆ ಹಿಂದೆ

**ಸಂದರ್ಭ: ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಮಾಹಿತಿ ಸಂಗ್ರಹದಲ್ಲಿ ಕಲ್ಯಾಣ ಕರ್ನಾಟಕದ 6 ಜಿಲ್ಲೆಗಳು ಹಿಂದೆ ಬಿದ್ದಿವೆ.**

- ರಾಜ್ಯದಲ್ಲಿ 1.48 ಕೋಟಿ ಕುಟುಂಬಗಳ ಸುಮಾರು 6.14 ಕೋಟಿ ಜನಸಂಖ್ಯೆಯನ್ನು ಸಮೀಕ್ಷೆಗೆ ಒಳಪಡಿಸುವುದು ಗುರಿ. ಅಕ್ಟೋಬರ್ 13ರ ಸಂಜೆ 6.30ರ ವೇಳೆಗೆ ಸಮೀಕ್ಷೆ ಯಲ್ಲಿ 4.92 ಕೋಟಿ ಜನರ ಮಾಹಿತಿ ಯನ್ನು ಕ್ರೋಡೀಕರಣ ಮಾಡಿ ಶೇ 80.15ರಷ್ಟು ಪೂರ್ಣಗೊಳಿಸಲಾಗಿದೆ.
- ಕೊಪ್ಪಳ ಹೊರತುಪಡಿಸಿ 'ಕಲ್ಯಾಣ'ದ ಉಳಿದ ಆರು ಜಿಲ್ಲೆಗಳು ಕೊನೆಯಲ್ಲಿರುವ 10 ಜಿಲ್ಲೆಗಳಲ್ಲಿ ಸ್ಥಾನ ಪಡೆದಿವೆ. ಅದರಲ್ಲಿ ಕೊಡಗು, ಚಿಕ್ಕಬಳ್ಳಾಪುರ, ಮೈಸೂರು ಹಾಗೂ ವಿಜಯಪುರ ಜಿಲ್ಲೆಗಳೂ ಇವೆ.
- ಯಾದಗಿರಿ ಜಿಲ್ಲೆಯಲ್ಲಿ ಶೇ 69.37ರಷ್ಟು ಪ್ರಗತಿಯಾ ಗಿದ್ದು, ರಾಜ್ಯದಲ್ಲೇ ಕೊನೆಯ ಸ್ಥಾನದಲ್ಲಿದೆ. ಜನಸಂಖ್ಯೆ ಮಾಹಿತಿ ಸಂಗ್ರಹದಲ್ಲಿ ಚಿಕ್ಕಮಗಳೂರು (ಶೇ 91.32), ತುಮಕೂರು (90.03), ಮಂಡ್ಯ (90) ಮೊದಲ ಮೂರು ಸ್ಥಾನಗಳಲ್ಲಿವೆ. ಹಾವೇರಿ (89.87), ದಾವಣಗೆರೆ (87), ಬೆಂಗಳೂರು ದಕ್ಷಿಣ (87.35), ಹಾಸನ (86), ಶಿವಮೊಗ್ಗ (86), ಚಿತ್ರದುರ್ಗ (86.11), ಉಡುಪಿ (85.11) ಅಗ್ರ 10 ಸ್ಥಾನಗಳಲ್ಲಿವೆ.
- ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳಲ್ಲಿ 1.44 ಕೋಟಿ ಜನರನ್ನು ಸಮೀಕ್ಷೆಗೆ ಒಳಪಡಿಸುವ ಗುರಿ ಇತ್ತು. ಈವರೆಗೆ 1.07 ಕೋಟಿ ಜನರ ಮಾಹಿತಿ ಸಂಗ್ರಹಿಸಲಾಗಿದೆ. ಕೊಪ್ಪಳ (ಶೇ 82.27) ರಾಜ್ಯದಲ್ಲಿ 14ನೇ ಸ್ಥಾನದಲ್ಲಿದೆ. ಉಳಿದಂತೆ ಬೀದರ್ 25, ರಾಯಚೂರು 26, ಬಳ್ಳಾರಿ 27, ಕಲಬುರಗಿ 28ನೇ ಸ್ಥಾನದಲ್ಲಿವೆ.
- 'ಕೆಲ ಕುಟುಂಬಗಳು ಹಳೇ, ಹೊಸ ಪಡಿತರ ಚೀಟಿ ಹೊಂದಿವೆ. ಹೊಸ ಪಡಿತರ ಚೀಟಿ ಅನ್ವಯ ಕುಟುಂಬದ ಸದಸ್ಯರ ಹೆಸರು ಸೇರ್ಪಡೆ ಮಾಡಿದ್ದರೂ ಹಳೇ ಪಡಿತರ ಚೀಟಿಯಲ್ಲಿನ ಹೆಸರುಗಳು ಸಮೀಕ್ಷೆಯ ಉಳಿಕೆ ಪಟ್ಟಿಯಲ್ಲಿ ಕಾಣಿಸಿಕೊಳ್ಳು ತ್ತಿವೆ' ಇದೂ ಹಿನ್ನಡೆಗೆ ಕಾರಣ' ಎನ್ನುತ್ತಾರೆ ಡಿಡಿಪಿಐ ಚನ್ನಬಸಪ್ಪ ಮುಧೋಳ.

## ❖ ಕೆಮ್ಮಿನ ಕಲುಷಿತ ಸಿರಪ್: ಡಬ್ಲ್ಯುಎಚ್ಒ ಎಚ್ಚರಿಕೆ

**ಸಂದರ್ಭ: ಭಾರತದಲ್ಲಿ ಮಾರಾಟವಾದ ಕಳಪೆ ಗುಣಮಟ್ಟದ ಕೆಮ್ಮಿನ ಸಿರಪ್ ಕುರಿತು ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯುಎಚ್ಒ) ಎಚ್ಚರಿಕೆ ನೀಡಿದೆ.**

- ಕೋಲ್ಡ್ರಿಫ್, ರೆಸ್ಪಿಫ್ರೆಶ್ ಟಿಆರ್, ಮತ್ತು ರಿಲೈಫ್ ಕಂಪನಿಗಳ ಕೆಮ್ಮಿನ ಕಲುಷಿತ ಸಿರಪ್‌ಗಳು ವಿಶ್ವದಾದ್ಯಂತ ಎಲ್ಲಿ ಪತ್ತೆಯಾದರೂ ತಕ್ಷಣ ತಿಳಿಸುವಂತೆ ಸೂಚಿಸಿದೆ.
- ಮಧ್ಯಪ್ರದೇಶ ಮತ್ತು ರಾಜಸ್ಥಾನ ದಲ್ಲಿ ಇಂಥ ಸಿರಪ್ ಸೇವಿಸಿ 5 ವರ್ಷ ದೊಳಗಿನ 22 ಮಕ್ಕಳು ಮೃತಪಟ್ಟಿರುವು ದನ್ನು ಗಂಭೀರವಾಗಿ ಪರಿಗಣಿಸಿರುವ ಡಬ್ಲ್ಯುಎಚ್ಒ, ವಿಶ್ವದಾದ್ಯಂತ ಈ ಎಚ್ಚರಿಕೆ ರವಾನಿಸಿದೆ.
- 'ರಾಷ್ಟ್ರೀಯ ನಿಯಂತ್ರಣ ಪ್ರಾಧಿಕಾರದ ಅಧಿಕಾರಿಗಳು (ಎನ್‌ಆರ್‌ಎ) ತಮ್ಮ ದೇಶದಲ್ಲಿ ಕೆಮ್ಮಿನ ಕಳಪೆ ಸಿರಪ್ ಮಾರಾಟ ಆಗುತ್ತಿಲ್ಲ ಎನ್ನುವುದನ್ನು ಪರಿಶೀಲಿಸಿ ಖಚಿತಪಡಿಸಿಕೊಳ್ಳಬೇಕು. ಎಲ್ಲಾದರೂ ಕಂಡುಬಂದರೆ ತಕ್ಷಣವೇ ಕ್ರಮ ವಹಿಸಬೇಕು' ಎಂದು ಡಬ್ಲ್ಯುಎಚ್ಒ ಹೇಳಿದೆ.
- ಕೆಮ್ಮಿನ ಕಳಪೆ ಸಿರಪ್ ಮಾರಾಟ ಮತ್ತು ಇಂತಹ ಸಿರಪ್ ಸೇವನೆಯಿಂದ ಮಕ್ಕಳಲ್ಲಿ ಅಡ್ಡ ಪರಿಣಾಮಗಳು ಕಂಡುಬಂದರೆ ವೈದ್ಯರು, ಆರೋಗ್ಯ ಕಾರ್ಯಕರ್ತರು ಅದನ್ನು ತಕ್ಷಣ ರಾಷ್ಟ್ರೀಯ ಔಷಧ ವಿಜಿಲೆನ್ಸ್ ಕೇಂದ್ರ ಮತ್ತು ರಾಷ್ಟ್ರೀಯ ನಿಯಂತ್ರಣ ಪ್ರಾಧಿಕಾರದ ಗಮನಕ್ಕೆ ತರಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದೆ.
- ಕೆಮ್ಮಿನ ಕಳಪೆ ಸಿರಪ್ ಪೂರೈಕೆ ಜಾಲದ ಮೇಲೆ ಕಣ್ಗಾವಲು ಇರಿಸುವಂತೆ ಮತ್ತು ಇಂತಹ ಕಳಪೆ ಉತ್ಪನ್ನದಿಂದ ಭಾದಿತವಾಗಿರುವ ಪ್ರದೇಶ ಗಳಲ್ಲಿ ಅತೀವ ಶ್ರದ್ಧೆ ವಹಿಸುವಂತೆಯೂ ವಿಶ್ವ ಆರೋಗ್ಯ ಸಂಸ್ಥೆ ಭಾರತಕ್ಕೆ ಸೂಚಿಸಿದೆ.

Dr. RajKumar IAS/KAS Academy

ಸಿರಪ್‌ನಲ್ಲಿ 'ಡಿಇಜಿ' ವಿಷ

- ಭಾರತದಲ್ಲಿ ಸ್ರೇಸನ್ ಫಾರ್ಮಾಸ್ಯುಟಿಕಲ್ಸ್, ರೆಡ್‌ನೆಕ್ಸ್ ಮತ್ತು ಶೇಪ್ ಫಾರ್ಮಾ ತಯಾರಿಸಿದ ಕೆಮ್ಮಿನ ಸಿರಪ್‌ಗಳಲ್ಲಿ ಡಿ– ಎಥಿಲೀನ್ ಗ್ಲೈಕಾಲ್ (ಡಿಇಜಿ) ಎಂಬ ವಿಷಕಾರಿ ಅಂಶ ಇದೆ ಎಂದು ಕೇಂದ್ರ ಔಷಧ ಗುಣಮಟ್ಟ ನಿಯಂತ್ರಣಾ ಸಂಸ್ಥೆ (ಸಿಡಿಎಸ್‌ಸಿಒ) ವಿಶ್ವ ಆರೋಗ್ಯ ಸಂಸ್ಥೆಗೆ ಅಕ್ಟೋಬರ್ 8ರಂದು ಸಲ್ಲಿಸಿದ ವರದಿಯಲ್ಲಿ ಹೇಳಿತ್ತು.
- ಡಬ್ಲ್ಯುಎಚ್‌ಒ ಕೂಡ ಇದನ್ನು ದೃಢಪಡಿಸಿತ್ತು. ಇದರ ಬೆನ್ನಲ್ಲೇ, ಈ ಸಿರಪ್‌ಗಳ ತಯಾರಿಕೆ ಮತ್ತು ಮಾರಾಟವನ್ನು ನಿಷೇಧಿಸಲಾಗಿತ್ತು. ಈ ಸಿರಪ್‌ಗಳನ್ನು ಭಾರತದಿಂದ ಬೇರೆಲ್ಲಿಗೂ ರಫ್ತು ಮಾಡುತ್ತಿಲ್ಲ ಎಂದು ಸಿಡಿಎಸ್‌ಸಿಒ ಹೇಳಿದೆ.

## ❖ ರಾಬ್ಸನ್: ಅಣುರಚನೆಯ ಚಂದಕ್ಕೆ ಸಂದ ನೊಬೆಲ್

**ಸಂದರ್ಭ:2025ನೇ ಸಾಲಿನ ರಸಾಯನವಿಜ್ಞಾನದ ನೊಬೆಲ್ ಲಭಿಸಿದ್ದು ಸುಸುಮು ಕಿಟಾಗವಾ, ರಿಚರ್ಡ್ ರಾಬ್ಸನ್ ಮತ್ತು ಓಮರ್ ಯಾಘಿ ಅವರಿಗೆ; ಬೇರೆ ಬೇರೆ ಹಿನ್ನೆಲೆಯ ಈ ಮೂವರು ರಸಾಯನವಿಜ್ಞಾನಿಗಳನ್ನು ಒಂದೆಡೆ ಸೇರಿಸಿದ್ದು ಲೋಹ-ಸಾವಯವ ಚೌಕಟ್ಟುಗಳು!**

- 'ಲೋಹ-ಸಾವಯವ ಚೌಕಟ್ಟು'ಗಳು ಎಂಬ ಈ ಅಪರಿಮಿತ ಅನ್ವಯಿಕೆಗಳನ್ನುಳ್ಳ ರಚನೆ ತಯಾರಾಗಲು ನಾಂದಿ ಹಾಡಿದ್ದು ರಾಬ್ಸನ್. ಇಂಗ್ಲೆಂಡ್‌ನಲ್ಲಿ 1937ರ ಜೂನ್ 4ರಂದು ಜನಿಸಿದ ಇವರು ತಮ್ಮ ಪ್ರಾಥಮಿಕ ಶಿಕ್ಷಣವನ್ನು ಇಂಗ್ಲೆಂಡಿನಲ್ಲೇ ಮುಗಿಸಿ, ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದಲ್ಲಿ ಉನ್ನತ ಶಿಕ್ಷಣವನ್ನು ಮುಂದುವರೆಸಿದರು; ಕ್ಯಾಲ್ ಟೆಕ್ ಮತ್ತು ಸ್ಟಾನ್ಫರ್ಡ್ ವಿಶ್ವವಿದ್ಯಾಲಯಗಳಲ್ಲಿ ತಮ್ಮ ಪೋಸ್ಟ್ ಡಾಕ್ಟರಲ್ ಸಂಶೋಧನೆಗಳನ್ನು ನಡೆಸಿ, ನಂತರ ಮೆಲ್ಬೋರ್ನ್ ವಿಶ್ವವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿ ವೃತ್ತಿಯನ್ನು ಪ್ರಾರಂಭಿಸಿ, ಅಲ್ಲಿಯೇ, ತಮ್ಮ ನಿವೃತ್ತಿಯವರೆಗೂ ಕಾರ್ಯನಿರ್ವಹಿಸಿದರು.
- ರಸಾಯನವಿಜ್ಞಾನದ ವಿದ್ಯಾರ್ಥಿಗಳಿಗೆ 'ಬಾಲ್ ಅಂಡ್ ಸ್ಟಿಕ್ ಮಾಡೆಲ್' ಗೊತ್ತೇ ಇರುತ್ತದೆ; ರಾಸಾಯನಿಕ ಸಂಯುಕ್ತ ಪದಾರ್ಥಗಳ 3-ಆಯಾಮದ ರಚನೆಯನ್ನು ಅರ್ಥೈಸಿಕೊಳ್ಳಲು ಪುಟಾಣಿ ಚೆಂಡುಗಳು ಮತ್ತು ಕಡ್ಡಿಗಳನ್ನು ಬಳಸಿ ಮಾದರಿಗಳನ್ನು ತಯಾರಿಸಬಹುದು. ರಾಸಾಯನಿಕ ಬಂಧವನ್ನು, ಅಣುವಿನ ಜೋಡಣೆಯನ್ನು ಸರಳವಾಗಿ ತಿಳಿದುಕೊಳ್ಳುವುದಕ್ಕೆ ಈ ಮಾದರಿ ಅತ್ಯಂತ ಸಹಾಯಕ. ಮೊದಲ ಬಾರಿಗೆ 1883ರಲ್ಲಿ ಆಗಸ್ಟ್ ಹಾಫ್ಮನ್ ಎಂಬ ಜರ್ಮನ್ ವಿಜ್ಞಾನಿ ಉಲನ್ ಉಂಡೆಗಳು ಮತ್ತು ಕ್ರೋಷಕಡ್ಡಿಗಳನ್ನು ಬಳಸಿ ಆಣ್ವಿಕ ರಚನೆಯನ್ನು ಸರಳವಾಗಿ ಎಲ್ಲರಿಗೂ ಅರ್ಥಮಾಡಿಸಲು ಮೊದಲ 'ಬಾಲ್ ಅಂಡ್ ಸ್ಟಿಕ್ ಮಾಡೆಲ್' ತಯಾರಿಸಿದರು. ಮುಂದಿನ ದಿನಗಳಲ್ಲಿ ಮರದಲ್ಲಿ ಕೆತ್ತಿ, ಕೊರೆದು ತಯಾರಿಸುತ್ತಿದ್ದರು.
- ರಿಚರ್ಡ್ ರಾಬ್ಸನ್ ಅವರು ತಮ್ಮ ರಸಾಯನವಿಜ್ಞಾನದ ಸಂಶೋಧಕರಿಗೊಂದು ಕಾರ್ಯಾಗಾರ ನಡೆಸುತ್ತಿದರು. ಅಲ್ಲಿ ಅವರೆಲ್ಲ ಮರದಲ್ಲಿ ಕೊರೆದು ತಯಾರಿಸುತ್ತಿದ್ದ ಗುಂಡುಗಳು ಮತ್ತು ಕಡ್ಡಿಗಳಿಗೆ ನಿರ್ದಿಷ್ಟವಾದ ರೂಪ, ಆಕಾರವಿರಬೇಕಾಗುತ್ತಿತ್ತು. ಆ ಗುಂಡುಗಳಲ್ಲಿ ಎಷ್ಟು ರಂಧ್ರಗಳಿರಬೇಕು ಎಂಬುದು ಅದು ಯಾವ ಅಣುವಿನ ಪ್ರತಿರೂಪ ಎಂಬುದರ ಮೇಲೆ ಆಧಾರಿತ. ಉದಾಹರಣೆಗೆ, ಅದು ಇಂಗಾಲವಾದರೆ ನಾಲ್ಕು ರಂಧ್ರ, ಆಮ್ಲಜನಕವಾದರೆ ಎರಡು ರಂಧ್ರ - ಹೀಗೆ! ಅಷ್ಟೇ ಅಲ್ಲದೆ, ಆ ರಂಧ್ರಗಳು ಯಾವ ಕೋನದಲ್ಲಿರಬೇಕು ಎಂಬುದು ಕೂಡ, ಆ ಪರಮಾಣುವು ಎಂತಹ ರಾಸಾಯನಿಕ ಬಂಧದಲ್ಲಿ ಪಾಲ್ಗೊಳ್ಳುತ್ತದೆ ಎಂಬುದರ ಮೇಲೆ ನಿರ್ಭರವಾಗುತ್ತದೆ. ಇಂತಹ ವಿವರಗಳನ್ನು ಗಮನಿಸುತ್ತಾ, ರಾಬ್ಸನ್ ಅವರಿಗೆ ಈ 3–ಡಿ ರಚನೆಗಳಲ್ಲಿರುವ ನಿಗದಿತ ಅಂತರಗಳು ಗಮನ ಸೆಳೆದವು; ಒಂದಕ್ಕೊಂದು ಸೇರುತ್ತಾ ಈ ಲೋಹದ ಮತ್ತು ಇಂಗಾಲದ ಅಣುಗಳು ಉಂಟುಮಾಡುವ ಚೌಕಟ್ಟುಗಳಲ್ಲಿ, ನಿರ್ದಿಷ್ಟವಾಗಿಯೇ ಇರುವ ಕೋನ, ರಂಧ್ರ, ಜೋಡಣೆಯಂತಹ ವಿಷಯಗಳು ಅವರಲ್ಲಿ ಹೊಸ ಹೊಳಹನ್ನು ಹುಟ್ಟಿಸಿತ್ತು.

Dr. Rajkumar IAS/KAS Academy

- ಸುಮಾರು ಹತ್ತು ವರ್ಷಗಳು ಅದೇ ಯೋಚನೆಯಲ್ಲಿದ್ದ ರಾಬ್ಸನ್ ಅವರು, ಪ್ರತಿ ವರ್ಷದ ಕಾರ್ಯಾಗಾರದಲ್ಲೂ ಅದೇ ನಿಟ್ಟಿನಲ್ಲಿ ಯೋಚಿಸುತ್ತಿದ್ದರು. ಇಂತಹ ಚೌಕಟ್ಟುಗಳಲ್ಲಿ ಹೇಗೆ ಅನಿಲಗಳನ್ನು ಸೆರೆಹಿಡಿಯಬಹುದು, ವೇಗವರ್ಧಕಗಳನ್ನು ಹಿಡಿದಿಡಬಹುದು ಎಂಬಂತಹ ಯೋಚನೆಗಳು ಯೋಜನೆಗಳಾಗಿ ಬದಲಾದವು. ತಾಮ್ರದ ಅಣುಗಳೊಂದಿಗೆ ಸಾವಯವ ಆಣ್ವಿಕ ಗುಂಪುಗಳಾದ 'ನೈಟ್ರೈಲ್'ಗಳನ್ನು ಸೇರಿಸಿದಾಗ, 3–ಆಯಾಮದ ರಚನೆ ಹೇಗಿರುತ್ತದೆಂಬ ಸಿದ್ಧಾಂತವನ್ನು ರಾಬ್ಸನ್ ಸೃಜಿಸಿದರು.
- ಈ ಲೋಹ-ಸಾವಯವ ಉತ್ಪನ್ನದ ಭೌತಿಕ ರಚನೆಯ ಮಾದರಿಯನ್ನು ತಯಾರಿಸಿದಾಗ, ವಜ್ರವು ಇಂಗಾಲದ ಅಣುಗಳ ಜೋಡಣೆಯಿಂದ ಹೇಗೆ ರಚನೆಯಾಗಿರುತ್ತದೋ, ಅಂತಹದ್ದೇ ಸ್ಫಟಿಕದ ರೂಪ ತಯಾರಾಗುತ್ತದೆ ಎಂದು ಪ್ರತಿಪಾದಿಸಿದರು. ಆ ರಚನೆಯಲ್ಲಿ, ಅಣುಗಳು ಮತ್ತು ಬಂಧಗಳ ನಡುವೆ ಇರುವ ನಿರ್ದಿಷ್ಟ ರೂಪದ, ಆಕಾರದ, ಗಾತ್ರದ ಅಂತರಗಳಲ್ಲಿ ನಿರ್ದಿಷ್ಟ ಪರಮಾಣುಗಳನ್ನು, ಅಯಾನುಗಳನ್ನು, ಅಣುಗಳನ್ನು ಕೂರಿಸಬಹುದು ಎಂಬುದನ್ನು ವಿವರಿಸಿದರು. ಇದನ್ನು ಅವರು ಅನೇಕ ಕೋಣೆಗಳಿರುವ ಹೋಟೆಲ್ ಮಳಿಗೆಗೆ ಹೋಲಿಸಿದರು; ತಮಗೆ ಹೊಂದುವ ಕೋಣೆಗೆ ಸೂಕ್ತ ಅತಿಥಿ ಬಂದು ಹೋಗುವ ಹಾಗೆ, ವಿವಿಧ ಅಣುಗಳಿಗೆ ತಕ್ಕ ಹಾಗೆ ಚೌಕಟ್ಟಿನೊಳಗಿನ ಅಂತರಗಳನ್ನು ರಚಿಸಬಹುದು ಎಂಬುದನ್ನು ರಾಬ್ಸನ್ ಅವರ ಮಾದರಿಯು ವಿವರಿಸಿತು.
- ಈ ಮೂಲಭೂತ ಕಲ್ಪನೆಯ ಮೇಲೆ ಮತ್ತಿಬ್ಬರು ರಸಾಯನ ವಿಜ್ಞಾನಿಗಳಾದ ಸುಸುಮು ಕಿಟಾಗವಾ ಮತ್ತು ಓಮರ್ ಯಾಘಿ ತಮ್ಮ ಪರಿಶ್ರಮ ಮತ್ತು ಪರಿಣಿತಿಯನ್ನು ಧಾರೆಯೆರೆದು, ರಾಬ್ಸನ್ ಅವರೊಂದಿಗೆ ನೊಬೆಲ್ ಪ್ರಶಸ್ತಿಗೆ ಭಾಜನರಾದರು.
- ರಾಬ್ಸನ್ ಅವರು ನೊಬೆಲ್ ಪಡೆದ ಸುದ್ದಿ ತಿಳಿದ ನಂತರ, ಫೋನಿನಲ್ಲಿ ನೀಡಿದ ಸಂದರ್ಶನದಲ್ಲಿ ತಮ್ಮ ಸಂಶೋಧನೆಯ ಬಗ್ಗೆ ಹಂಚಿಕೊಳ್ಳುತ್ತಾ, 'ತಾನೇನೂ ವಿಶೇಷವಾಗಿ ಮಾಡಿಲ್ಲ; ಯಾವುದೋ ಅಣುಗಳನ್ನು ಮಿಕ್ಸ್ ಮಾಡಿ, ಏನೋ ಒಂದನ್ನು ತಯಾರಿಸಿದೆ ಅಷ್ಟೇ' ಎಂದು ವಿನಮ್ರರಾಗಿ ಹೇಳಿ ನಗೆಯಾಡಿದರು. 'ಆದರೆ, ಎಲ್ಲಾ ಜವಾಬ್ದಾರಿಗಳನ್ನೂ ಮರೆತು ವಿಜ್ಞಾನದ ಬಗ್ಗೆ, ಸಂಶೋಧನೆಯ ಬಗ್ಗೆ ಒಂದು ಬಗೆಯ ಗೀಳಿದ್ದರೆ ಮಾತ್ರ ಇಂತಹದ್ದೇನಾದರೂ ಸಾಧ್ಯವಾಗುತ್ತದೆಯಷ್ಟೇ! ಹತ್ತು ವರ್ಷಗಳಿಂದಲೂ ಗುಂಗು ಹಿಡಿಸಿದ್ದ ಆಣ್ವಿಕ ರಚನೆಯ ನಡುವಿನ ಅಂತರಗಳು, ಹೀಗೆ ಮುಂದೆ ಅನೇಕ ಅದ್ಭುತ ಬೆಳವಣಿಗೆಗಳಿಗೆ ಕಾರಣವಾಗುತ್ತದೆ ಎಂಬ ಅಚಲ ನಂಬಿಕೆಯಿತ್ತು' ಎಂದು ತಮ್ಮ ಮನದ ಮಾತನ್ನು ಹಂಚಿಕೊಂಡರು. ಮಾಡುವ ಕೆಲಸದಲ್ಲಿ ಸಂಪೂರ್ಣ ತೊಡಗಿಸಿಕೊಳ್ಳುವಿಕೆ ಮತ್ತು ಅಪರಿಮಿತ ಶ್ರದ್ಧೆ, ಅನನ್ಯ ಫಲಿತಾಂಶಗಳನ್ನು ನೀಡುತ್ತದೆ ಎಂಬುದನ್ನು ಮತ್ತೊಮ್ಮೆ ಸಾಬೀತು ಪಡಿಸಿದರು.

## ❖ ಎ.ಐ. ನೀರಾವರಿ

**ಸಂದರ್ಭ: ಇದು ಎ.ಐ. ಜಮಾನಾ. ಇದೀಗ ಕೃಷಿಕ್ಷೇತ್ರದಲ್ಲೂ ಎ.ಐ. ಬಳಕೆ ಶುರುವಾಗಿದ್ದು, ಇದೊಂದು ಕ್ರಾಂತಿಕಾರಕ ಹೆಜ್ಜೆ ಎನ್ನಬಹುದು.**

- ಮೈಸೂರಿನ ಮೊಬಿಟೆಕ್ ಸಂಸ್ಥೆ ಅಭಿವೃದ್ಧಿ ಪಡಿಸಿರುವ 'ಎ.ಐ. ಆಧಾರಿತ ನೀರಾವರಿ ಹಾಗೂ ಗೊಬ್ಬರ ಯಾಂತ್ರಿಕೃತ ವ್ಯವಸ್ಥೆ' ತಂತ್ರಜ್ಞಾನ ಈಗ ಕೃಷಿಕ್ಷೇತ್ರವನ್ನು ಮತ್ತಷ್ಟು ಸ್ಮಾರ್ಟ್ ಆಗಿಸುತ್ತಿದೆ.
- ರೈತರು ತಮ್ಮ ಜಮೀನಿನಲ್ಲಿ ಈ ತಂತ್ರಜ್ಞಾನ ಅಳವಡಿಸಿದರೆ ತಮ್ಮ ಬೆಳೆಗಳಿಗೆ ಎಷ್ಟು ನೀರು ಕೊಡಬೇಕು, ಯಾವ ಬೆಳೆಗೆ ಎಷ್ಟು ಗೊಬ್ಬರ ನೀಡಬೇಕು, ಹವಾಮಾನ ಹೇಗಿದೆ, ಮಣ್ಣಿನ ತೇವಾಂಶ ಹೇಗಿದೆ, – ಎಂಬಿತ್ಯಾದಿ ಮಾಹಿತಿಗಳನ್ನು 'ಡಿಕಾನ್‌ಎಜ್' ಮೊಬೈಲ್ ಆ್ಯಪ್ ಮೂಲಕ ರೈತರಿಗೆ ತಲುಪುತ್ತದೆ.

- ಕೃಷಿಭೂಮಿಗೆ ನೀರುಣಿಸಲು ಬಳಸುವ ಪಂಪ್‌ಸೆಟ್‌ಗಳಿಗೆ ರೈತರು ವಿದ್ಯುತ್‌ಚ್ಛಕ್ತಿಯ ಮೊರೆ ಹೋಗುವುದು ಸಾಮಾನ್ಯ. ಆದರೆ, ಲೋಡ್‌ಶೆಡ್ಡಿಂಗ್, ಸಿಂಗಲ್ ಫೇಸ್‌ನಂತಹ ಹಲವಾರು ಕಾರಣಗಳಿಂದ ಯಾವಾಗ ವಿದ್ಯುತ್ ಬರುತ್ತದೆ, ಯಾವಾಗ ಹೋಗುತ್ತದೆ ಎಂಬುದು ರೈತರಿಗೆ ಗೊತ್ತೇ ಆಗುವುದಿಲ್ಲ. ವೋಲ್ಟೇಜ್ ಹೆಚ್ಚು ಕಡಿಮೆಯಿಂದ ಮೋಟಾರ್ ಪಂಪ್‌ಸೆಟ್‌ಗಳು ಸುಟ್ಟುಹೋಗುವ ಸಾಧ್ಯತೆಗಳೂ ಹೆಚ್ಚಿರುತ್ತವೆ. ಸುಟ್ಟ ಪಂಪ್‌ಸೆಟ್‌ಗಳನ್ನು ಸರಿಪಡಿಸಿ, ಮತ್ತೆ ಅವನ್ನು ಅಳವಡಿಸಲು ರೈತರಿಗೆ ಸಾಕಷ್ಟು ಸಮಯ ಬೇಕಾಗುತ್ತದೆ; ಜೊತೆಗೆ ಸಾಕಷ್ಟು ಹಣವನ್ನೂ ವ್ಯಯಿಸಬೇಕಾಗುತ್ತದೆ. ಇದರಿಂದ ತೋಟ, ಗದ್ದೆಗಳ ಕೆಲಸಗಳಿಗೂ ಸಮಸ್ಯೆ ಉಂಟಾಗುತ್ತದೆ. ಆದರೆ, ಎ.ಐ. ಆಧಾರಿತ ತಂತ್ರಜ್ಞಾನ ಇದಕ್ಕೆಲ್ಲ ಪರಿಹಾರ ಎನಿಸಿದೆ.
- ರೈತರು ತಮ್ಮ ಮನೆಯಲ್ಲಿಯೇ ಕುಳಿತು ಅಥವಾ ಯಾವುದೇ ಸ್ಥಳದಿಂದಲಾದರೂ ತಮ್ಮ ತೋಟ ಅಥವಾ ಹೊಲಗಳಿಗೆ ವಿದ್ಯುತ್ ಚಾಲಿತ ಪಂಪ್‌ಸೆಟ್ ಮೋಟಾರನ್ನು ಮೊಬೈಲ್ ಮೂಲಕ ನಿಯಂತ್ರಿಸಬಹುದು. ಕರೆಂಟ್ ಯಾವಾಗ ಬರುತ್ತೆ, ಯಾವಾಗ ಹೋಗುತ್ತದೆ ಎಂಬುದನ್ನು ತಿಳಿಯಬಹುದು. ಇದರಿಂದ ರಾತ್ರಿ ಹೊತ್ತು ಬೆಳೆಗಳಿಗೆ ನೀರುಣಿಸಲು ಜಮೀನಿಗೆ ಹೋಗುವುದು ತಪ್ಪುತ್ತದೆ.
- ಎಲ್ಲ ರೀತಿಯ ಅಳತೆಯ ತೋಟ ಮತ್ತು ಗದ್ದೆಗಳಿಗೆ ಉಪಯುಕ್ತವಾಗಿದ್ದು, ಒಂದು ಮೊಬೈಲ್ ಸಿಮ್ ಕಾರ್ಡ್‌ನಿಂದ ಹಲವು ತೋಟಗಳನ್ನು ನಿಯಂತ್ರಿಸಬಹುದು. ಸೋಲಾರ್ ಆಧಾರಿತ ಕಾರ್ಯನಿರ್ವಹಣೆ ಸೌರಫಲಕದೊಂದಿಗೆ 24 ಗಂಟೆ ಕಾರ್ಯ ನಿರ್ವಹಿಸಲಿದೆ. ಅಷ್ಟೇ ಅಲ್ಲದೆ ಸದೃಢ ಬ್ಯಾಟರಿ ನೆರವು, ಮೋಡ ಕವಿದ ವಾತಾವರಣದಲ್ಲೂ 24 ಗಂಟೆ ಕೆಲಸ ಮಾಡುವ ಸಾಮರ್ಥ್ಯವನ್ನು ಹೊಂದಿದೆ.

**<u>ಕಾರ್ಯವಿಧಾನ ಹೇಗೆ ?</u>**

- ಮೋಟಾರ್ ಪಂಪ್‌ಸೆಟ್ ಸ್ಟಾರ್ಟರ್ ಬೋರ್ಡ್‌ನಲ್ಲಿ 'ಡಿಒಲ್ ಸ್ಟಾರ್ಟರ್' (ಮೇನ್ ಕಂಟ್ರೊಲರ್) ಇರುತ್ತದೆ. ಇದನ್ನು ಕಂಟ್ರೋಲ್ ಮಾಡಲು ಎಂಸಿಯು (ಮೋಟಾರ್ ಕಂಟ್ರೋಲ್ ಯುನಿಟ್) ಹಾಗೂ ಎಂಎಸ್‌ಯು (ಮೋಟಾರ್ ಸ್ಟಾರ್ಟರ್ ಯೂನಿಟ್) ಬರುತ್ತದೆ. ಇವೆರಡು ಡಿವೈಸ್‌ಗಳನ್ನು ವೈಯರ್‌ಲೆಸ್ ಮೂಲಕ ಮೇನ್ ಮಾಸ್ಟರ್ ಕಂಟ್ರೋಲರ್ ಡಿಕ್ಯಾನ್ ಏಜ್‌ಗೆ ಕನೆಕ್ಟ್ ಮಾಡಲಾಗಿರುತ್ತದೆ.
- ಮೇನ್ ಕಂಟ್ರೋಲ್ ಬೋರ್ಡ್‌ನಲ್ಲಿ ಆಟೋ ಬ್ಯಾಕ್‌ವರ್ಡ್ (ಎಬಿಡಬ್ಲು) ಎನ್ನುವ ಡಿವೈಸ್ ಕೂಡ ಇರುತ್ತದೆ. ಇದು ನೀರಿನ ಹಾಗೂ ಗೊಬ್ಬರದ ಫಿಲ್ಟರ್ ಕ್ಲೀನ್ ಮಾಡಲು ಸಹಾಯ ಮಾಡುತ್ತದೆ. ವಾಟರ್ ಲೆವೆಲ್ ಕಂಟ್ರೊಲ್ ಯುನಿಟ್ ಅಳವಡಿಸಲಾಗುತ್ತದೆ.
- ಹವಾಮಾನ ಮಾಹಿತಿ ಯುನಿಟ್ ರೈತರಿಗೆ ತಮ್ಮ ಜಮೀನಿನ ಮಣ್ಣಿನಲ್ಲಿರುವ ತೇವಾಂಶದ ಕುರಿತು ಮಾಹಿತಿಯನ್ನು ನೀಡುತ್ತದೆ. ಈ ಎಲ್ಲಾ ಡಿವೈಸ್‌ಗಳು ಸೌರ ವಿದ್ಯುತ್ತನ್ನು ಬಳಸುವುದರಿಂದ ದಿನದ 24 ಗಂಟೆಯೂ ವಿದ್ಯುತ್ ಸಹಾಯವಿಲ್ಲದೆ ಕಾರ್ಯನಿರ್ವಹಿಸುತ್ತವೆ.
- ಈ ಎಲ್ಲಾ ಡಿವೈಸ್‌ಗಳು ಕಾರ್ಯನಿರ್ವಹಿಸಲು ಕೇವಲ ಒಂದು ಸಿಮ್ ಕಾರ್ಡ್ ಮಾತ್ರ ಸಾಕು. ಈ ಸಿಮ್ ಕಾರ್ಡ್ ಅಳವಡಿಸಿದರೆ ಸಾಕು, ರೈತರಿಗೆ ಪ್ರತಿ ದಿನ ತಮ್ಮ ಬೆಳೆಗಳು, ಅದಕ್ಕೆ ಬೇಕಾಗುವ ನೀರು, ಗೊಬ್ಬರದ ಮಾಹಿತಿಗಳು ಅವರನ್ನು ತಲುಪುತ್ತದೆ. ಮೊಬಿಟೆಕ್ ಸಂಸ್ಥೆ ಅಭಿವೃದ್ಧಿ ಪಡಿಸಿರುವ ಮೊಬೈಲ್ ಆ್ಯಪ್ ಮೂಲಕವೂ ಮಾಹಿತಿ ಪಡೆಯಬಹುದಾಗಿದೆ.

Dr. Rajkumar IAS KAS Academy

ಹಮಾಸ್ ಮತ್ತು ಇಸ್ರೇಲ್ ನಡುವಿನ ಸಂಘರ್ಷದಿಂದ ಜರ್ಜರಿತವಾಗಿದ್ದ ಗಾಜಾ ಪಟ್ಟಿಯಲ್ಲಿ ಹೊಸ ಬೆಳಕು ಮೂಡುವ ಸಾಧ್ಯತೆಗಳು ಗೋಚರಿಸುತ್ತಿವೆ. ಅಮೆರಿಕ ಮತ್ತಿತರ ದೇಶಗಳ ಮಧ್ಯಸ್ಥಿಕೆಯಲ್ಲಿ ಶಾಂತಿ ಒಪ್ಪಂದ ಏರ್ಪಟ್ಟಿದ್ದು, ಎರಡೂ ಗುಂಪುಗಳು ಒತ್ತೆಯಾಳುಗಳನ್ನು ಬಿಡುಗಡೆ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಿವೆ. ಗಾಜಾ ಪಟ್ಟಿಯ ಶೇ 80ರಷ್ಟು ಕಟ್ಟಡಗಳು ಹಾನಿಗೊಳಗಾಗಿದ್ದು, ಆಹಾರ, ವೈದ್ಯಕೀಯ ನೆರವು, ಶಾಂತಿಗಾಗಿ ಅಲ್ಲಿನ ಜನರು ಎದುರು ನೋಡುತ್ತಿದ್ದಾರೆ. ಈ ಬಾರಿಯ ನೊಬೆಲ್ ಶಾಂತಿ ಪ್ರಶಸ್ತಿಯ ಪ್ರಮುಖ 'ಸ್ಪರ್ಧಿ'ಯಾಗಿದ್ದ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪಾತ್ರ ಈ ಒಪ್ಪಂದದಲ್ಲಿ ಪ್ರಮುಖವಾಗಿದೆ



ಕದನ ವಿರಾಮ ಘೋಷಣೆ ನಂತರ ನಿರಾಶ್ರಿತರ ಕೇಂದ್ರದಲ್ಲಿದ್ದ ಗಾಜಾದ ನಾಗರಿಕರು ಅವಶೇಷಗಳ ನಡುವಿನ ರಸ್ತೆಯಲ್ಲಿ ತಮ್ಮ ಮನೆಗಳತ್ತ ಸಾಗಿದರು —ಎಎಫ್‌ಪಿ ಚಿತ್ರ

## ಮಧ್ಯಂತರ ಸರ್ಕಾರ

2007ರಿಂದ ಗಾಜಾವನ್ನು ತನ್ನ ಹಿಡಿತದಲ್ಲಿ ಇಟ್ಟುಕೊಂಡಿರುವ ಹಮಾಸ್ ಬಂಡುಕೋರ ಸಂಘಟನೆಯು ಶಾಂತಿ ಒಪ್ಪಂದಕ್ಕೆ ಸಮ್ಮತಿ ಸೂಚಿಸಿದ್ದರೂ, ಗಾಜಾದ ನಿಯಂತ್ರಣವನ್ನು ಬಿಟ್ಟುಕೊಡಲು ಅದಕ್ಕೆ ಮನಸ್ಸಿಲ್ಲ ಎಂದು ಹೇಳಲಾಗುತ್ತಿದೆ.

ಗಾಜಾ ಪಟ್ಟಿಯನ್ನು ಭಯೋತ್ಪಾದನೆ ಮುಕ್ತ ವಲಯವನ್ನಾಗಿ ಮಾಡಲಾಗುವುದು; ಅದು ನೆರೆ ರಾಷ್ಟ್ರಗಳಿಗೆ ಇನ್ನು ಮುಂದೆ ಬೆದರಿಕೆ ಒಡ್ಡದು ಎಂಬುದು 20 ಅಂಶಗಳ ಒಪ್ಪಂದದ ಮೊದಲ ಅಂಶ. ಬಂಡುಕೋರರು ಶಸ್ತ್ರ ತ್ಯಜಿಸಬೇಕು. ಅಂತಹವರಿಗೆ ಕ್ಷಮಾದಾನ ನೀಡಲಾಗುವುದು ಎಂದೂ ಒಪ್ಪಂದದಲ್ಲಿ ಹೇಳಲಾಗಿದೆ.

ಗಾಜಾದಲ್ಲಿ ತಾತ್ಕಾಲಿಕವಾಗಿ ಮಧ್ಯಂತರ ಸರ್ಕಾರ ರಚನೆಯಾಗಲಿದ್ದು, ರಾಜಕೀಯಯೇತರ ವ್ಯಕ್ತಿಗಳಿಂದ ಕೂಡಿದ ಪ್ಯಾಲೆಸ್ಟೀನ್ ಸಮಿತಿಯು ಗಾಜಾಪಟ್ಟಿ ಆಡಳಿತ ನಿರ್ವಹಿಸಲಿದೆ. ಪ್ಯಾಲೆಸ್ಟೀನ್ ಮತ್ತು ಅಂತರರಾಷ್ಟ್ರೀಯ ತಜ್ಞರು ಈ ಸಮಿತಿಯಲ್ಲಿರಲಿದ್ದಾರೆ. ಡೊನಾಲ್ಡ್ ಟ್ರಂಪ್ ಅಧ್ಯಕ್ಷತೆಯ 'ಶಾಂತಿ ಸ್ಥಾಪನಾ ಮಂಡಳಿ'ಯು ಮಧ್ಯಂತರ ಸರ್ಕಾರದ ಮೇಲ್ವಿಚಾರಣೆ ಮಾಡಲಿದೆ ಎಂದು ಒಪ್ಪಂದ ಹೇಳಿದೆ.

# ಗಾಜಾದಲ್ಲಿ ಹೊಸ ಬೆಳಕು?

ಪ್ರಜಾವಾಣಿ ವಾರ್ತೆ

ಒಂದು ಕಡೆ ಕಣ್ಣೀರು. ಮತ್ತೊಂದು ಕಡೆ ಹರ್ಷೋದ್ಗಾರ. ಕೆಲವರಂತೂ ಮಾತೇ ಹೊರಡದೇ ಗದ್ಗದಿತರಾಗಿದ್ದರು. ಇನ್ನೆಂದಿಗೂ ಮುಖ ಕಾಣಲು ಸಾಧ್ಯವಿಲ್ಲ ಎಂದುಕೊಂಡಿದ್ದಂಥವರು, ಜೀವಂತ ಇರಲಾರರು ಎಂದುಕೊಂಡಿದ್ದ ಪ್ರೀತಿಪಾತ್ರರು ಎದುರಿಗೆ ಬಂದು ನಿಂತ ಗಳಿಗೆ ಅದು. ಯಾವುದು ಅಸಾಧ್ಯ ಎಂದು ಭಾವಿಸಲಾಗಿತ್ತೋ, ಅದು ಸಾಧ್ಯವಾಗಿದ್ದ ಕ್ಷಣ...

ಎರಡು ವರ್ಷಗಳ ಯುದ್ಧದಿಂದ ಜರ್ಜರಿತವಾಗಿರುವ ಗಾಜಾ ಪಟ್ಟಿಯಲ್ಲಿ ಈಗ ಮನ ಕಲುಕುವ ದೃಶ್ಯಗಳು ಕಾಣುತ್ತಿವೆ. ಅಮೆರಿಕ ಮತ್ತು ಇತರ ದೇಶಗಳ ಪ್ರಯತ್ನದಿಂದ ಶಾಂತಿ ಒಪ್ಪಂದ ಏರ್ಪಟ್ಟಿದ್ದು, ಒಪ್ಪಂದಕ್ಕೆ ಅಮೆರಿಕದೊಂದಿಗೆ ಈಜಿಪ್ಟ್, ಕತಾರ್, ಟರ್ಕಿ ದೇಶಗಳೂ ಸಾಕ್ಷಿದಾರರಾಗಿ ಸಹಿ ಹಾಕಿವೆ. ಸೋಮವಾರ, ಹಮಾಸ್ ತನ್ನ ವಶದಲ್ಲಿದ್ದ 20 ಇಸ್ರೇಲಿಗರನ್ನು ಬಿಡುಗಡೆ ಮಾಡಿದ್ದರೆ, ಇಸ್ರೇಲ್ 2,000 ಕೈದಿಗಳು ಮತ್ತು ತಾನು ವಶಕ್ಕೆ ಪಡೆದಿದ್ದ ಪ್ಯಾಲೆಸ್ಟೀನ್‌ನ 1,700 ಮಂದಿಯನ್ನು ಬಿಡುಗಡೆ ಮಾಡಿದೆ.

ಈ ವರ್ಷದ ನೊಬೆಲ್ ಶಾಂತಿ ಪ್ರಶಸ್ತಿಗೆ ತಾನು ಅರ್ಹ ವ್ಯಕ್ತಿ ಎಂದು ಸ್ವಯಂ ಪ್ರತಿಪಾದಿಸಿಕೊಂಡಿದ್ದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಈ ಶಾಂತಿ ಒಪ್ಪಂದದಲ್ಲಿ ಮುಖ್ಯ ಪಾತ್ರ ವಹಿಸಿದ್ದು ಗಮನಾರ್ಹ. ಆದರೆ, ಗಾಜಾ ಪಟ್ಟಿಯಲ್ಲಿ ಸಂಪೂರ್ಣ ಶಾಂತಿ ಸ್ಥಾಪನೆ, ಮರು ನಿರ್ಮಾಣ ಸುಲಭದ ಕೆಲಸವಲ್ಲ. ಅದು ಬಹು ದೊಡ್ಡ ಸವಾಲು. ಅಂತರರಾಷ್ಟ್ರೀಯ ಸಮುದಾಯದ ಆಶಯದಂತೆ ಅಲ್ಲಿ ಪೂರ್ಣ ಪ್ರಮಾಣದಲ್ಲಿ ಶಾಂತಿ ನೆಲಸುವಂತೆ ಮಾಡಲು ಅವರು ಇದುವರೆಗೆ ವಹಿಸಿದ ಪಾತ್ರಕ್ಕಿಂತಲೂ ಹೆಚ್ಚಿನ ಶ್ರಮವನ್ನು ಮುಂದಿನ ದಿನಗಳಲ್ಲಿ ಹಾಕಬೇಕಿದೆ ಎಂದು ಅಂತರರಾಷ್ಟ್ರೀಯ ಮಾಧ್ಯಮಗಳು ವಿಶ್ಲೇಷಿಸಿವೆ.

ಯಾಕೆಂದರೆ, ಈ ಹಿಂದೆಯೂ ಇಸ್ರೇಲ್ ಮತ್ತು ಹಮಾಸ್ ನಡುವೆ ಕದನ ವಿರಾಮ ಘೋಷಿಸಲು ಪ್ರಯತ್ನಗಳು ನಡೆದಿದ್ದವು. ಆದರೆ, ಇಸ್ರೇಲ್ ಇದಕ್ಕೆ ಪೂರಕವಾಗಿ ನಡೆದುಕೊಂಡಿರಲಿಲ್ಲ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಕೆಲವು ನಿರ್ಧಾರಗಳು ಶಾಂತಿ ಪ್ರಕ್ರಿಯೆಗೆ ತಡೆ ಒಡ್ಡಿದ ನಿದರ್ಶನಗಳುಂಟು.

**ಮಾತು ಬದಲಿಸುವರೇ ನೆತನ್ಯಾಹು?:** ನೆತನ್ಯಾಹು ಅವರೊಂದಿಗೆ ವ್ಯವಹರಿಸುವುದು ಅಷ್ಟು ಸುಲಭವಲ್ಲ. ಅಮೆರಿಕದ ಹಿಂದಿನ ಅಧ್ಯಕ್ಷರಾದ ಬಿಲ್ ಕ್ಲಿಂಟನ್ ಮತ್ತು ಜೋ ಬೈಡನ್ ಅವರಿಗೂ ಇದರ ಅನುಭವ ಆಗಿದೆ. ಅಮೆರಿಕದ ಸಲಹೆಯನ್ನೂ ಮೀರಿ ಹಲವು ಬಾರಿ ಗಾಜಾ ಪಟ್ಟಿಯ ಮೇಲೆ ಸೇನಾ ದಾಳಿ ನಡೆಸುವ ಮೂಲಕ ಟ್ರಂಪ್ ಅವರ ಆಡಳಿತಕ್ಕೂ ನೆತನ್ಯಾಹು ಹಲವು ಸಂದರ್ಭಗಳಲ್ಲಿ ತಲೆನೋವು ತಂದಿದ್ದರು.

ಆದರೆ, ಈ ಬಾರಿ ಟ್ರಂಪ್ ಬಿಗಿ ಪಟ್ಟು ಹಿಡಿದು ನೆತನ್ಯಾಹು ಅವರನ್ನು ಕದನ ವಿರಾಮಕ್ಕೆ ಒಪ್ಪಿಸಿದ್ದಾರೆ. ತಮ್ಮ ಮಿತ್ರ ಪಕ್ಷಗಳ ವಿರೋಧದ ನಡುವೆಯೂ ನೆತನ್ಯಾಹು ಅವರು ಒಲ್ಲದ ಮನಸ್ಸಿನಿಂದಲೇ ಕದನವಿರಾಮಕ್ಕೆ ಒಪ್ಪಿಕೊಂಡಿದ್ದಾರೆ ಎನ್ನಲಾಗುತ್ತಿದೆ. ಅದೇ ರೀತಿಯಲ್ಲಿ ಇತ್ತ, ಒತ್ತೆಯಾಳುಗಳ ಬಿಡುಗಡೆಗೆ ಹಮಾಸ್ ಅನ್ನು ಒಪ್ಪಿಸುವಂತೆ ಪಶ್ಚಿಮ ಏಷ್ಯಾದ ರಾಷ್ಟ್ರಗಳ ಮುಖಂಡರ ಮೇಲೆ ಟ್ರಂಪ್ ಒತ್ತಡ ಹಾಕಿದ್ದರು. ಟ್ರಂಪ್ ಅವರ ಪ್ರಯತ್ನ ಫಲಿಸಿ, ಒಪ್ಪಂದ ಏರ್ಪಟ್ಟಿದೆ. ಆದರೆ, ಮುಂದಿನ ದಾರಿ ಇಷ್ಟು ಸುಲಭವಿಲ್ಲ ಎನ್ನಲಾಗುತ್ತಿದೆ.

ಟ್ರಂಪ್ ಉಸ್ತುವಾರಿಯಲ್ಲಿ ರೂಪು ತಳೆದಿರುವ ಒಪ್ಪಂದದ 20 ಅಂಶಗಳಲ್ಲಿ ಕೆಲವು ವಿಚಾರಗಳ ಬಗ್ಗೆ ಹಮಾಸ್ ಮತ್ತು ಇಸ್ರೇಲ್ ಭಿನ್ನಮತ ವ್ಯಕ್ತಪಡಿಸಿವೆ. ಜತೆಗೆ, ಇಸ್ರೇಲ್‌ನಲ್ಲಿ ಮುಂದಿನ ವರ್ಷ ಸಾರ್ವತ್ರಿಕ ಚುನಾವಣೆ ನಡೆಯಲಿದ್ದು, ತಮ್ಮ ಬಲಪಂಥೀಯ ಮಿತ್ರರನ್ನು ಉಳಿಸಿಕೊಳ್ಳಲು, ವಿರೋಧಿಗಳನ್ನು ಅಧಿಕಾರದಿಂದ ದೂರವಿಡಲು ನೆತನ್ಯಾಹು ಕದನ ವಿರಾಮ ಕುರಿತ ತಮ್ಮ ನಿಲುವಿನಲ್ಲಿ ಬದಲಾವಣೆ ಮಾಡಿಕೊಳ್ಳುವ ಸಾಧ್ಯತೆಯೂ ಇದೆ.

ಟ್ರಂಪ್ ರೂಪಿಸಿರುವ ಶಾಂತಿ ಸೂತ್ರದ ಸಾಮರ್ಥ್ಯವೇ ಅದರ ದೌರ್ಬಲ್ಯವೂ ಆಗಿದೆ ಎಂದು ವಿಶ್ಲೇಷಿಸಲಾಗುತ್ತಿದೆ. ಒಪ್ಪಂದದಲ್ಲಿ ಅನೇಕ ಅಂಶಗಳನ್ನು ವಿವರವಾಗಿ ನಮೂದಿಸಿಲ್ಲ. ವಾಸ್ತವವಾಗಿ, ಅದರಲ್ಲಿನ ಅಸ್ಪಷ್ಟತೆಯೇ ಎರಡೂ ಗುಂಪುಗಳು ಕದನ ವಿರಾಮಕ್ಕೆ ಸಮ್ಮತಿಸಲು ಕಾರಣವಾಗಿದೆ. ಟ್ರಂಪ್ ಒಪ್ಪಂದದ ಬಗ್ಗೆ ಅತ್ಯುತ್ಸಾಹ ತೋರುತ್ತಿದ್ದಾರೆ. ಪಶ್ಚಿಮ ಏಷ್ಯಾದಲ್ಲಿ ಶಾಂತಿ ನೆಲೆಸಿದೆ ಎಂದೂ, ಇದು ಚಾರಿತ್ರಿಕ ಎಂದೂ ಪ್ರತಿಪಾದಿಸುತ್ತಿದ್ದಾರೆ. ಆದರೆ, ಶಾಂತಿ ಮಾತುಕತೆಯ ಮುಖ್ಯ ಭಾಗ ಈಗಷ್ಟೇ ಆರಂಭವಾಗಿದೆ ಎಂದು ಪರಿಣತರು ಹೇಳುತ್ತಿದ್ದಾರೆ. ಇಂತಹ ಸನ್ನಿವೇಶದಲ್ಲಿ ಗಾಜಾ ಜನರ ಶಾಂತಿಯ ಕನಸು ನನಸಾಗುವುದೇ ಇಲ್ಲಾ, ಕನಸಾಗಿಯೇ ಉಳಿಯುವುದೇ ಎನ್ನುವುದು ಪ್ರಶ್ನೆಯಾಗಿಯೇ ಉಳಿದಿದೆ.

ಆಧಾರ: ರಾಯಿಟರ್ಸ್, ಬಿಬಿಸಿ, ಟೈಮ್ ಮ್ಯಾಗಜಿನ್, ಸಂಘರ್ಷದ ಕುರಿತ ಬ್ರೌನ್ ವಿವಿ ವರದಿ

## ಮರುನಿರ್ಮಾಣದ ಸವಾಲು

ಗಾಜಾವನ್ನು ಮರುನಿರ್ಮಿಸುವುದು ಒಂದು ಸವಾಲಾಗಿದೆ. ಸಂಘರ್ಷದಿಂದ ಗಾಜಾ ಪಟ್ಟಿಯಲ್ಲಿ ಶೇ 10ರಷ್ಟು ಮಂದಿ ಸತ್ತಿದ್ದರೆ, ಶೇ 90ರಷ್ಟು ಮಂದಿ ನಿರ್ವಸಿತರಾಗಿದ್ದಾರೆ. ಈ ಪ್ರದೇಶದ ಶೇ 80ರಷ್ಟು ಕಟ್ಟಡಗಳು ಹಾನಿಗೊಳಗಾಗಿವೆ. ಶೇ 95ರಷ್ಟು ಆಸ್ಪತ್ರೆಗಳು, ಶೇ 90ರಷ್ಟು ಶಾಲೆಗಳು ಹಾನಿಗೊಳಗಾಗಿವೆ. ಗಾಜಾ ನಗರದಲ್ಲಿ ಹಾನಿಯ ಪ್ರಮಾಣ ಶೇ 92ರಷ್ಟು ಎನ್ನಲಾಗಿದೆ. ವಿಶ್ವಸಂಸ್ಥೆಯು ಪರಿಹಾರ ಕಾರ್ಯಗಳನ್ನು ನಡೆಸುತ್ತಿದೆ. ವಿಶ್ವ ಆರೋಗ್ಯ ಸಂಸ್ಥೆಯು ಸಂತ್ರಸ್ತರಿಗೆ ವೈದ್ಯಕೀಯ ನೆರವು ನೀಡುವ ತನ್ನ ಚಟುವಟಿಕೆಗಳನ್ನು ತೀವ್ರಗೊಳಿಸಿದೆ.

ಈ ಪ್ರದೇಶದಲ್ಲಿ ಕನಿಷ್ಠ 5.5 ಕೋಟಿ ಟನ್‌ಗಳಷ್ಟು ಅವಶೇಷಗಳನ್ನು ತೆರವುಗೊಳಿಸಬೇಕಿದೆ. ಅವಶೇಷಗಳಡಿ ಶವಗಳು ಸಿಗುತ್ತಿದ್ದು, ಅವುಗಳನ್ನು ಪತ್ತೆ ಹಚ್ಚುವುದು, ಸಂಬಂಧಪಟ್ಟವರನ್ನು ಹುಡುಕಿ ಹಸ್ತಾಂತರಿಸುವುದು ಪ್ರಯಾಸದ ಕೆಲಸವಾಗಿದೆ. ಗಾಜಾ ವನ್ನು ವಾಸಯೋಗ್ಯ ಪ್ರದೇಶವನ್ನಾಗಿ ರೂಪಿಸಲು 7,000 ಕೋಟಿ ಡಾಲರ್ (₹6.21 ಲಕ್ಷ ಕೋಟಿ) ಅಗತ್ಯವಿದೆ ಎಂದು ವಿಶ್ವಸಂಸ್ಥೆ, ಐರೋಪ್ಯ ಒಕ್ಕೂಟ ಮತ್ತು ವಿಶ್ವಬ್ಯಾಂಕ್ ಅಂದಾಜಿಸಿವೆ.


**21** ಲಕ್ಷ
ಗಾಜಾದ ಜನಸಂಖ್ಯೆ

**67,075**
ಇಸ್ರೇಲ್ ದಾಳಿಯಲ್ಲಿ ಮೃತಪಟ್ಟ ಗಾಜಾದಲ್ಲಿನ ಪ್ಯಾಲೆಸ್ಟೀನಿಯನ್ನರು

**20** ಸಾವಿರ
ಮೃತಪಟ್ಟ ಮಕ್ಕಳ ಸಂಖ್ಯೆ

**19** ಲಕ್ಷ
ನಿರಂತರ ದಾಳಿಯಿಂದಾಗಿ ಗಾಜಾದಲ್ಲಿ ನಿರಾಶ್ರಿತರಾದ ಜನರು

**1,048**
ವೆಸ್ಟ್‌ಬ್ಯಾಂಕ್‌ನಲ್ಲಿ ಮೃತಪಟ್ಟ ನಾಗರಿಕರು




**1,195**
2023ರ ಅಕ್ಟೋಬರ್ 7ರಂದು ಹಮಾಸ್ ನಡೆಸಿದ ದಾಳಿಯಲ್ಲಿ ಮೃತಪಟ್ಟ ಇಸ್ರೇಲಿಗರು (ಇವರಲ್ಲಿ 815 ನಾಗರಿಕರು)

**195**
ಗಾಜಾದಲ್ಲಿ ಮೃತಪಟ್ಟ ಪತ್ರಕರ್ತರು/ ಮಾಧ್ಯಮಗಳ ಸಿಬ್ಬಂದಿ

**554**
ಸಂಘರ್ಷದಲ್ಲಿ ಕೊನೆಯುಸಿರೆಳೆದ ಮಾನವೀಯ ನೆರವಿನ ಕಾರ್ಯಕರ್ತರು

**466**
ಗಾಜಾದಲ್ಲಿ ಮೃತಪಟ್ಟ ಇಸ್ರೇಲ್ ಭದ್ರತಾ ಪಡೆ ಸಿಬ್ಬಂದಿ

## ಪ್ಯಾಲೆಸ್ಟೀನ್‌ಗೆ ಸಿಗುವುದೇ ದೇಶದ ಸ್ಥಾನಮಾನ?

ಇಸ್ರೇಲ್ ಮತ್ತು ಹಮಾಸ್ ನಡುವೆ ಕದನ ವಿರಾಮ ಒಪ್ಪಂದ ಏರ್ಪಡುತ್ತಿದ್ದಂತೆಯೇ ಪ್ಯಾಲೆಸ್ಟೀನ್‌ಗೆ ರಾಷ್ಟ್ರದ ಸ್ಥಾನಮಾನ ನೀಡುವ ಬಗ್ಗೆ ಚರ್ಚೆ ಆರಂಭವಾಗಿದೆ. ಅಮೆರಿಕವನ್ನು ಬಿಟ್ಟು ಇತರೆ ಪಶ್ಚಿಮದ ರಾಷ್ಟ್ರಗಳು ಕೂಡ ಪ್ಯಾಲೆಸ್ಟೀನ್ ಅನ್ನು ರಾಷ್ಟ್ರವಾಗಿ ಘೋಷಿಸುವುದಕ್ಕೆ ಬೆಂಬಲ ಸೂಚಿಸಿವೆ. ವಿಶ್ವಸಂಸ್ಥೆಯ 193 ಸದಸ್ಯ ರಾಷ್ಟ್ರಗಳ ಪೈಕಿ 157 ದೇಶಗಳು ಪ್ಯಾಲೆಸ್ಟೀನ್ ಅನ್ನು 'ಸಾರ್ವಭೌಮ ರಾಷ್ಟ್ರ' ಎಂದು ಪರಿಗಣಿಸಿವೆ. ವಿಶ್ವಸಂಸ್ಥೆಯ ಸದಸ್ಯತ್ವ ಪಡೆಯಲು ಪ್ಯಾಲೆಸ್ಟೀನ್ ದಶಕಗಳಿಂದ ಯತ್ನಿಸುತ್ತಿದೆಯಾದರೂ, ಅಮೆರಿಕ ಈ ನಿರ್ಣಯವನ್ನು ವಿರೋಧಿಸುತ್ತಿರುವುದರಿಂದ ಪ್ಯಾಲೆಸ್ಟೀನ್ ಈಗಲೂ ವಿಶ್ವಸಂಸ್ಥೆಯಲ್ಲಿ ಸದಸ್ಯಯೇತರ ವೀಕ್ಷಕ ರಾಷ್ಟ್ರವಾಗಿಯೇ ಇದೆ.

ಈಗ ಇಸ್ರೇಲ್ ಮತ್ತು ಹಮಾಸ್ ನಡುವೆ ಏರ್ಪಟ್ಟಿರುವ 20 ಅಂಶಗಳ ಕದನವಿರಾಮ ಒಪ್ಪಂದದಲ್ಲಿ ಪ್ರತ್ಯೇಕ ರಾಷ್ಟ್ರದ ಸ್ಥಾನಮಾನ ನೀಡುವ ಬಗ್ಗೆ ಸ್ಪಷ್ಟವಾಗಿ ಉಲ್ಲೇಖ ಮಾಡಿಲ್ಲ. ಆದರೆ, 19ನೇ ಅಂಶದಲ್ಲಿ ಇದರ ಬಗ್ಗೆ ಪ್ರಸ್ತಾಪವಿದೆ.

ಗಾಜಾದ ಮರು ಅಭಿವೃದ್ಧಿ ಮತ್ತು ಪ್ಯಾಲೆಸ್ಟೀನ್ ಪ್ರಾಧಿಕಾರದ (ಪಿಎ) ಸುಧಾರಣಾ ಕಾರ್ಯಕ್ರಮಗಳು ಯೋಜಿಸಿದಂತೆಯೇ ಪೂರ್ಣವಾದಾಗ, ಜನರ ಬಯಕೆಯಂತೆ ಪ್ಯಾಲೆಸ್ಟೀನಿಯನ್ನರ ದೃಢ ಸಂಕಲ್ಪ ಮತ್ತು ರಾಷ್ಟ್ರದ ಸ್ಥಾನಮಾನ ಹೊಂದುವ ವಿಶ್ವಾಸಾರ್ಹ ಸನ್ನಿವೇಶಗಳು ನಿರ್ಮಾಣವಾಗಲಿವೆ ಎಂದು ಒಪ್ಪಂದದ 19ನೇ ಅಂಶ ಹೇಳುತ್ತದೆ.

ಶಾಂತಿಯುತ ಮತ್ತು ಸಮೃದ್ಧ ಸಹಬಾಳ್ವೆಗಾಗಿ ರಾಜಕೀಯ ವ್ಯವಸ್ಥೆಯೊಂದನ್ನು ರೂಪಿಸುವುದಕ್ಕಾಗಿ ಇಸ್ರೇಲ್ ಮತ್ತು ಪ್ಯಾಲೆಸ್ಟೀನಿಯನ್ನರ ನಡುವೆ ಮಾತುಕತೆ ನಡೆಯುವಂತೆ ಅಮೆರಿಕ ನೋಡಿಕೊಳ್ಳಲಿದೆ ಎಂದು ಒಪ್ಪಂದದ 20ನೇ ಅಂಶದಲ್ಲಿ ಹೇಳಲಾಗಿದೆ.

**ಇಸ್ರೇಲ್ ವಿರೋಧ:** ಪ್ಯಾಲೆಸ್ಟೀನ್‌ಗೆ ರಾಷ್ಟ್ರದ ಸ್ಥಾನಮಾನ ನೀಡುವುದಕ್ಕೆ ಇಸ್ರೇಲ್ ಮೊದಲಿನಿಂದಲೂ ವಿರೋಧ ವ್ಯಕ್ತಪಡಿಸುತ್ತಲೇ ಬಂದಿದೆ. ಪೂರ್ವ ಜೆರುಸಲೇಂ, ವೆಸ್ಟ್‌ಬ್ಯಾಂಕ್ ಮತ್ತು ಗಾಜಾ ತನಗೆ ಸೇರಿದ್ದು ಎಂಬುದು ಪ್ಯಾಲೆಸ್ಟೀನ್‌ನ ವಾದ. ಆದರೆ, ಇದನ್ನು ಇಸ್ರೇಲ್ ಒಪ್ಪುತ್ತಿಲ್ಲ. ಹಾಲಿ ಪ್ರಧಾನಿ ಬೆಂಜಮಿನ್ ನೆತನ್ಯಾಹು ಈ ಹಿಂದೆ ಪ್ರಧಾನಿಯಾಗಿದ್ದಾಗಲೂ ಪ್ಯಾಲೆಸ್ಟೀನ್ ಪ್ರತ್ಯೇಕ ರಾಷ್ಟ್ರ ಸ್ಥಾನಮಾನ ನೀಡುವುದನ್ನು ವಿರೋಧಿಸುತ್ತಲೇ ಬಂದಿದ್ದಾರೆ.

## ❖ ಕಾಡಾನೆ ಸಂಖ್ಯೆಯಲ್ಲಿ ಶೇ18ರಷ್ಟು ಇಳಿಕೆ

**ಸಂದರ್ಭ: ದೇಶದಲ್ಲಿ ಕಾಡಾನೆಗಳ ಸಂಖ್ಯೆ ಪ್ರಸ್ತುತ 22,446 ಇದ್ದು, ಇವುಗಳ ಸಂಖ್ಯೆಯಲ್ಲಿ ಶೇಕಡ 18ರಷ್ಟು ಇಳಿಕೆ ಕಂಡುಬಂದಿದೆ. ದೇಶದಲ್ಲಿ ಮೊಟ್ಟಮೊದಲ ಬಾರಿಗೆ ನಡೆಸಿದ ಡಿಎನ್‌ಎ ಆಧಾರಿತ ಗಣತಿಯಿಂದ ಈ ಅಂಶ ತಿಳಿದುಬಂದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.**

- ಕೇಂದ್ರ ಸರ್ಕಾರ ಮಂಗಳವಾರ ಬಿಡುಗಡೆ ಮಾಡಿರುವ, 'ಅಖಿಲ ಭಾರತ ಸಮಕಾಲಿಕ ಆನೆ ಗಣತಿ' (ಎಸ್‌ಎಐಇಇ)–2025ರ ವರದಿಯಲ್ಲಿ ಈ ಮಾಹಿತಿ ಇದೆ. 2021ರಲ್ಲಿ ಈ ಗಣತಿ ನಡೆದಿತ್ತು.
- 2017ರಲ್ಲಿ ಕಾಡಾನೆಗಳ ಸಂಖ್ಯೆ 27,312 ಇತ್ತು. ಸದ್ಯ, ದೇಶದಲ್ಲಿ ಕಾಡಾನೆಗಳ ಸಂಖ್ಯೆ ಸರಾಸರಿ 22,446 ಇದೆ ಎಂದು ಈ ವರದಿಯಲ್ಲಿ ಉಲ್ಲೇಖಿಸಲಾಗಿದೆ.
- 'ಪ್ರತಿ ಸಲ ವಾಡಿಕೆಯಂತೆ ನಡೆಯುವ ಗಣತಿ ಹಾಗೂ ಡಿಎನ್‌ಎ ಆಧಾರಿತ ಗಣತಿಗೆ ಬಳಸುವ ವಿಧಾನಗಳು ಬೇರೆ. ಹೀಗಾಗಿ ಈ ಎರಡೂ ವಿಧಾನಗಳನ್ನು ಹೋಲಿಕೆ ಮಾಡಬಾರದು' ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ.

IAS/KAS Academy



## ❖ ಹಸಿರು ಪಟಾಕಿ ಬಳಕೆಗೆ 'ಸುಪ್ರೀಂ' ಅನುಮತಿ

**ಸಂದರ್ಭ: ದೀಪಾವಳಿ ಹಬ್ಬದ ಆಚರಣೆಗಾಗಿ ದೆಹಲಿ ಮತ್ತು ರಾಷ್ಟ್ರ ರಾಜಧಾನಿ ಪ್ರದೇಶಗಳಲ್ಲಿ (ಎನ್‌ಆರ್‌ಸಿ) ಹಸಿರು ಪಟಾಕಿಯ ತಯಾರಿಕೆ, ಮಾರಾಟ ಮತ್ತು ಬಳಕೆಗೆ ಸುಪ್ರೀಂ ಕೋರ್ಟ್ ಬುಧವಾರ ಅನುಮತಿ ನೀಡಿದೆ. ಆದರೆ, ಇದಕ್ಕೆ ಹಲವು ಷರತ್ತುಗಳನ್ನೂ ವಿಧಿಸಿದೆ.**

- ಹಸಿರು ಪಟಾಕಿ ಬಳಕೆಗೆ ಅನುಮತಿ ನೀಡುವಂತೆ ಕೇಂದ್ರ ಸರ್ಕಾರ ಮತ್ತು ದೆಹಲಿ ಸರ್ಕಾರ ನ್ಯಾಯಾಲಯಕ್ಕೆ ಮನವಿ ಮಾಡಿದ್ದವು. ಈ ಅರ್ಜಿಯ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ (ಸಿಜೆಐ) ಬಿ.ಆರ್. ಗವಾಯಿ ಮತ್ತು ಕೆ. ವಿನೋದ್ ಚಂದ್ರನ್ ಅವರ ಪೀಠವು ನಡೆಸಿತ್ತು. ಅ.10ರಂದು ಅಂತಿಮ ವಾದ–ಪ್ರತಿವಾದ ನಡೆದು, ನ್ಯಾಯಾಲಯವು ತನ್ನ ಆದೇಶವನ್ನು ಕಾಯ್ದಿರಿಸಿತ್ತು.
- ।ಮಾರಾಟದ ಸ್ಥಳಗಳಲ್ಲಿ ಪೊಲೀಸರ ತಂಡವು ಗಸ್ತು ತಿರುಗುತ್ತಲೇ ಇರಬೇಕು. ಈ ತಂಡದಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳೂ ಇರಬೇಕು. ಕ್ಯೂಆರ್ ಕೋಡ್ ಇರುವ ಹಸಿರು ಪಟಾಕಿಗಳು ಮಾತ್ರವೇ ಮಾರಾಟವಾಗುತ್ತಿವೆಯೇ ಎಂಬುದನ್ನು ಇವರು ಪರಿಶೀಲಿಸುತ್ತಲೇ ಇರಬೇಕು
- ।ನೋಂದಾಯಿಸಿಕೊಳ್ಳದ ತಯಾರಿಕಾ ಕಂಪನಿಗಳ ಮತ್ತು ಪರವಾನಗಿ ಇಲ್ಲದ ಮಾರಾಟಗಾರರ ಹಸಿರು ಪಟಾಕಿಗಳು ಜನರ ಕೈ ಸೇರದಂತೆ ಗಸ್ತು ತಂಡವು ನೋಡಿಕೊಳ್ಳಬೇಕು. ಇಂಥ ಪಟಾಕಿಗಳು ಕಂಡುಬಂದರೆ, ತಕ್ಷಣವೇ ವಶಕ್ಕೆ ಪಡೆಯಬೇಕು
- ।ನಿಯಮ ಉಲ್ಲಂಘಿಸುವ ತಯಾರಿಕಾ ಕಂಪನಿಗಳಿಗೆ ನೋಟಿಸ್ ನೀಡಿ ಅವರ ಪರವಾನಗಿಯನ್ನು ರದ್ದು ಮಾಡಲಾಗುವುದು

## ❖ ಭಾರತ ವಿರುದ್ಧ ಚೀನಾ ದೂರು

**ಸಂದರ್ಭ:ವಿದ್ಯುತ್ ಚಾಲಿತ ವಾಹನಗಳಿಗೆ ಹಾಗೂ ಬ್ಯಾಟರಿಗಳಿಗೆ ಭಾರತವು ಸಬ್ಸಿಡಿ ನೀಡುತ್ತಿರುವ ವಿಚಾರವಾಗಿ ಚೀನಾ ದೇಶವು ವಿಶ್ವ ವ್ಯಾಪಾರ ಸಂಘಟನೆಗೆ (ಡಬ್ಲ್ಯುಟಿಒ) ದೂರು ಸಲ್ಲಿಸಿದೆ.**

- ಭಾರತದ ಹಲವು ಕ್ರಮಗಳು ಡಬ್ಲ್ಯುಟಿಒ ರೂಪಿಸಿರುವ ವಿವಿಧ ನಿಯಮಗಳ ಉಲ್ಲಂಘನೆಯಂತೆ ಇವೆ ಎಂದು ಚೀನಾ ದೂರಿದೆ. ಭಾರತದ ಕ್ರಮಗಳು ಭಾರತದ ಉದ್ಯಮಗಳಿಗೆ ಹೆಚ್ಚು ಅನುಕೂಲಕರ ಆಗುವಂತೆ ಇವೆ, ಚೀನಾದ ನ್ಯಾಯಸಮ್ಮತವಾದ ಹಿತಾಸಕ್ತಿಗಳಿಗೆ ಅವು ಅನುಕೂಲಕರವಾಗಿ ಇಲ್ಲ ಎಂದು ಚೀನಾದ ವಾಣಿಜ್ಯ ಸಚಿವಾಲಯ ಆರೋಪಿಸಿದೆ.
- ತಾನು ತಯಾರಿಸುವ ಇ.ವಿ.ಗಳನ್ನು ಭಾರತಕ್ಕೆ ಹೆಚ್ಚಿನ ಪ್ರಮಾಣದಲ್ಲಿ ರಫ್ತು ಮಾಡಲು ಚೀನಾ ಬಯಸಿದ್ದು, ಈ ಸಂದರ್ಭದಲ್ಲಿ ಅದು ಈ ದೂರು ಸಲ್ಲಿಸಿದೆ. ಅಲ್ಲದೆ, ದ್ವಿಪಕ್ಷೀಯ ಸಂಬಂಧವನ್ನು ಸಹಜಗೊಳಿಸಲು ಎರಡೂ ದೇಶಗಳು ಮುಂದಡಿ ಇರಿಸಿದ ನಂತರದಲ್ಲಿ ಚೀನಾ ಈ ರೀತಿಯ ಕ್ರಮಕ್ಕೆ ಮುಂದಾಗಿದೆ.
- ಚೀನಾದ ಇ.ವಿ. ತಯಾರಿಕಾ ಕಂಪನಿಗಳು ಭಾರತದ ಮಾರುಕಟ್ಟೆಯನ್ನು ಬಹಳ ಪ್ರಮುಖ ಎಂದು ಪರಿಗಣಿಸಿವೆ. ಈಚೆಗಿನ ಕೆಲವು ವರದಿಗಳ ಪ್ರಕಾರ ಚೀನಾದಲ್ಲಿ ಇ.ವಿ. ತಯಾರಿಕೆಯು ಭಾರಿ ಪ್ರಮಾಣದಲ್ಲಿ ಹೆಚ್ಚಾಗಿದೆ, ಅಲ್ಲಿನ ಮಾರುಕಟ್ಟೆಯಲ್ಲಿ ಅವುಗಳ ಮಾರಾಟ ಕಡಿಮೆ ಆಗಿದೆ. ಅಲ್ಲಿನ ಇ.ವಿ ಕಂಪನಿಗಳ ಲಾಭವೂ ಕಡಿಮೆ ಆಗಿದೆ. ಹೀಗಾಗಿ ಅವು ಏಷ್ಯಾ ಮತ್ತು ಐರೋಪ್ಯ ಒಕ್ಕೂಟದ ಮಾರುಕಟ್ಟೆ ಮೇಲೆ ಕಣ್ಣಿಟ್ಟಿವೆ.
- ಚೀನಾ ಸಲ್ಲಿಸಿರುವ ದೂರಿನ ವಿವರಗಳನ್ನು ಪರಿಶೀಲಿಸಲಾಗುತ್ತದೆ ಎಂದು ಕೇಂದ್ರ ವಾಣಿಜ್ಯ ಸಚಿವಾಲಯದ ಕಾರ್ಯದರ್ಶಿ ರಾಜೇಶ್ ಅಗರ್ವಾಲ್ ಅವರು ಹೇಳಿದ್ದಾರೆ.
- ಟರ್ಕಿ, ಕೆನಡಾ ಮತ್ತು ಐರೋಪ್ಯ ಒಕ್ಕೂಟದ ವಿರುದ್ಧವೂ ಚೀನಾ ಇದೇ ಬಗೆಯ ದೂರು ಸಲ್ಲಿಸಿದೆ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ. 'ಅವರು ಭಾರತದ ಜೊತೆ ಸಮಾಲೋಚನೆ ನಡೆಸಲು ಬಯಸಿದ್ದಾರೆ' ಎಂದು ಅಧಿಕಾರಿ ತಿಳಿಸಿದ್ದಾರೆ.

Dr. Rajkumar IAS Academy

- ಡಬ್ಲ್ಯುಟಿಒ ನಿಯಮಗಳ ಪ್ರಕಾರ ವ್ಯಾಜ್ಯ ಇತ್ಯರ್ಥ ಪ್ರಕ್ರಿಯೆಯಲ್ಲಿ ಮೊದಲ ಹಂತವೆಂದರೆ ಸಮಾಲೋಚನೆ ನಡೆಸುವುದು. ಚೀನಾ ದೇಶವು ಭಾರತದ ಎರಡನೆಯ ಅತಿದೊಡ್ಡ ವಾಣಿಜ್ಯ ಪಾಲುದಾರ.
- ಚೀನಾದ ಇ.ವಿ. ತಯಾರಕರು ವಿದೇಶಗಳಲ್ಲಿ ತುಸು ಪ್ರತಿರೋಧ ಎದುರಿಸುತ್ತಿದ್ದಾರೆ. ಐರೋಪ್ಯ ಒಕ್ಕೂಟವು ಚೀನಾದ ಇ.ವಿ.ಗಳ ಮಾರಾಟಕ್ಕೆ ಕಡಿವಾಣ ಹಾಕುವ ಉದ್ದೇಶದಿಂದ ಅವುಗಳಿಗೆ ಶೇಕಡ 27ರಷ್ಟು ತೆರಿಗೆ ವಿಧಿಸಿದೆ.
- ಭಾರತದಲ್ಲಿ ಕೇಂದ್ರ ಸರ್ಕಾರವು ಇ.ವಿ. ನೀತಿ ಹಾಗೂ ಉತ್ಪಾದನೆ ಆಧಾರಿತ ಉತ್ತೇಜನ ಯೋಜನೆ ಮೂಲಕ ದೇಶದಲ್ಲಿ ಇ.ವಿ. ತಯಾರಿಕೆಯನ್ನು ಹೆಚ್ಚಿಸಲು ಮುಂದಾಗಿದೆ.

## ❖ ವ್ಯಾಪಾರ ಕೊರತೆ ಅಂತರ 13 ತಿಂಗಳ ಗರಿಷ್ಠ

**ಸಂದರ್ಭ: ಸೆಪ್ಟೆಂಬರ್ ತಿಂಗಳಲ್ಲಿ ಭಾರತದಿಂದ ಆಗಿರುವ ರಫ್ತು ಶೇಕಡ 6.74ರಷ್ಟು ಹೆಚ್ಚಳ ಕಂಡು, 36.38 ಬಿಲಿಯನ್ ಡಾಲರ್‌ಗೆ (₹3.20 ಲಕ್ಷ ಕೋಟಿ) ತಲುಪಿದೆ. ಆಮದು ಪ್ರಮಾಣವು ಶೇ 16.6ರಷ್ಟು ಹೆಚ್ಚಳ ಕಂಡಿದ್ದು, ವ್ಯಾಪಾರ ಕೊರತೆ ಅಂತರವು 31.15 ಬಿಲಿಯನ್ ಡಾಲರ್‌ಗೆ (₹2.74 ಲಕ್ಷ ಕೋಟಿ) ತಲುಪಿದೆ.**

- ಈ ವ್ಯಾಪಾರ ಕೊರತೆಯು ಒಂದು ವರ್ಷಕ್ಕೂ ಹೆಚ್ಚಿನ ಅವಧಿಯಲ್ಲಿ ಅತಿಹೆಚ್ಚಿನದ್ದಾಗಿದೆ. ಚಿನ್ನ, ರಸಗೊಬ್ಬರ ಮತ್ತು ಬೆಳ್ಳಿಯ ಆಮದು ಹೆಚ್ಚಾದ ಕಾರಣದಿಂದಾಗಿ ಸೆಪ್ಟೆಂಬರ್‌ನಲ್ಲಿ ಆಮದು ಮೊತ್ತವು 68.53 ಬಿಲಿಯನ್ ಡಾಲರ್‌ಗೆ (₹6.03 ಲಕ್ಷ ಕೋಟಿ) ಏರಿಕೆ ಆಗಿದೆ.
- ಏಪ್ರಿಲ್–ಸೆಪ್ಟೆಂಬರ್ ಅವಧಿಯಲ್ಲಿ ರಫ್ತು ಪ್ರಮಾಣವು ಶೇ 3.02ರಷ್ಟು ಹೆಚ್ಚಳ ಆಗಿದೆ. ಆಮದು ಪ್ರಮಾಣವು ಇದೇ ಅವಧಿಯಲ್ಲಿ ಶೇ 4.53ರಷ್ಟು ಜಾಸ್ತಿ ಆಗಿದೆ.
- ಜಾಗತಿಕ ಮಟ್ಟದಲ್ಲಿ ಅರ್ಥ ವ್ಯವಸ್ಥೆಯಲ್ಲಿ ಅಸ್ಥಿರತೆ ಇದ್ದರೂ ಭಾರತದ ಸರಕು ಮತ್ತು ಸೇವೆಗಳ ರಫ್ತು ಚೆನ್ನಾಗಿ ಆಗುತ್ತಿದೆ ಎಂದು ವಾಣಿಜ್ಯ ಕಾರ್ಯದರ್ಶಿ ರಾಜೇಶ್ ಅಗರ್ವಾಲ್ ತಿಳಿಸಿದ್ದಾರೆ.
- ದೇಶದ ಉದ್ಯಮ ವಲಯವು ತನ್ನ ವಾಣಿಜ್ಯ ಸಂಬಂಧವನ್ನು ಕಾಪಾಡಿಕೊಂಡಿದೆ, ಪೂರೈಕೆ ವ್ಯವಸ್ಥೆಯನ್ನು ಕೂಡ ಅದು ರಕ್ಷಿಸಿಕೊಂಡಿದೆ. ಹೀಗಾಗಿ ರಫ್ತು ಹೆಚ್ಚಳ ಆಗಿದೆ ಎಂದು ಅಗರ್ವಾಲ್ ಅವರು ಪ್ರಶ್ನೆಯೊಂದಕ್ಕೆ ಉತ್ತರವಾಗಿ ತಿಳಿಸಿದ್ದಾರೆ.
- ಭಾರತದಿಂದ ಅಮೆರಿಕಕ್ಕೆ ಆಗುವ ರಫ್ತಿನಲ್ಲಿ ಶೇ 45ರಷ್ಟು ಪಾಲು ಈಗಲೂ ಶೇ 50 ಪ್ರಮಾಣದ ಸುಂಕದ ವ್ಯಾಪ್ತಿಯಿಂದ ಹೊರಗಿದೆ ಎಂದಿದ್ದಾರೆ.

## ❖ ಚಾರ್ಲಿ ಕಿರ್ಕ್‌ಗೆ ಅಮೆರಿಕ ಅತ್ಯುನ್ನತ ನಾಗರಿಕ ಪುರಸ್ಕಾರ

**ಸಂದರ್ಭ: ಅಮೆರಿಕದ ಪ್ರಮುಖ ಬಲಪಂಥೀಯ ಕಾರ್ಯಕರ್ತ ಚಾರ್ಲಿ ಕಿರ್ಕ್ ಅವರಿಗೆ ಮರಣೋತ್ತರವಾಗಿ ಅಮೆರಿಕದ ಅತ್ಯುನ್ನತ ನಾಗರಿಕ ಪುರಸ್ಕಾರ 'ಪ್ರೆಸಿಡೆನ್ಶಿಯಲ್ ಮೆಡಲ್ ಆಫ್ ಫ್ರೀಡಂ' ಅನ್ನು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರಕಟಿಸಿದ್ದಾರೆ.**

- ಚಾರ್ಲಿ ಕಿರ್ಕ್ ಅವರ 32ನೇ ಜನ್ಮದಿನದ ಸಂದರ್ಭದಲ್ಲೇ ಈ ಪ್ರಶಸ್ತಿ ಘೋಷಣೆಯಾಗಿದೆ.
- ಅಮೆರಿಕದ ಒರೆಮ್ ನಗರದ ಉತಾಹ್ ವ್ಯಾಲಿ ವಿಶ್ವವಿದ್ಯಾಲಯದ ಆವರಣದಲ್ಲಿ ಸೆ.10ರಂದು ನಡೆದ 'ದಿ ಅಮೆರಿಕನ್ ಕಮ್‌ಬ್ಯಾಕ್ ಟೂರ್' ಕಾರ್ಯಕ್ರಮದ ಸಂದರ್ಭದಲ್ಲಿ ಕಿರ್ಕ್ ಅವರನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿತ್ತು.
- 'ಮುಂದಿನ ತಲೆಮಾರಿಗೆ ಸ್ಫೂರ್ತಿಯ ಚಿಲುಮೆಯಾಗಿದ್ದ, ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಅಪ್ರತಿಮ ಯೋಧನನ್ನು ನಾವು ಸದಾ ಸ್ಮರಿಸುತ್ತೇವೆ' ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

Dr. Rajkumar IAS KAS Academy

## ❖ 'ಅಮೆರಿಕ ಡಾಲರ್ ಮೇಲೆ 'ಬ್ರಿಕ್ಸ್' ದಾಳಿ'

**ಸಂದರ್ಭ: ಬ್ರಿಕ್ಸ್' ರಾಷ್ಟ್ರಗಳು ಡಾಲರ್ ಮೇಲೆ ದಾಳಿ ಮಾಡುತ್ತಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಆರೋಪಿಸಿದ್ದಾರೆ.**

- ಅಮೆರಿಕ ನೀತಿಗಳ ವಿರುದ್ಧವಾಗಿರುವ 'ಬ್ರಿಕ್ಸ್' ರಾಷ್ಟ್ರಗಳ ಮೇಲೆ ಹೆಚ್ಚುವರಿ ಸುಂಕ ವಿಧಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ.
- ಅರ್ಜೆಂಟೀನಾ ಅಧ್ಯಕ್ಷ ಜಾವಿಯರ್ ಮಿಲೈ ಅವರ ಜೊತೆ ದ್ವಿಪಕ್ಷೀಯ ಮಾತುಕತೆ ನಡೆಸಿದ ಟ್ರಂಪ್, 'ನಾನು ಡಾಲರ್ ಜೊತೆಗೆ ನಿಲ್ಲುತ್ತೇನೆ. ಡಾಲರ್‌ನಲ್ಲಿ ವಹಿವಾಟು ನಡೆಸಲು ಬಯಸುವವರಿಗೆ ಹಲವು ಉಪಯೋಗವಾಗಲಿದೆ. ಇತರರಿಗೆ ಆ ಅವಕಾಶ ಸಿಗಲ್ಲ' ಎಂದು ಹೇಳಿದರು.
- 'ಬ್ರಿಕ್ಸ್‌ನ ಭಾಗವಾಗಲು ಬಯಸುವವವರ ಬಗ್ಗೆ ಆಕ್ಷೇಪವಿಲ್ಲ. ಆದರೆ ಅವರಿಗೆ ನಾವು ಸುಂಕವನ್ನು ವಿಧಿಸುವುದಾಗಿ ಹೇಳಿದ್ದೆ. ಎಲ್ಲರೂ ಬ್ರಿಕ್ಸ್‌ನಿಂದ ಹೊರಬಂದರು' ಎಂದು ಹೇಳಿದರು.
- ಏಕಪಕ್ಷೀಯ ಸುಂಕ ಮತ್ತು ಸುಂಕ ರಹಿತ ಕ್ರಮಗಳಿಂದಾಗಿ ಜಾಗತಿಕ ವಹಿವಾಟಿನ ಮೇಲೆ ಆಗುತ್ತಿರುವ ಪರಿಣಾಮಗಳ ಬಗ್ಗೆ 'ಬ್ರಿಕ್ಸ್' ರಾಷ್ಟ್ರಗಳು ಕಳವಳ ವ್ಯಕ್ತಪಡಿಸಿವೆ.

## ❖ 2040ರಲ್ಲಿ ಚಂದ್ರನ ಮೇಲೆ ಭಾರತೀಯರು

**ಸಂದರ್ಭ: 2040ರಲ್ಲಿ ಚಂದ್ರನ ಮೇಲೆ ಭಾರತೀಯರನ್ನು ಇಳಿಸುವ ಗುರಿಯಿದ್ದು, ಅದರ ಭಾಗವಾಗಿ ನಡೆಸಲಾಗುವ ಮೊದಲ ಮಾನವ ಬಾಹ್ಯಾಕಾಶ ಹಾರಾಟ 'ಮಿಷನ್ ಗಗನಯಾನ' 2027ರಲ್ಲಿ ಉಡಾವಣೆಯಾಗುವ ಹಾದಿಯಲ್ಲಿದೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೊ) ಅಧ್ಯಕ್ಷ ವಿ.ನಾರಾಯಣನ್ ಹೇಳಿದ್ದಾರೆ.**

- 2035ರ ವೇಳೆಗೆ ರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ ಮತ್ತು 2026ರ ವೇಳೆಗೆ ಮಾವನ ರಹಿತ ಮೂರು 'ಗಗನಯಾನ' ಕಾರ್ಯಾಚರಣೆಗಳು ಸೇರಿದಂತೆ ಹಲವಾರು ಮಹತ್ವಾ ಕಾಂಕ್ಷೆಯ ಬಾಹ್ಯಾಕಾಶ ಯೋಜನೆಗಳು, ವಲಯ ಸುಧಾರಣೆಗಳು ಪ್ರಸ್ತುತ ನಡೆಯುತ್ತಿವೆ ಎಂದು ನಾರಾಯಣನ್ ಹೇಳಿದ್ದಾರೆ.
- ಇದರಲ್ಲಿ 'ವ್ಯೋಮಮಿತ್ರ' ರೋಬೊಟ್ ಅನ್ನು ಒಳಗೊಂಡಿರುವ ಮೊದಲನೆಯ ಯೋಜನೆಯನ್ನು 2025ರ ಡಿಸೆಂಬರ್ ವೇಳೆಗೆ ಪೂರ್ಣಗೊಳಿಸುವ ಗುರಿ ಇದೆ.

## ❖ ಗಲ್ಲುಶಿಕ್ಷೆಗೆ ಪರ್ಯಾಯ ಆಯ್ಕೆ: ಒಪ್ಪದ ಕೇಂದ್ರ

**ಸಂದರ್ಭ: 'ಮರಣದಂಡನೆಗೆ ಗುರಿಯಾದ ಅಪರಾಧಿಯನ್ನು ಗಲ್ಲಿಗೇರಿಸಿ ಕೊಲ್ಲುವ ಬದಲು, ಸಿರಿಂಜ್ ಮೂಲಕ ವಿಷ ನೀಡುವ ಪರ್ಯಾಯ ಆಯ್ಕೆಯು ಕಾರ್ಯಸಾಧುವಲ್ಲ' ಎಂದು ಕೇಂದ್ರ ಸರ್ಕಾರ ಸುಪ್ರೀಂ ಕೋರ್ಟ್‌ಗೆ ತಿಳಿಸಿದೆ.**

- ನೇಣುಗಂಬಕ್ಕೆ ಏರಿಸಿ ಅಪರಾಧಿಯನ್ನು ಕೊಲ್ಲುವ ಬದಲು, ಮಾನವೀಯವಾದ ಪರ್ಯಾಯ ಮಾರ್ಗದ ಆಯ್ಕೆಯನ್ನು ಪರಿಶೀಲಿಸುವಂತೆ ಸುಪ್ರೀಂ ಕೋರ್ಟ್ 2023ರಲ್ಲಿ ಪ್ರಕರಣವೊಂದರಲ್ಲಿ ಹೇಳಿತ್ತು. 'ಗಲ್ಲಿಗೇರಿಸುವ' ಪದ್ಧತಿ ರದ್ದತಿ ಕೋರಿ ಸಲ್ಲಿಸಲಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ವಿಕ್ರಮ್‌ನಾಥ್ ಮತ್ತು ಸಂದೀಪ್ ಮೆಹ್ತಾ ಅವರನ್ನೊಳಗೊಂಡ ಪೀಠ ನಡೆಸಿತು.

- 'ಮರಣದಂಡನೆಗೆ ಗುರಿಯಾಗಿರುವ ಅಪರಾಧಿಗೆ 'ನೇಣುಗಂಬ' ಅಥವಾ 'ಪ್ರಾಣಹರಣ ಮಾಡುವ ಚುಚ್ಚುಮದ್ದು' ಇವೆರಡರಲ್ಲಿ ಒಂದನ್ನು ಆಯ್ಕೆ ಮಾಡಿಕೊಳ್ಳುವ ಅವಕಾಶ ವನ್ನಾದರೂ ನೀಡಬೇಕು' ಎಂದು ಪಿಐಎಲ್ ಸಲ್ಲಿಸಿರುವ ವಕೀಲ ರಿಶಿ ಮಲ್ಹೋತ್ರಾ ಕೋರ್ಟ್‌ಗೆ ಮನವಿ ಮಾಡಿದರು.
- 'ನೇಣು ಬಿಗಿದು ಕೊಲ್ಲುವುದಕ್ಕಿಂತ ಹೆಚ್ಚು ಮಾನವೀಯವಾದ ಪರ್ಯಾಯ ಮಾರ್ಗ ಚುಚ್ಚುಮದ್ದು ನೀಡುವುದು. **ಅಮೆರಿಕದಲ್ಲಿ 50ರಲ್ಲಿ 49 ರಾಜ್ಯಗಳಲ್ಲಿ ಈ ವಿಧಾನವನ್ನು ಅಳವಡಿಸಿಕೊಳ್ಳ ಲಾಗಿದೆ. ನೇಣಿಗೇರಿಸಿದ ವ್ಯಕ್ತಿಯ ದೇಹವು 40 ನಿಮಿಷ ಹಗ್ಗದಲ್ಲೇ ನೇತಾಡುತ್ತಿರುತ್ತದೆ. ಇದು ಅನಾಗರಿಕ, ಅಮಾನವೀಯ. ಮರಣದಂಡನೆ ಶಿಕ್ಷೆ ಜಾರಿಗೊಳಿಸುವಾಗ ಮಾನವನ ಘನತೆಗೆ ಸಂಬಂಧಿಸಿದ ಅಂಶಗಳನ್ನೂ ಪರಿಗಣಿಸಬೇಕು**' ಎಂದು ಅವರು ಪೀಠದ ಗಮನಕ್ಕೆ ತಂದರು.
- ಮಲ್ಹೋತ್ರಾ ಸಲ್ಲಿಸಿರುವ ಮನವಿಯ ಬಗ್ಗೆ, ಸರ್ಕಾರಕ್ಕೆ ಸಲಹೆ ನೀಡುವಂತೆ ನ್ಯಾಯಪೀಠ, ಕೇಂದ್ರವನ್ನು ಪ್ರತಿನಿಧಿಸಿದ್ದ ವಕೀಲರಿಗೆ ಸೂಚಿಸಿತು.
- 'ಈಗಾಗಲೇ ಈ ಬಗ್ಗೆ ಚರ್ಚಿಸಲಾಗಿದೆ. ಆದರೆ, ಪರ್ಯಾಯ ಆಯ್ಕೆ ನೀಡುವುದು ಕಾರ್ಯಸಾಧು ವಲ್ಲ. ಇದು ಸರ್ಕಾರ ನೀತಿ ನಿರ್ಧಾರದ ಭಾಗ. ಆ ಬಗ್ಗೆ ಸರ್ಕಾರ ನಿರ್ಧಾರ ತೆಗೆದು ಕೊಳ್ಳುತ್ತದೆ' ಎಂದು ಕೇಂದ್ರವನ್ನು ಪ್ರತಿನಿ ಧಿಸಿದ್ದ ವಕೀಲರು ಕೋರ್ಟ್‌ಗೆ ತಿಳಿಸಿದರು.
- ಗಲ್ಲಿಗೇರಿಸುವ ಪದ್ಧತಿ ರದ್ದುಗೊಳಿಸುವ ವಿಚಾರವಾಗಿ ಅಟಾರ್ನಿ ಜನರಲ್ ಆರ್. ವೆಂಕಟರಮಣಿ ಅವರ ಪ್ರಸ್ತಾವದ ಮೇರೆಗೆ, 2023ರಲ್ಲಿ ಸಮಿತಿ ರಚಿಸುವಂತೆ ಸರ್ಕಾರಕ್ಕೆ ಸೂಚಿಸಲಾಗಿತ್ತು. ಈ ಸಮಿತಿ ಏನು ಮಾಡಿದೆ ಎನ್ನುವುದನ್ನೂ ಪರಿಶೀಲಿಸಿ ವರದಿ ಸಲ್ಲಿಸುವಂತೆ ಸೂಚಿಸಿದ ಕೋರ್ಟ್, ಮುಂದಿನ ವಿಚಾರಣೆಯನ್ನು ನವೆಂಬರ್ 11ಕ್ಕೆ ನಿಗದಿಪಡಿಸಿತು.

<u>'ಪರ್ಯಾಯ ಮಾರ್ಗ ಅರಸಬೇಕಿದೆ'</u>

- 'ಸಮಸ್ಯೆಯೆಂದರೆ, ಸರ್ಕಾರವು ಕಾಲಕ್ಕೆ ತಕ್ಕಂತೆ ಸುಧಾರಣಾವಾದಿ ಆಲೋಚನೆಗಳನ್ನು ಅಳವಡಿಸಿಕೊಂಡಿಲ್ಲ. ಈಗ ಕಾಲ ಬದಲಾಗಿದೆ. ಮರಣದಂಡನೆ ಜಾರಿಯಲ್ಲೂ ಪರ್ಯಾಯ ಮಾರ್ಗ ಅರಸಬೇಕಿದೆ' ಎಂದು ನ್ಯಾಯಮೂರ್ತಿ ಸಂದೀಪ್ ಮೆಹ್ತಾ ಅಭಿಪ್ರಾಯಪಟ್ಟರು.
- 'ಮರಣದಂಡನೆ ಜಾರಿಯಲ್ಲಿ ನಿರ್ದಿಷ್ಟ ವಿಧಾನವನ್ನು ಅಳವಡಿಸಿಕೊಳ್ಳುವಂತೆ ಶಾಸಕಾಂಗಕ್ಕೆ ನಿರ್ದೇಶಿಸಲು ಸಾಧ್ಯವಿಲ್ಲ' ಎಂದೂ ನ್ಯಾಯಪೀಠ ಸ್ಪಷ್ಟಪಡಿಸಿತು.

## ❖ ಪೋಕ್ಸೊ ಪ್ರಕರಣ ಶೇ 94ರಷ್ಟು ಹೆಚ್ಚಳ

**ಸಂದರ್ಭ: 'ಇನ್‌ಟು ದಿ ಲೈಟ್ ಇಂಡೆಕ್ಸ್ 2025'ರ ಸಂಶೋಧನಾ ವರದಿಯಲ್ಲಿ ಬಹಿರಂಗ : ಭಾರತದಲ್ಲಿ 2017 ಹಾಗೂ 2022ರ ನಡುವೆ ಪೋಕ್ಸೊ ಕಾಯ್ದೆಯಡಿ ದಾಖಲಾದ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಅಪರಾಧ ಪ್ರಕರಣಗಳ ಸಂಖ್ಯೆ ಶೇ 94ರಷ್ಟು ಏರಿಕೆಯಾಗಿದೆ ಎಂದು 'ಇನ್‌ಟು ದಿ ಲೈಟ್ ಇಂಡೆಕ್ಸ್ 2025'ರ ಸಂಶೋಧನಾ ವರದಿ ಹೇಳಿದೆ.**

- ಎಡಿನ್‌ಬರ್ಗ್ ವಿಶ್ವವಿದ್ಯಾಲಯ ಮತ್ತು ನ್ಯೂ ಸೌತ್ ವೇಲ್ಸ್ ವಿಶ್ವವಿದ್ಯಾಲಯವು ಆಯೋಜಿಸಿರುವ, ಚೈಲ್ಡ್‌ಲೈಟ್ ಗ್ಲೋಬಲ್ ಚೈಲ್ಡ್ ಸೇಫ್ಟಿ ಇನ್‌ಸ್ಟಿಟ್ಯೂಟ್ ಈ ವಾರ ಬಿಡುಗಡೆ ಮಾಡಿದ ಸಂಶೋಧನಾ ವರದಿಯಲ್ಲಿ ಈ ವಿವರಗಳು ಬಹಿರಂಗಗೊಂಡಿವೆ.
- ಈ ವರದಿ ಪ್ರಕಾರ, ಅಪರಾಧ ಪ್ರಕರಣಗಳ ಸಂಖ್ಯೆ 33,210ರಿಂದ 64,469ಕ್ಕೆ ಹೆಚ್ಚಾಗಿದೆ. ಇದರ ಹೊರತಾಗಿಯೂ ಕಾನೂನು ಕ್ರಮ ಜರುಗಿಸುವ ಪ್ರಮಾಣವು ಶೇ 90ಕ್ಕಿಂತ ಹೆಚ್ಚಿದೆ. ಇದು ಕಾಯ್ದೆಯ ಪರಿಣಾಮಕಾರಿ ಜಾರಿ ಮತ್ತು ಪ್ರಕರಣಗಳ ವರದಿ ಮಾಡುವ ಕಾರ್ಯವಿಧಾನಗಳನ್ನು ಸೂಚಿಸುತ್ತದೆ ಎಂದು ಹೇಳಿದೆ.

Dr. Rajkumar IAS/KAS Academy

- ಭಾರತದಲ್ಲಿ ಮಕ್ಕಳ ಲೈಂಗಿಕ ಶೋಷಣೆ ಮತ್ತು ನಿಂದನೆ ಕುರಿತು ಹೆಚ್ಚಿನ ದತ್ತಾಂಶ ಲಭ್ಯವಿದೆ. ಅಪರಾಧಗಳ ಅಂಕಿ– ಅಂಶಗಳಲ್ಲಿನ ಪಾರದರ್ಶಕತೆಯು ಹೆಚ್ಚು ಪರಿಣಾಮಕಾರಿ ಮೇಲ್ವಿಚಾರಣೆ ಮತ್ತು ತ್ವರಿತಗತಿಯ ಕ್ರಮಕ್ಕೆ ಅವಕಾಶ ಮಾಡಿಕೊಡುತ್ತದೆ.
- ಎಂಟು ಮಕ್ಕಳ ಪೈಕಿ ಒಬ್ಬರು (ಶೇ 12.5) 18 ವರ್ಷ ತುಂಬುವ ಮೊದಲೇ ಲೈಂಗಿಕ ದೌರ್ಜನ್ಯ ಅಥವಾ ಅತ್ಯಾಚಾರಕ್ಕೆ ಒಳಗಾಗುತ್ತಿದ್ದಾರೆ ಎಂಬುದನ್ನು ಭಾರತ, ನೇಪಾಳ ಮತ್ತು ಶ್ರೀಲಂಕಾದಲ್ಲಿ ನಡೆಸಿದ ಸಮೀಕ್ಷೆಯ ದತ್ತಾಂಶವು ತೋರಿಸುತ್ತದೆ. ಈ ಮೂರು ದೇಶಗಳಲ್ಲಿ ಸುಮಾರು 5.4 ಕೋಟಿ ಮಕ್ಕಳು ಇದ್ದಾರೆ.
- '2024ರಲ್ಲಿ ದಕ್ಷಿಣ ಏಷ್ಯಾ ರಾಷ್ಟ್ರಗಳ ಪೈಕಿ ಭಾರತ, ಬಾಂಗ್ಲಾದೇಶ ಮತ್ತು ಪಾಕಿಸ್ತಾನದಲ್ಲಿ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯದ (ಸಿಎಸ್ಎಎಂ) ಬಹುಪಾಲು ಪ್ರಕರಣಗಳು ವರದಿಯಾಗಿವೆ. ಆದರೂ, ಭಾರತವು ಅತ್ಯಂತ ಕಡಿಮೆ ಸಿಎಸ್ಎಎಂ ಲಭ್ಯತೆಯ ಅನುಪಾತ ಹೊಂದಿದೆ (ಪ್ರತಿ 10 ಸಾವಿರ ಜನರಿಗೆ 15 ವರದಿಗಳು). ಇದು ಪರಿಣಾಮಕಾರಿಯಾದ ಪತ್ತೆ ಕಾರ್ಯ ಮತ್ತು ವರದಿ ಮಾಡುವ ವ್ಯವಸ್ಥೆಗಳನ್ನು ಸೂಚಿಸುತ್ತದೆ' ಎಂದು ವರದಿ ಹೇಳಿದೆ.

## ❖ ರಷ್ಯಾದಿಂದ ಆಮದು ತಕ್ಷಣಕ್ಕೆ ನಿಲ್ಲದು

**ಸಂದರ್ಭ: ಭಾರತವು ರಷ್ಯಾದಿಂದ ಕಚ್ಚಾ ತೈಲ ಆಮದು ಮಾಡಿಕೊಳ್ಳುವುದನ್ನು ತಕ್ಷಣಕ್ಕೆ ನಿಲ್ಲಿಸುವುದು ಸಾಧ್ಯವಾಗದ ಕೆಲಸ ಎಂದು ಮಾರುಕಟ್ಟೆ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.**

- ಕಚ್ಚಾ ತೈಲ ಆಮದು ಬಗ್ಗೆ 4–6 ವಾರಗಳ ಮೊದಲೇ ಒಪ್ಪಂದ ಮಾಡಿಕೊಳ್ಳಲಾಗುತ್ತದೆ. ಹೀಗಾಗಿ, ಕನಿಷ್ಠಪಕ್ಷ ನವೆಂಬರ್ ಅಂತ್ಯದವರೆಗಿನ ಆಮದು ಬಗ್ಗೆ ಈಗಾಗಲೇ ಒಪ್ಪಂದ ಆಗಿರುತ್ತದೆ. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಹೇಳಿರುವುದು ನಿಜ ಎಂದಾದರೆ, ರಷ್ಯಾದಿಂದ ಕಚ್ಚಾ ತೈಲ ಆಮದು ನವೆಂಬರ್ ಮೂರನೆಯ ಅಥವಾ ನಾಲ್ಕನೆಯ ವಾರದಿಂದ ಕೊನೆಗೊಳ್ಳಬಹುದು ಎಂದು ತಜ್ಞರು ಹೇಳಿದ್ದಾರೆ.
- 'ರಷ್ಯಾದಿಂದ ಕಚ್ಚಾ ತೈಲ ಖರೀದಿ ನಿಲ್ಲಿಸಲು ಭಾರತ ಒಪ್ಪಿದೆ' ಎಂದು ಟ್ರಂಪ್ ಅವರು ಹೇಳಿರುವುದು ರಾಜಕೀಯ ಮಾತಿನಂತೆ ಕಾಣುತ್ತಿದೆ ಎಂದು ವಿಶ್ಲೇಷಣಾ ಸಂಸ್ಥೆ ಕೆಪ್ಲರ್ ಹೇಳಿದೆ. ಆಮದು ನಿಲ್ಲಿಸುವ ಬಗ್ಗೆ ಕೇಂದ್ರ ಸರ್ಕಾರವು ಅಧಿಕೃತ ಹೇಳಿಕೆ ನೀಡಿಲ್ಲ.
- ಅಕ್ಟೋಬರ್‌ನಲ್ಲಿ ಭಾರತವು ರಷ್ಯಾದಿಂದ ದಿನಕ್ಕೆ 18 ಲಕ್ಷ ಬ್ಯಾರಲ್ ಕಚ್ಚಾ ತೈಲ ಖರೀದಿಸಿದೆ ಎಂದು ಕೆಪ್ಲರ್ ಅಂದಾಜು ಮಾಡಿದೆ. ಸೆಪ್ಟೆಂಬರ್‌ನಲ್ಲಿ ಖರೀದಿಸುತ್ತಿದ್ದ ಮಟ್ಟಕ್ಕೆ ಹೋಲಿಸಿದರೆ ಇದು ದಿನಕ್ಕೆ 2.50 ಲಕ್ಷ ಬ್ಯಾರಲ್‌ನಷ್ಟು ಹೆಚ್ಚು.
- ಜುಲೈ–ಸೆಪ್ಟೆಂಬರ್ ತ್ರೈಮಾಸಿಕದಲ್ಲಿ ಖರೀದಿಯು ತುಸು ಕಡಿಮೆ ಆಗಿದ್ದಕ್ಕೆ ಕಾರಣ ಅಮೆರಿಕವು ಭಾರತದ ಸರಕುಗಳ ಮೇಲೆ ವಿಧಿಸಿದ ಸುಂಕ ಅಲ್ಲ. ಅದಕ್ಕೆ ಇತರ ಕಾರಣಗಳಿದ್ದವು, ಅದರಲ್ಲೂ ಮುಖ್ಯವಾಗಿ ಸರ್ಕಾರಿ ಸ್ವಾಮ್ಯದ ತೈಲ ಸಂಸ್ಕರಣಾ ಘಟಕಗಳಲ್ಲಿ ವಾರ್ಷಿಕ ನಿರ್ವಹಣಾ ಚಟುವಟಿಕೆಗಳು ಕಾರಣವಾಗಿದ್ದವು.
- ರಷ್ಯಾದಿಂದ ಕಚ್ಚಾ ತೈಲ ಆಮದು ಮಾಡಿಕೊಳ್ಳುವಲ್ಲಿ ಎರಡನೆಯ ಸ್ಥಾನದಲ್ಲಿ ಇರುವ ಭಾರತವು ಆಮದನ್ನು ನಿಲ್ಲಿಸಿದರೆ ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆಯು ಬ್ಯಾರಲ್‌ಗೆ 100 ಡಾಲರ್ ವರೆಗೆ ಹೆಚ್ಚಳವಾಗುವ ಅಪಾಯ ಇದೆ. ಇದರ ಪರಿಣಾಮವಾಗಿ ಹಣದುಬ್ಬರವು ಜಗತ್ತಿನೆಲ್ಲೆಡೆ ಏರಿಕೆ ಕಾಣಬಹುದು ಎಂದು ತಜ್ಞರು ಭೀತಿ ವ್ಯಕ್ತಪಡಿಸಿದ್ದಾರೆ.
- ರಷ್ಯಾದ ಕಚ್ಚಾ ತೈಲ ಆಮದು ನಿಲ್ಲಿಸಬೇಕು ಎಂದಾದರೆ ಭಾರತದ ಕಂಪನಿಗಳು ದೊಡ್ಡ ಮಟ್ಟದಲ್ಲಿ ಆರ್ಥಿಕ ಲಾಭವನ್ನು ಬಿಟ್ಟುಕೊಡಬೇಕಾಗುತ್ತದೆ. ಒಂದು ಅಂದಾಜಿನ ಪ್ರಕಾರ ದೇಶದ ವಾರ್ಷಿಕ ಆಮದು ವೆಚ್ಚವು 5 ಬಿಲಿಯನ್ ಡಾಲರ್‌ವರೆಗೆ (ಅಂದಾಜು ₹43 ಸಾವಿರ ಕೋಟಿ) ಹೆಚ್ಚಬಹುದು.

Dr. Rajkumar IAS Academy

# ಕರುನಾಡು ಗಜನಾಡು

ದೇಶದಲ್ಲಿ ಕಾಡಾನೆಗಳ ಸಂಖ್ಯೆ ಕುಸಿತವಾಗಿರುವುದನ್ನು ಕೆಲವು ದಿನಗಳ ಹಿಂದೆಯಷ್ಟೇ ಬಿಡುಗಡೆಯಾಗಿರುವ 'ಭಾರತದಲ್ಲಿ ಆನೆಗಳ ಸ್ಥಿತಿಗತಿ ವರದಿ'ಯ ಅಂಕಿ ಅಂಶಗಳು ತೋರಿಸಿವೆ. 2017ರ ವರದಿಗೆ ಹೋಲಿಸಿದರೆ ಆನೆಗಳ ಸಂಖ್ಯೆ ಶೇ 25ರಷ್ಟು ಕಡಿಮೆಯಾಗಿದೆ. ಆದರೆ ಇದೇ ಮೊದಲ ಬಾರಿಗೆ ದೇಶದಲ್ಲಿ ಡಿಎನ್‌ಎ ಆಧಾರಿತವಾಗಿ ಆನೆಗಳ ಗಣತಿ ನಡೆದಿದೆ. ಹಿಂದಿನ ಗಣತಿಗಳಿಗೆ ಹೋಲಿಸಿದರೆ ಇದು ಹೆಚ್ಚು ನಿಖರ ಎಂದು ಹೇಳಲಾಗಿದೆ. ಆನೆಗಳ ಸಂಖ್ಯೆಯಲ್ಲಿ ಈ ಬಾರಿಯೂ ಕರ್ನಾಟಕ ಮೊದಲ ಸ್ಥಾನದಲ್ಲಿದೆ. ಈ ಸಲದ ಗಣತಿಯು ಸಂಪೂರ್ಣವಾಗಿ ಭಿನ್ನ ರೀತಿಯಲ್ಲಿ ನಡೆದಿರುವುದರಿಂದ ಹಳೆಯ ಸಂಖ್ಯೆಗಳೊಂದಿಗೆ ಹೋಲಿಸುವುದು ಸರಿಯಲ್ಲ ಎಂದು ವರದಿ ಹೇಳಿದೆ. ದೇಶದಲ್ಲಿ ಆನೆಗಳ ಸಂರಕ್ಷಣೆಗೆ ಇರುವ ಸವಾಲುಗಳನ್ನೂ ವಿವರಿಸಿರುವ ವರದಿ, ಅಭಿವೃದ್ಧಿ ಯೋಜನೆಗಳು, ಅರಣ್ಯ ನಾಶ, ಮಾನವನ ಹಸ್ತಕ್ಷೇಪ ಕಾಡಾನೆಗಳಿಗೆ ಕಂಟಕವಾಗಿವೆ ಎಂದು ಎಚ್ಚರಿಸಿದೆ

• ಸೂರ್ಯನಾರಾಯಣ ವಿ., ಬಿ.ವಿ.ಶ್ರೀನಾಥ್

ಭಾರತದಲ್ಲಿ 22,446 ಕಾಡಾನೆಗಳಿವೆ ಎಂದು ಸಿಂಕ್ರೋನಸ್ ಆಲ್ ಇಂಡಿಯಾ ಎಲಿಫೆಂಟ್ ಎಸ್ಟಿಮೇಷನ್ ಪ್ರೋಗ್ರಾಂ (ಎಸ್‌ಎಐಇಇ 2021–25) ಹೆಸರಿನಲ್ಲಿ ನಡೆದ ಗಣತಿಯ ಆಧಾರದಲ್ಲಿ ಸಿದ್ಧಪಡಿಸಲಾಗಿರುವ 'ಭಾರತದಲ್ಲಿ ಆನೆಗಳ ಸ್ಥಿತಿಗತಿ ವರದಿ' ಹೇಳಿದೆ. ಪರಿಸರ ಸಚಿವಾಲಯ, ಪ್ರಾಜೆಕ್ಟ್ ಎಲಿಫೆಂಟ್ ಮತ್ತು ವೈಲ್ಡ್‌ಲೈಫ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾ ಜಂಟಿಯಾಗಿ ಈ ಗಣತಿ ನಡೆಸಿವೆ.

ರಾಜ್ಯಗಳ ಪೈಕಿ ಆನೆಗಳ ಸಂಖ್ಯೆಯಲ್ಲಿ ಕರ್ನಾಟಕವು (6,013) ಮೊದಲ ಸ್ಥಾನದಲ್ಲಿದೆ. ನಂತರದ ಸ್ಥಾನಗಳಲ್ಲಿ ಅಸ್ಸಾಂ (4,159), ತಮಿಳುನಾಡು (3,136), ಕೇರಳ (2,785) ಮತ್ತು ಉತ್ತರಾಖಂಡ (1,792) ಇವೆ. ದೇಶದ ಆನೆಗಳ ಪೈಕಿ ಶೇ 59.29ರಷ್ಟು ಕರ್ನಾಟಕ, ಅಸ್ಸಾಂ, ತಮಿಳುನಾಡಿನಲ್ಲಿಯೇ ಇವೆ ಎಂದು ವರದಿ ಹೇಳಿದೆ. ಪ್ರದೇಶವಾರು ಆನೆಗಳ ಸಂಖ್ಯೆಯಲ್ಲಿ, ಕರ್ನಾಟಕ, ತಮಿಳುನಾಡು ಮತ್ತು ಕೇರಳ ರಾಜ್ಯದಲ್ಲಿ ಹರಡಿರುವ ಪಶ್ಚಿಮ ಘಟ್ಟಗಳು ಮುಂಚೂಣಿ ಸ್ಥಾನ ಪಡೆದಿವೆ. ಜತೆಗೆ, ಈಶಾನ್ಯ ರಾಜ್ಯಗಳ ವ್ಯಾಪ್ತಿಯ ಅಸ್ಸಾಂ ಮತ್ತು ಬ್ರಹ್ಮಪುತ್ರ ಜಲಾನಯನ ಪ್ರದೇಶ ಎರಡನೇ ಸ್ಥಾನದಲ್ಲಿದೆ.

ಆನೆಗಳ ಸಮೀಕ್ಷೆ ಆರಂಭವಾಗಿದ್ದು 2021ರಲ್ಲಿ. ನಾಲ್ಕು ವರ್ಷಗಳ ನಂತರ 2025ರ ಅಕ್ಟೋಬರ್ 14ರಂದು ವರದಿ ಬಿಡುಗಡೆಯಾಗಿದೆ. ವಂಶವಾಹಿ ವಿಶ್ಲೇಷಣೆ ಮತ್ತು ದತ್ತಾಂಶ ದೃಢೀಕರಣವು ಸಂಕೀರ್ಣ ಪ್ರಕ್ರಿಯೆಯಾಗಿದ್ದರಿಂದ ಸಮೀಕ್ಷೆಗೆ ಹೆಚ್ಚು ಸಮಯ ವ್ಯಯವಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಭಾರತವು ಆನೆಗಳಿಗೆ ಪ್ರಸಿದ್ಧವಾಗಿದ್ದು, ದೇಶದಲ್ಲಿ ಆನೆಗಳ ಸಂತತಿಗೆ ಹಲವು ರೀತಿಯಲ್ಲಿ ಕಂಟಕ ಎದುರಾಗಿದೆ. ಚಾರಿತ್ರಿಕವಾಗಿ ದೇಶದಲ್ಲಿ ಆನೆಗಳ ಸಂಖ್ಯೆ ವಿಪುಲವಾಗಿತ್ತು. ಹಿಂದೆ ಆನೆಗಳು ಇದ್ದ ಒಟ್ಟು ಪ್ರದೇಶದ ಪೈಕಿ ಶೇ 3.5ರಷ್ಟು ಪ್ರದೇಶದಲ್ಲಿ ಮಾತ್ರವೇ ಪ್ರಸ್ತುತ ಅವು ಉಳಿದಿವೆ. ಪ್ರಪಂಚದ ಆನೆಗಳ ಸಂಖ್ಯೆಯಲ್ಲಿ ಭಾರತವು ಶೇ 60ರಷ್ಟು ಆನೆಗಳಿಗೆ ನೆಲೆಯಾಗಿದೆ. ಆದರೂ ಹಲವು ಕಾರಣಗಳಿಂದ ಅವುಗಳ ವಾಸಸ್ಥಳಗಳ ವಿಸ್ತೀರ್ಣ ಕಡಿಮೆಯಾಗುತ್ತಲೇ ಸಾಗುತ್ತಿದೆ ಎಂದು ವರದಿ ಹೇಳಿದೆ.



ಚಿತ್ರ: ಗುರಿಂದರ್ಜಿತ್ ಸಿಂಗ್; ಭಾರತದಲ್ಲಿ ಆನೆಗಳ ಸ್ಥಿತಿಗತಿ ವರದಿ

## ಡಿಎನ್‌ಎ ಆಧಾರಿತ ಸಮೀಕ್ಷೆ

2017ರವರೆಗೆ ನೇರ ಎಣಿಕೆ, ಮಾದರಿ ಬ್ಲಾಕ್ ಎಣಿಕೆ, ಲದ್ದಿ ಎಣಿಕೆ (Total Count Dung Count & Sample Block Count) ವಿಧಾನಗಳ ಮೂಲಕ ಆನೆ ಗಣತಿ ನಡೆಸಲಾಗುತ್ತಿತ್ತು. ಈ ಬಾರಿ ಆ ಮಾರ್ಗವನ್ನು ಕೈಬಿಡಲಾಗಿದೆ. ಮನುಷ್ಯರನ್ನು ಅವರ ವಂಶವಾಹಿ ಮೂಲಕ ಪತ್ತೆ ಹಚ್ಚುವ ವಿಧಾನವನ್ನೇ ಇಲ್ಲೂ ಅನುಸರಿಸಲಾಗಿದೆ. ಭೂಸಮೀಕ್ಷೆ, ಉಪಗ್ರಹ ಆಧಾರಿತ ಮ್ಯಾಪಿಂಗ್, ವಂಶವಾಹಿ ವಿಶ್ಲೇಷಣೆ– ಹೀಗೆ ಮೂರು ಹಂತದಲ್ಲಿ ಗಣತಿ ನಡೆಸಲಾಗಿದೆ. ಆನೆ ಲದ್ದಿ ಮಾದರಿಗಳನ್ನು ಸಂಗ್ರಹಿಸಿ ಡಿಎನ್‌ಎ ಪರೀಕ್ಷೆಗೆ ಒಳಪಡಿಸಲಾಗಿದೆ. ಇದು ಭಿನ್ನ ಪ್ರಯತ್ನವಾಗಿದ್ದು, ಮುಂದಿನ ದಿನಗಳಲ್ಲಿ ಈ ಮಾದರಿಯನ್ನು ಮತ್ತಷ್ಟು ಅಭಿವೃದ್ಧಿ ಪಡಿಸಲಾಗುವುದು. ಆನೆಗಳ ಮೇಲೆ ನಿಗಾ ಮತ್ತು ಸಂರಕ್ಷಣೆಯಲ್ಲೂ ಈ ಮಾರ್ಗವು ನೆರವಾಗಲಿದೆ ಎಂದು ವರದಿ ಉಲ್ಲೇಖಿಸಿದೆ.

### ಕರ್ನಾಟಕದಲ್ಲಿ ಅಲ್ಪ ಇಳಿಕೆ

6,049 — 2017

6,013 — 2021-25

### ಆನೆ ಗಣತಿ ಒಂದು ನೋಟ

| | |
|---|---|
| 4 ಲಕ್ಷ ಚದರ ಕಿ.ಮೀ | ಗಣತಿ ನಡೆದ ಅರಣ್ಯ ಪ್ರದೇಶದ ವ್ಯಾಪ್ತಿ |
| 20 | ಗಣತಿ ನಡೆದ ರಾಜ್ಯಗಳು |
| 21,056 | ಸಂಗ್ರಹಿಸಿದ ಆನೆ ಲದ್ದಿ ಮಾದರಿಗಳು |
| 3,19,460 | ಗುರುತಿಸಲಾದ ಆನೆ ಲದ್ದಿ ಸ್ಥಳಗಳು |
| 6.7 ಲಕ್ಷ ಕಿ.ಮೀ | ಗಣತಿಗಾಗಿ ಸಿಬ್ಬಂದಿ ನಡಿಗೆಯಲ್ಲಿ ಸಂಚರಿಸಿದ ಒಟ್ಟು ದೂರ |

### ದೇಶದಲ್ಲಿ ಆನೆಗಳ ಸಂಖ್ಯೆ ಇಳಿಕೆ

| ವರ್ಷ | ಸಂಖ್ಯೆ |
|---|---|
| 2002 | 26,373 |
| 2007 | 27,694 |
| 2012 | 30,051 |
| 2017 | 29,964 |
| 2021-25 | 22,446 |

### ಪಶ್ಚಿಮ ಘಟ್ಟದಲ್ಲೂ ಕುಸಿತ


| ವರ್ಷ | ಸಂಖ್ಯೆ |
|---|---|
| 2002 | 12,814 |
| 2007 | 14,005 |
| 2012 | 16,310 |
| 2017 | 14,587 |
| 2021-25 | 11,934 |

### ಯಾವ ರಾಜ್ಯದಲ್ಲಿ ಎಷ್ಟು ಆನೆಗಳು?

| ರಾಜ್ಯ | ಸಂಖ್ಯೆ |
|---|---|
| ಕರ್ನಾಟಕ | 6,013 |
| ಅಸ್ಸಾಂ | 4,159 |
| ತಮಿಳುನಾಡು | 3,136 |
| ಕೇರಳ | 2,785 |
| ಉತ್ತರಾಖಂಡ | 1,792 |
| ಒಡಿಶಾ | 912 |
| ಪಶ್ಚಿಮ ಬಂಗಾಳ | 707 |
| ಮೇಘಾಲಯ | 677 |
| ಅರುಣಾಚಲ ಪ್ರದೇಶ | 617 |
| ಛತ್ತೀಸಗಢ | 451 |
| ಉತ್ತರ ಪ್ರದೇಶ | 257 |
| ನಾಗಾಲ್ಯಾಂಡ್ | 252 |
| ಜಾರ್ಖಂಡ್ | 217 |
| ತ್ರಿಪುರಾ | 153 |
| ಆಂಧ್ರಪ್ರದೇಶ | 120 |
| ಮಧ್ಯಪ್ರದೇಶ | 97 |
| ಮಹಾರಾಷ್ಟ್ರ | 63 |
| ಮಿಜೋರಾಂ | 16 |
| ಬಿಹಾರ | 13 |
| ಮಣಿಪುರ | 9 |

ಭಾರತದಲ್ಲಿ 22,446 (ಕನಿಷ್ಠ– 18,255, ಗರಿಷ್ಠ–26,645)

### ಪ್ರದೇಶವಾರು ಆನೆಗಳ ಸಂಖ್ಯೆ






ಆಧಾರ: ಭಾರತದಲ್ಲಿ ಆನೆಗಳ ಸ್ಥಿತಿಗತಿ ವರದಿ, ಪಿಟಿಐ, ಎಎಫ್‌ಪಿ,

## ಮೈಸೂರು ಭಾಗದಲ್ಲಿ ಹೆಚ್ಚು

ಕರ್ನಾಟಕದಲ್ಲಿ ಬಂಡೀಪುರ, ನಾಗರಹೊಳೆ, ಭದ್ರಾ, ಕಾಳಿ, ಬಿಳಿಗಿರಿರಂಗನಾಥಸ್ವಾಮಿ ದೇವಾಲಯ ಹುಲಿ ಸಂರಕ್ಷಿತ ಪ್ರದೇಶಗಳ ವ್ಯಾಪ್ತಿಯಲ್ಲಿ ಗಣತಿ ನಡೆಸಲಾಗಿದೆ. ಒಟ್ಟು ಸಿಬ್ಬಂದಿ 45,323 ಕಿ.ಮೀ ದೂರ ಸಾಗಿ ವಿವರಗಳನ್ನು ದಾಖಲಿಸಿದ್ದಾರೆ.

ರಾಜ್ಯದಲ್ಲಿ ಕನಿಷ್ಠ 4,792, ಗರಿಷ್ಠ 7,235 ಆನೆಗಳಿವೆ ಎಂದು ವರದಿ ಹೇಳಿದ್ದು, ಸರಾಸರಿ ಲೆಕ್ಕಾಚಾರದಲ್ಲಿ ರಾಜ್ಯದಲ್ಲಿರುವ ಆನೆಗಳು 6,013. 2017ರ ಗಣತಿಯು 6,049 ಆನೆಗಳು ಇರುವುದಾಗಿ ಹೇಳಿತ್ತು. ಪಶ್ಚಿಮ ಘಟ್ಟದ ವ್ಯಾಪ್ತಿಯಲ್ಲಿರುವ ರಕ್ಷಿತಾರಣ್ಯಗಳ ಪೈಕಿ ಮೈಸೂರು ಭಾಗದಲ್ಲೇ ಹೆಚ್ಚು ಆನೆಗಳಿವೆ ಎಂದು ವರದಿ ಹೇಳಿದೆ.

ಕಾಳಿ, ದಾಂಡೇಲಿ, ಭದ್ರಾ ಹುಲಿ ಸಂರಕ್ಷಿತ ಪ್ರದೇಶದ ವ್ಯಾಪ್ತಿಗೆ ಬರುವ ಚಿಕ್ಕಮಗಳೂರು, ಕೊಪ್ಪ, ಭದ್ರಾವತಿ, ಶಿವಮೊಗ್ಗ ವಿಭಾಗಗಳಲ್ಲಿ ಆನೆಗಳ ಸಾಂದ್ರತೆ ಕಡಿಮೆ ಇದೆ. ಮೈಸೂರು ಭಾಗದ ಬಂಡೀಪುರ, ನಾಗರಹೊಳೆ, ಬಿಆರ್‌ಟಿ ಹಾಗೂ ಸುತ್ತಮುತ್ತಲಿನ ಅರಣ್ಯ ಪ್ರದೇಶಗಳಲ್ಲಿ ಹೆಚ್ಚು ಆನೆಗಳಿವೆ. ಹಲವು ವರ್ಷಗಳಿಂದ ಇಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಸಂರಕ್ಷಣಾ ಕ್ರಮಗಳು, ಹಸಿರು ಹೆಚ್ಚಾಗಲು ಕಾರಣವಾಗಿವೆ. ಬೇರೆ ಬೇರೆ ಅರಣ್ಯಗಳ ನಡುವೆ ಸಂಪರ್ಕ ಇರುವುದರಿಂದ ಈ ಭಾಗದಲ್ಲಿ ಆನೆಗಳ ಸಂಖ್ಯೆ ಉತ್ತಮವಾಗಿದೆ ಎಂದು ವರದಿ ವಿವರಿಸಿದೆ.

ರಾಜ್ಯವು ಆನೆಗಳ ಸಂಖ್ಯೆಯಲ್ಲಿ ಮೊದಲ ಸ್ಥಾನದಲ್ಲಿದೆ ಮತ್ತು ಮಾನವ–ಆನೆ ಸಂಘರ್ಷವೂ ಇಲ್ಲಿ ಜಾಸ್ತಿ ಇದೆ. ಅರಣ್ಯದ ಅಂಚಿನಲ್ಲಿ ಕೃಷಿ ಚಟುವಟಿಕೆಗಳು ಹೆಚ್ಚಾಗಿರುವುದು ಇದಕ್ಕೆ ಕಾರಣ. ಅರಣ್ಯದ ಒಳಗೆ ಮತ್ತು ಹೊರಗೆ ಜನವಸತಿ ಪ್ರದೇಶಗಳು ಇರುವುದು ಮತ್ತೊಂದು ಕಾರಣ. ವನ್ಯಜೀವಿಗಳ ಆವಾಸಗಳ ಒತ್ತುವರಿಯೂ ಜಾಸ್ತಿಯಾಗುತ್ತಿದ್ದು, ಜನಸಂಖ್ಯೆಯೂ ಹೆಚ್ಚಾಗುತ್ತಿದೆ. ಮಾನವ ಹಸ್ತಕ್ಷೇಪದಿಂದ ಕಾಳಿ, ಭದ್ರಾ ಹಾಗೂ ಮೈಸೂರು ವ್ಯಾಪ್ತಿಯ ಸಂರಕ್ಷಿತ ಪ್ರದೇಶಗಳ ಅರಣ್ಯ ನಾಶವಾಗುತ್ತಿರುವುದು ಆನೆಗಳ ಸಂರಕ್ಷಣೆಗೆ ಸವಾಲಾಗಿದೆ.



ಪ್ರಜಾವಾಣಿ ಚಿತ್ರ ಎಸ್.ಕೆ.ದಿನೇಶ್

## ಆನೆಗಳ ಸಂಖ್ಯೆ ಇಳಿಕೆಗೆ ಕಾರಣಗಳೇನು?

- ಆವಾಸದ ವ್ಯಾಪ್ತಿ ಕಿರಿದಾಗುತ್ತಿರುವುದು, ಕಾಡುಗಳು ಕಡಿಮೆಯಾಗಿರುವುದು
- ಪಶ್ಚಿಮ ಘಟ್ಟ, ಈಶಾನ್ಯ ಘಟ್ಟ ಸೇರಿದಂತೆ ಆನೆಗಳು ಹೆಚ್ಚಿನ ಸಂಖ್ಯೆಯಲ್ಲಿರುವ ಅರಣ್ಯ ಭಾಗದಲ್ಲಿ ಒತ್ತುವರಿ, ಅಭಿವೃದ್ಧಿ ಕಾಮಗಾರಿಗಳು ಮತ್ತು ಭೂ ಬಳಕೆ ಬದಲಾವಣೆಯಿಂದ ಸಾಂಪ್ರದಾಯಿಕ ಕಾರಿಡಾರ್‌ಗಳು ನಾಶವಾಗಿರುವುದು
- ಪಶ್ಚಿಮ ಘಟ್ಟ ಪ್ರದೇಶಗಳಲ್ಲಿ ಟೀ, ಕಾಫಿ ತೋಟಗಳ ವ್ಯಾಪ್ತಿ ವಿಸ್ತರಿಸುತ್ತಿರುವುದು, ಅಭಿವೃದ್ಧಿ ಯೋಜನೆಗಳ ಹೆಚ್ಚಳ
- ದೇಶದ ಮಧ್ಯಭಾಗದಲ್ಲಿ ಗಣಿಗಾರಿಕೆ ಹೆಚ್ಚಾಗಿದೆ. ಇದರಿಂದಾಗಿ ಆನೆಗಳ ಓಡಾಟಕ್ಕೆ ಅಡ್ಡಿ
- ಈಶಾನ್ಯ ಭಾಗದಲ್ಲಿ ಆನೆಗಳ ಕಾರಿಡಾರ್‌ಗಳು ನಾಶವಾಗಿವೆ. ಅರಣ್ಯ ಛಿದ್ರವಾಗಿವೆ, ಅಭಿವೃದ್ಧಿ ಕಾಮಗಾರಿಗಳು ಹೆಚ್ಚಾಗಿವೆ
- ಅರಣ್ಯದಲ್ಲಿ ಕಳೆ ಗಿಡಗಳು ಹೆಚ್ಚುತ್ತಿರುವುದು, ಮಾನವನ ಹಸ್ತಕ್ಷೇಪ, ಕೃಷಿ ಭೂಮಿಗೆ ಬೇಲಿ ಹಾಕುವುದು
- ಅಕೇಷಿಯಾದಂತಹ ಗಿಡಗಳನ್ನೊಳಗೊಂಡ ನೆಡುತೋಪುಗಳ ನಿರ್ಮಾಣ

## ಸಂರಕ್ಷಣೆ ಹೇಗೆ?

- ಕಾಡಂಚಿನ ಸಮುದಾಯಗಳ ಸಹಕಾರ ಪಡೆಯುವುದು
- ನದಿ ತೀರದ ಅರಣ್ಯಗಳು ಮತ್ತು ಕಾರಿಡಾರ್‌ಗಳ ರಕ್ಷಣೆ
- ಬೆಳೆ, ಜೀವಹಾನಿ ಸಂದರ್ಭದಲ್ಲಿ ಕ್ಷಿಪ್ರವಾಗಿ ಪರಿಹಾರ ವಿತರಣೆ
- ಆವಾಸಗಳ ಪುನರುಜ್ಜೀವನ
- ಕಠಿಣ ಸಂರಕ್ಷಣಾ ನಿಯಮಗಳ ಜಾರಿ
- ಜಾಗೃತಿ ಕಾರ್ಯಕ್ರಮಗಳ ಆಯೋಜನೆ

## ಪದಬಂ

**ಎಡದಿಂದ ಬಲಕ್ಕೆ**

1.ತಾಪವಿರುವಾಗಲೇ ಅತೀ ದುಃಖ (4)
3.ಗಟ್ಟಿಯಾಗಿ ಕೂಗಿದರೆ ಕೇಳುವಷ್ಟು ದೂರ (4)
5.ಇದು ಅಂತರಂಗ ಸ್ಪರ್ಶಿಯಾದುದು (3)
6.ಅವನಲ್ಲಿರುವ ಕೆಟ್ಟಗುಣ (4)
8.ಬರವಿದ್ದಾಗ ನೀಡಿದ ಪಾನಕ (4)
10.ಹೀಗೆ ಮಾಯವಾಗುವಿಕೆ (4)
12.ಗರತಿ ಸೇರಿರುವ ವರ್ಗ (4)
13.ಅನೇಕ ಚಿಕ್ಕ ಚಿಕ್ಕ ಮನೆಗಳುಳ್ಳ ಆವಾರ (3)
16.ಅಪಹಾಸ್ಯವನ್ನು ಹೀಗೆನ್ನಿ (4)
17.ನೂತನ ದಂಪತಿಗಳ ವಿಹಾರಯಾತ್ರೆ

**ಮೇಲಿಂದ ಕೆಳಕ್ಕೆ**

1.ಅತ್ತೆ ಹೇಳಿದ ವಿಳಾಸ!
2.ಪಣ ಕಟ್ಟಿ ತೋರಿಸಿದ ಅಳತೆ
3.ಮೊದಲಿನಿಂದ ಕೊನೆಯವರೆಗೂ ಇರುವಂಥದ್ದು
4.ಹೊಳೆದಾಟಲು ಬಳಸುವ ಸಾಧನ
7.ವರನ ತಗಾದೆಯೇ ಇದು?
9.ಬಹಳವೇ ಆತ್ಮೀಯ ನೆಂಟರ ಸಮೂಹ(
11.ಒಂಬತ್ತು ತಿಂಗಳಿದು
12.ಈ ತರ ತೋರಿದ ಬೇಧಭಾವ
14.ನೀರಿನಿಂದ ಸುತ್ತುವರೆದ ಭಾಗ
15. ಕಂದೀಲು ಇಲ್ಲಿದೆ

6195ನೇ

## ❖ 'ಬೆಂಗಳೂರಿನಲ್ಲಿ 943 ಟನ್ ಆಹಾರ ವ್ಯರ್ಥ'

**ಸಂದರ್ಭ: 'ಪ್ರತಿವರ್ಷ ಬೆಂಗಳೂರು ಒಂದರಲ್ಲೇ 943 ಟನ್ ಆಹಾರ ವ್ಯರ್ಥವಾಗುತ್ತಿದೆ. ಅಂದಾಜು ₹ 360 ಕೋಟಿ ಮೌಲ್ಯದ ಆಹಾರವನ್ನು ನಾವು ವ್ಯರ್ಥ ಮಾಡುತ್ತಿದ್ದೇವೆ ಎಂದು ಜಿಕೆವಿಕೆ ಅಧ್ಯಯನ ಹೇಳಿದೆ.**

- 'ಅನ್ನ ಭಾಗ್ಯದ ಅಕ್ಕಿಯನ್ನು ಸಂಗ್ರಹಿಸಿ ಕಾಳಸಂತೆಯಲ್ಲಿ ಮಾರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಕಾಳಸಂತೆ ಮಾರಾಟ ತಪ್ಪಿಸಲು 5 ಕಿಲೋ ಅಕ್ಕಿ ಕೊಟ್ಟು, ಉಳಿದ ಐದು ಕಿಲೋ ಕಾಳು, ಬೇಳೆ ವಿತರಿಸಲು ತೀರ್ಮಾನಿಸಿದ್ದೇವೆ.
- 'ನಾವು ಒಂದು ಕಾಲದಲ್ಲಿ ಆಹಾರ ಧಾನ್ಯಕ್ಕಾಗಿ ಅಮೆರಿಕದ ಮೇಲೆ ಅವಲಂಬಿತರಾಗಿದ್ದೆವು. ಈಗ ವಿದೇಶಗಳಿಗೆ ರಫ್ತು ಮಾಡುವ ಮಟ್ಟಕ್ಕೆ ಪ್ರಗತಿ ಸಾಧಿಸಿದ್ದೇವೆ.
- **'ಅನ್ನ ಸುವಿಧಾ' ಜಾರಿ: '2024-25ನೇ ಸಾಲಿನ ಬಜೆಟ್ ಘೋಷಣೆಯಂತೆ 75 ವರ್ಷ ದಾಟಿದ ಫಲಾನುಭವಿಗಳಿಗೆ ಪಡಿತರ ವಿತರಣೆಯನ್ನು ಮನೆಯ ಬಾಗಿಲಿಗೆ ತಲುಪಿಸುವ 'ಅನ್ನ ಸುವಿಧಾ ಯೋಜನೆ'ಯನ್ನು ಜಾರಿಗೊಳಿಸ ಲಾಗಿದೆ.**

## ❖ ಮೋದಿ ಭೇಟಿಯಾದ ಶ್ರೀಲಂಕಾ ಪ್ರಧಾನಿ

**ಸಂದರ್ಭ: ದೆಹಲಿಯ ತಮ್ಮ ಅಧಿಕೃತ ನಿವಾಸಕ್ಕೆ ಭೇಟಿ ನೀಡಿದ್ದ ಶ್ರೀಲಂಕಾ ಪ್ರಧಾನಿ ಹರಿಣಿ ಅಮರಸೂರ್ಯ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಸುದೀರ್ಘ ಚರ್ಚೆ ನಡೆಸಿದರು.**

- ಉಭಯ ದೇಶಗಳ ನಡುವಿನ ಸಹಕಾರ ವೃದ್ಧಿ, ಶಿಕ್ಷಣ, ಮಹಿಳಾ ಸ್ವಾವಲಂಬನೆ, ಸಂಶೋಧನೆ ಮತ್ತು ಭಾರತೀಯ ಮೀನುಗಾರರ ಸುರಕ್ಷತೆಯ ವಿಚಾರಗಳೂ ಸೇರಿದಂತೆ ಹಲವು ಅಂಶಗಳ ಬಗ್ಗೆ ಚರ್ಚೆ ನಡೆಯಿತು ಎಂದು ಮೋದಿ ಅವರು ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ತಿಳಿಸಿದ್ದಾರೆ.
- 'ನಾಗರಿಕರ ಸಮೃದ್ಧಿಯ ಆಶೋತ್ತರ ಈಡೇರಿಸುವುದು ಮತ್ತು ಪ್ರಾದೇಶಿಕ ಸಹಕಾರಕ್ಕೆ ಮತ್ತಷ್ಟು ಮಹತ್ವ ನೀಡುವುದು ಎರಡೂ ಆತ್ಮೀಯ ನೆರೆಯ ದೇಶಗಳ ಮಹತ್ವದ ಉದ್ದೇಶವಾಗಿದೆ' ಎಂದು ಮೋದಿ ಹೇಳಿದ್ದಾರೆ.

## ❖ ಬಿಹಾರ: ಆಮಿಷ ತಡೆಗೆ ಆಯೋಗ ಸೂಚನೆ

**ಸಂದರ್ಭ: ಬಿಹಾರ ಚುನಾವಣೆ ವೇಳೆ ಮತದಾರರನ್ನು ಒಲೈಸಲು ಮಾದಕವಸ್ತು, ಮದ್ಯ ಮತ್ತು ನಗದು ಬಳಕೆಯಾಗದಂತೆ ನೋಡಿಕೊಳ್ಳಬೇಕು ಎಂದು ಚುನಾವಣಾ ಆಯೋಗ ಕಾನೂನು ಜಾರಿ ಸಂಸ್ಥೆಗಳು ಮತ್ತು ಭದ್ರತಾ ಪಡೆಗಳಿಗೆ ಸೂಚಿಸಿದೆ.**

- ಮತದಾರರಿಗೆ ಆಮಿಷ ಒಡ್ಡುವ ಕಾರ್ಯಗಳನ್ನು ತಡೆಗಟ್ಟುವ ಕಾರ್ಯತಂತ್ರಕ್ಕೆ ಅಂತಿಮ ರೂಪ ನೀಡುವ ಉದ್ದೇಶದಿಂದ ಆಯೋಗವು ವಿವಿಧ ಕಾನೂನು ಜಾರಿ ಸಂಸ್ಥೆಗಳ ಮುಖ್ಯಸ್ಥರ ಜತೆಗೆ ಸಭೆ ನಡೆಸಿತು. ಅಕ್ರಮಗಳನ್ನು ತಡೆಗಟ್ಟಲು ತೆಗೆದುಕೊಂಡಿರುವ ಕ್ರಮಗಳ ಕುರಿತು ವಿವಿಧ ಸಂಸ್ಥೆಗಳ ಮುಖ್ಯಸ್ಥರು ಸಭೆಯಲ್ಲಿ ಮಾಹಿತಿ ನೀಡಿದರು.
- ಅಭ್ಯರ್ಥಿಗಳು, ರಾಜಕೀಯ ಪಕ್ಷಗಳ ವೆಚ್ಚಗಳು ಹಾಗೂ ಗೋಪ್ಯವಾಗಿ ನಡೆಸುವ ವೆಚ್ಚಗಳ ಮೇಲೆ ನಿಗಾ ಇಡುವಂತೆ ಸೂಚಿಸಲಾಯಿತು. ಅಲ್ಲದೆ ಮತದಾರರಿಗೆ ಆಮಿಷ ಒಡ್ಡುವ ಪ್ರಯತ್ನಗಳನ್ನು ಪರಿಣಾಮಕಾರಿಯಾಗಿ ತಡೆಯಲು ತಿಳಿಸಲಾಯಿತು.

- ಆರ್ಥಿಕ ಅಪರಾಧಗಳ ಕುರಿತ ಗುಪ್ತಚರ ಮಾಹಿತಿಯು ಕಾನೂನು ಜಾರಿ ಸಂಸ್ಥೆಗಳ ನಡುವೆ ಹಂಚಿಕೆಯಾಗಬೇಕು. ಅಲ್ಲದೆ ವಿವಿಧ ಸಂಸ್ಥೆಗಳ ನಡುವೆ ಸಮನ್ವಯ ಮತ್ತು ಸಹಕಾರ ಪ್ರಮುಖವಾಗಿರಬೇಕು ಎಂದು ತಿಳಿಸಲಾಯಿತು.
- ಅಂತರರಾಜ್ಯ ಮತ್ತು ಅಂತರ ರಾಷ್ಟ್ರೀಯ (ನೇಪಾಳ) ಗಡಿಗಳ ಮೇಲೆ ಹದ್ದಿನ ಕಣ್ಣಿಡಬೇಕು. ವಾಹನಗಳನ್ನು ತಪಾಸಣೆಗೊಳಪಡಿಸಬೇಕು. ಅಕ್ರಮ ವಸ್ತುಗಳ ಸಾಗಣೆ, ಮಾದಕ ವಸ್ತುಗಳು, ಮದ್ಯ, ನಗದು, ನಕಲಿ ನೋಟುಗಳು ರಾಜ್ಯ ಪ್ರವೇಶಿಸುವ ಸಾಧ್ಯತೆಯಿದೆ. ಹೀಗಾಗಿ ಇವುಗಳ ಮೇಲೆ ನಿಗಾ ಇಟ್ಟು ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದು ಕೊಳ್ಳಬೇಕು ಎಂದು ಸಭೆಯಲ್ಲಿ ಅಧಿಕಾರಿಗಳಿಗೆ ನಿರ್ದೇಶಿಸಲಾಯಿತು.
- ಮುಕ್ತ ಮತ್ತು ನ್ಯಾಯಯುತ ಚುನಾವಣೆಗಾಗಿ ಶೂನ್ಯ ಸಹಿಷ್ಣು ನೀತಿಯನ್ನು ಖಚಿತಪಡಿಸಿಕೊಳ್ಳುವಂತೆ ತಿಳಿಸಲಾಯಿತು. ಬಿಹಾರದ ಮುಖ್ಯ ಕಾರ್ಯದರ್ಶಿ, ಡಿಜಿಪಿ ಹಾಗೂ ರಾಜ್ಯ ಮುಖ್ಯ ಚುನಾವಣಾ ಅಧಿಕಾರಿ ಆನ್‌ಲೈನ್ ಮೂಲಕ ಸಭೆಯಲ್ಲಿ ಭಾಗವಹಿಸಿದ್ದರು.
- ಸಿಬಿಡಿಟಿ, ಸಿಬಿಐಸಿ, ಇ.ಡಿ, ಸಿಇಐಬಿ, ಎಫ್‌ಐಯು–ಐಎನ್‌ಡಿ, ಆರ್‌ಬಿಐ, ಐಬಿಎ, ಎನ್‌ಸಿಬಿ, ಸಿಐಎಸ್‌ಎಫ್, ಬಿಎಸ್‌ಎಫ್, ಸಿಆರ್‌ಪಿಎಫ್, ಎಸ್‌ಎಸ್‌ಬಿ, ಬಿಸಿಎಎಸ್, ಎಎಐ ಮತ್ತು ಇತರ ಇಲಾಖೆಗಳ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿದ್ದರು.
- ಬಿಹಾರ ವಿಧಾನಸಭೆಗೆ ನವೆಂಬರ್ 6 ಮತ್ತು 11ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದ್ದು, ನವೆಂಬರ್ 14ರಂದು ಮತ ಎಣಿಕೆ ನಡೆಯಲಿದೆ.

## ❖ ಬ್ರಹ್ಮೋಸ್: ಹಸಿರು ನಿಶಾನೆ ಇಂದು

**ಸಂದರ್ಭ: ಲಖನೌದ ಸರೋಜಿನಿ ನಗರದಲ್ಲಿರುವ ಬ್ರಹ್ಮೋಸ್ ಏರೋಸ್ಪೇಸ್ ಘಟಕದಲ್ಲಿ ಮೊದಲ ಬ್ಯಾಚ್‌ನ ಬ್ರಹ್ಮೋಸ್ ಕ್ಷಿಪಣಿಗಳ ತಯಾರಿಕೆಯು ಯಶಸ್ವಿಯಾಗಿ ಪೂರ್ಣಗೊಂಡಿದೆ.**

- 'ಉತ್ತರ ಪ್ರದೇಶ ರಕ್ಷಣಾ ಕೈಗಾರಿಕಾ ಕಾರಿಡಾರ್‌ನ (ಯುಪಿಡಿಐಸಿ) ಮಹತ್ವದ ಮೈಲಿಗಲ್ಲಾಗಿರುವ ಇದು, ರಕ್ಷಣಾ ಉತ್ಪನ್ನಗಳಲ್ಲಿ ಸ್ವಾವಲಂಬನೆ ಸಾಧಿಸುವ ದೇಶದ ಸಂಕಲ್ಪಕ್ಕೆ ನವಚೈತನ್ಯವನ್ನು ತುಂಬುತ್ತದೆ' ಎಂದಿದೆ.
- **ಬ್ರಹ್ಮೋಸ್ ಸೂಪರ್‌ಸಾನಿಕ್ ಕ್ಷಿಪಣಿಗಳ ತಯಾರಕರಾದ ಬ್ರಹ್ಮೋಸ್ ಏರೋಸ್ಪೇಸ್, ಲಖನೌದಲ್ಲಿನ ತನ್ನ ಘಟಕದಲ್ಲಿ ಮೊದಲ ಬ್ಯಾಚ್‌ನ ಕ್ಷಿಪಣಿಗಳನ್ನು ಯಶಸ್ವಿಯಾಗಿ ಉತ್ಪಾದಿಸಿದೆ**. ಈ ಅತ್ಯಾಧುನಿಕ ಘಟಕವು ಸಕಲ ಸೌಲಭ್ಯಗಳನ್ನು ಒಳಗೊಂಡಿದ್ದು, 2025ರ ಮೇ 11ರಂದು ಆರಂಭಗೊಂಡಿತ್ತು.

## ❖ ಲಿಂಗತ್ವ ಅಲ್ಪಸಂಖ್ಯಾತರಿಗೆ ನೀತಿ ರೂಪಿಸಿ

**ಸಂದರ್ಭ: ಲಿಂಗತ್ವ ಅಲ್ಪಸಂಖ್ಯಾತರ ಹಕ್ಕುಗಳ ರಕ್ಷಣೆಗೆ 2019ರಲ್ಲಿ ಕಾನೂನು ಜಾರಿಯಾದರೂ ಆ ಸಮುದಾಯದವರು ಎದುರಿಸುತ್ತಿರುವ ತಾರತಮ್ಯದ ಬಗ್ಗೆ ಸುಪ್ರೀಂ ಕೋರ್ಟ್ ತೀವ್ರ ಕಳವಳ ವ್ಯಕ್ತಪಡಿಸಿದೆ.**

- ಮಹತ್ವದ ತೀರ್ಪಿನಲ್ಲಿ ಸುಪ್ರೀಂ ಕೋರ್ಟ್, ಲಿಂಗತ್ವ ಅಲ್ಪಸಂಖ್ಯಾತ ಸಮುದಾಯದವರ ಸಮಸ್ಯೆಗಳನ್ನು ಬಗೆಹರಿಸಲು ಹೊಸ ನೀತಿಯನ್ನು ಜಾರಿಗೆ ತರುವಂತೆ ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಿತು.
- ನ್ಯಾಯಮೂರ್ತಿಗಳಾದ ಜೆ.ಬಿ ಪಾರ್ದೀವಾಲಾ ಮತ್ತು ಆರ್. ಮಹಾದೇವನ್ ಅವರ ಪೀಠವು, '2019ರ ಲಿಂಗತ್ವ ಅಲ್ಪಸಂಖ್ಯಾತ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) ಕಾಯ್ದೆ' ಮತ್ತು ಅದಕ್ಕೆ ಸಂಬಂಧಿಸಿದ ನಿಯಮಗಳು ಕಡತ ಗಳಲ್ಲಿ ಮಾತ್ರ ಉಳಿದಿವೆ' ಎಂದು ಹೇಳಿತು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಾಯ್ದೆ ಜಾರಿ ಬಗ್ಗೆ 'ನಿರಾಸಕ್ತಿ'ತೋರಿವೆ ಎಂದು ಅಸಮಾಧಾನ ವ್ಯಕ್ತಪಡಿಸಿತು.



Dr. Rajkumar IAS/KAS Academy

- ಲಿಂಗತ್ವ ಅಲ್ಪಸಂಖ್ಯಾತರು ಎದುರಿಸುತ್ತಿರುವ ಸಮಸ್ಯೆಗಳನ್ನು ಬಗೆಹರಿಸಲು ದೆಹಲಿ ಹೈಕೋರ್ಟ್‌ನ ಮಾಜಿ ನ್ಯಾಯಮೂರ್ತಿ ಆಶಾ ಮೆನನ್ ನೇತೃತ್ವದ ಸಲಹಾ ಸಮಿತಿಯನ್ನು ಸುಪ್ರೀಂ ಕೋರ್ಟ್ ರಚಿಸಿತು.
- ಈ ತೀರ್ಪು ಹೊರಬಂದ ದಿನಾಂಕದಿಂದ ಆರು ತಿಂಗಳ ಒಳಗಾಗಿ ವರದಿ ಅಥವಾ ಕರಡು ನೀತಿಯನ್ನು ಸಿದ್ಧಪಡಿಸುವಂತೆ ಪೀಠವು ಸಮಿತಿಗೆ ಸೂಚಿಸಿತು. ಸಮಿತಿಯು ವರದಿ ಸಲ್ಲಿಸಿದ ಮೂರು ತಿಂಗಳ ಒಳಗಾಗಿ ತನ್ನದೇ ಆದ 'ಸಮಾನ ಅವಕಾಶ ನೀತಿ'ಯನ್ನು ಜಾರಿಗೆ ತರುವಂತೆ ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಿತು.
- 'ಲಿಂಗತ್ವ ಅಲ್ಪಸಂಖ್ಯಾತರು ತಾರತಮ್ಯವನ್ನು ಎದುರಿಸುತ್ತಲೇ ಇದ್ದಾರೆ. ಆರೋಗ್ಯ ರಕ್ಷಣೆ, ಆರ್ಥಿಕ ಅವಕಾಶಗಳು ಮತ್ತು ಶೈಕ್ಷಣಿಕ ನೀತಿಯಿಂದ ಹೊರಗೆ ಇಟ್ಟಿರುವುದು ಅವರ ಸಂಕಷ್ಟ ಹೆಚ್ಚಲು ಕಾರಣವಾಗಿದೆ' ಎಂದು ಹೇಳಿತು.
- ಉದ್ಯೋಗದಲ್ಲಿ ಎದುರಿಸಿದ ತಾರತಮ್ಯ ಮತ್ತು ಅವಮಾನದಿಂದ ನೊಂದ ಲಿಂಗತ್ವ ಅಲ್ಪಸಂಖ್ಯಾತ ರೊಬ್ಬರು ಸಲ್ಲಿಸಿರುವ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ಈ ತೀರ್ಪು ನೀಡಿದೆ. ಉತ್ತರ ಪ್ರದೇಶ ಮತ್ತು ಗುಜರಾತ್‌ನ ಎರಡು ಖಾಸಗಿ ಶಾಲೆಗಳಿಂದ ತಮ್ಮನ್ನು ವಜಾಗೊಳಿಸಲಾಯಿತು ಎಂದು ಅವರು ಅರ್ಜಿಯಲ್ಲಿ ತಿಳಿಸಿದ್ದರು.

**<u>ವಿಧವೆಯ ಪಿತ್ರಾರ್ಜಿತ ಆಸ್ತಿ ಹಕ್ಕು ಎತ್ತಿಹಿಡಿದ 'ಸುಪ್ರೀಂ'</u>**

- 'ಆಸ್ತಿಯನ್ನು ಮಾರಾಟ ಮಾಡುವ ಒಪ್ಪಂದವು ಮಾಲೀಕತ್ವದ ಹಕ್ಕುಗಳನ್ನು ವರ್ಗಾಯಿಸುವುದಿಲ್ಲ' ಎಂದು ಹೇಳಿರುವ ಸುಪ್ರೀಂ ಕೋರ್ಟ್, 'ಮೃತ ವ್ಯಕ್ತಿಗೆ ಸೇರಿದ ಎಲ್ಲಾ ಸ್ವತ್ತುಗಳು ಮುಸ್ಲಿಂ ಕಾನೂನಿನ ಪ್ರಕಾರ ಹಂಚಬೇಕಾದ ಪಿತ್ರಾರ್ಜಿತ ಆಸ್ತಿಯ ಭಾಗವಾಗಿರುತ್ತವೆ' ಎಂದು ತೀರ್ಪು ನೀಡಿದೆ.
- ಬಾಂಬೆ ಹೈಕೋರ್ಟ್ ತೀರ್ಪಿನ ವಿರುದ್ಧ ಜೊಹರಾಬಿ ಎಂಬ ಮಹಿಳೆ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ಈ ತೀರ್ಪು ನೀಡಿದೆ. ಮೃತಪಟ್ಟ ಚಾಂದ್ ಖಾನ್ ಅವರಿಗೆ ಸೇರಿದ ಆಸ್ತಿಗಳಿಗೆ ಸಂಬಂಧಿಸಿದ ಕೌಟುಂಬಿಕ ವಿವಾದ ಇದಾಗಿದೆ. 'ಚಾಂದ್ ಖಾನ್ ಅವರ ಆಸ್ತಿಯು ಮುಸ್ಲಿಂ ಕಾನೂನಿನಡಿ ಪಿತ್ರಾರ್ಜಿತ ಆಸ್ತಿಯಾಗಿದೆ. ಆಸ್ತಿಯ ಮುಕ್ಕಾಲು ಭಾಗ ತಮಗೆ ಸೇರಬೇಕು' ಎಂಬುದು ವಿಧವೆ ಜೊಹರಾಬಿ ಅವರ ವಾದವಾಗಿದೆ.
- ಆದರೆ, ಜೊಹರಾಬಿ ಅವರ ವಾದವನ್ನು ಚಾಂದ್ ಖಾನ್ ಅವರ ಸಹೋದರ ಇಮಾಮ್ ಖಾನ್ ಪ್ರಶ್ನಿಸಿದರು. 'ಚಾಂದ್ ಖಾನ್ ಅವರ ಜೀವಿತಾವಧಿಯಲ್ಲಿ ಆಸ್ತಿಗಳ ಮಾರಾಟದ ಒಪ್ಪಂದದ ಮೂಲಕ ಮೂರನೇ ವ್ಯಕ್ತಿಗೆ ವರ್ಗಾಯಿಸಲಾಗಿದೆ' ಎಂಬ ವಾದವನ್ನು ಇಮಾಮ್ ಮುಂದಿಟ್ಟರು.
- 'ಆಸ್ತಿಯನ್ನು ಮಾರಾಟ ಮಾಡುವ ಒಪ್ಪಂದವು ಮಾಲೀಕತ್ವದ ಹಕ್ಕುಗಳನ್ನು ವರ್ಗಾಯಿಸುವುದಿಲ್ಲ ಅಥವಾ ನಿರ್ದಿಷ್ಟ ಆಸ್ತಿಯನ್ನು ಖರೀದಿಸಲು ಮುಂದಾಗಿರುವವರಿಗೂ ಆ ಆಸ್ತಿಯ ಮೇಲೆ ಯಾವುದೇ ಅಧಿಕಾರ ನೀಡುವುದಿಲ್ಲ' ಎಂದು ಪೀಠ ಹೇಳಿತು.

## ❖ ಭಾರತದ ಗ್ರಾಹಕರಲ್ಲಿ ಹೊಸ ಹುರುಪು

**ಸಂದರ್ಭ: ಭಾರತದ ಗ್ರಾಹಕರು ಹೊಸ ಹುರುಪು ಮತ್ತು ವಿಶ್ವಾಸದೊಂದಿಗೆ ಹಬ್ಬದ ಋತುವನ್ನು ಬರ ಮಾಡಿಕೊಂಡಿದ್ದಾರೆ, ಹಣಕಾಸಿನ ವಿಚಾರವಾಗಿ ಅವರಲ್ಲಿ ಹೊಸ ಆಶಾವಾದ ಮೂಡಿದೆ ಎಂದು ಡೆಲಾಯ್ಟ್ ಇಂಡಿಯಾ ಸಿದ್ಧಪಡಿಸಿರುವ ವರದಿಯೊಂದು ಹೇಳಿದೆ.**

- 'ಹಣದುಬ್ಬರದ ಪ್ರಮಾಣವು ಕಡಿಮೆ ಆಗಿದೆ, ಈಚೆಗೆ ಜಾರಿಗೆ ಬಂದಿರುವ ಜಿಎಸ್‌ಟಿ ದರ ಪರಿಷ್ಕರಣೆ ಕ್ರಮವು ಗ್ರಾಹಕರ ಕೊಳ್ಳುವ ಶಕ್ತಿಯನ್ನು ಹೆಚ್ಚು ಮಾಡಿದೆ. ಈ ಸಂದರ್ಭದಲ್ಲಿ ಬಂದಿ ರುವ ಹಬ್ಬಗಳ ಖುಷಿಯು ಬೇಡಿಕೆಯ ಹೊಸ ಅಲೆಯನ್ನು ಸೃಷ್ಟಿಸಿದೆ' ಎಂದು ವರದಿಯಲ್ಲಿ ಹೇಳಲಾಗಿದೆ.

- ಭಾರತದ ಹಣಕಾಸಿನ ಆರೋಗ್ಯ ಸೂಚ್ಯಂಕವು (ಎಫ್‌ಡಬ್ಲ್ಯುಬಿಐ) ಸೆಪ್ಟೆಂಬರ್‌ನಲ್ಲಿ 110.3ಕ್ಕೆ ಏರಿಕೆ ಆಗಿದೆ. ಇದು ಜಾಗತಿಕ ಸರಾಸರಿಯಾದ 103.6ಕ್ಕಿಂತ ಹೆಚ್ಚು. ಕೌಟುಂಬಿಕ ಮಟ್ಟದಲ್ಲಿ ಹಣಕಾಸಿನ ಸ್ಥಿರತೆ ಹೆಚ್ಚಾಗಿ ರುವುದನ್ನು ಹಾಗೂ ಗ್ರಾಹಕರಲ್ಲಿ ಆಶಾಭಾವ ಹೆಚ್ಚಿರುವುದನ್ನು ಇದು ಸೂಚಿಸುತ್ತಿದೆ.
- ಆಹಾರ ಮಿತವ್ಯಯ ಸೂಚ್ಯಂಕವು (ಎಫ್‌ಎಫ್‌ಐ) ತೀವ್ರ ಪ್ರಮಾಣದಲ್ಲಿ ಕುಸಿತ ಕಂಡಿರುವುದು ವರದಿಯಲ್ಲಿನ ಪ್ರಮುಖ ಅಂಶಗಳ ಪೈಕಿ ಒಂದು. ಈ ಸೂಚ್ಯಂಕವು ಈಗ ಮೂರು ವರ್ಷಗಳ ಎರಡನೆಯ ಕನಿಷ್ಠ ಮಟ್ಟದಲ್ಲಿ ಇದೆ. ಅಂದರೆ ಗ್ರಾಹಕರು ಖರೀದಿಯ ಸಂದರ್ಭದಲ್ಲಿ ಬಹಳ ಲೆಕ್ಕಾಚಾರ ಹಾಕುತ್ತಿಲ್ಲ. ಅದರ ಬದಲಿಗೆ ಅವರು, ಉತ್ತಮ ಮೌಲ್ಯದ ಉತ್ಪನ್ನಗಳನ್ನು ಖರೀದಿಸುತ್ತಿದ್ದಾರೆ.
- ವಾಹನ ಖರೀದಿ ಉದ್ದೇಶವನ್ನು ಹೇಳುವ ಸೂಚ್ಯಂಕವು ಹಿಂದಿನ ವರ್ಷದ ಇದೇ ಅವಧಿಯಲ್ಲಿ ಇದ್ದ ಮಟ್ಟಕ್ಕೆ ಹೋಲಿಸಿದರೆ ಶೇಕಡ 6.6ರಷ್ಟು ಹೆಚ್ಚಳ ಕಂಡಿದೆ. ಅಂದರೆ, ದೊಡ್ಡ ಮೊತ್ತದ ಖರ್ಚುಗಳನ್ನು ಮಾಡುವ ವಿಶ್ವಾಸವು ಜನರಲ್ಲಿ ಹೆಚ್ಚಾಗಿದೆ ಎಂಬುದನ್ನು ಇದು ಹೇಳುತ್ತಿದೆ. ವಿದ್ಯುತ್ ಚಾಲಿತ (ಇ.ವಿ) ವಾಹನದ ಬಗ್ಗೆ ಒಲವು ಹೆಚ್ಚಾಗಿದೆ, ಶೇ 60ರಷ್ಟು ಗ್ರಾಹಕರು ಇ.ವಿ.ಗಳ ಬಗ್ಗೆ ಪರಿಶೀಲನೆ ನಡೆಸುತ್ತಿದ್ದಾರೆ.
- ಪ್ರವಾಸ, ಮನರಂಜನೆ, ವೈಯಕ್ತಿಕ ಆರೈಕೆಯಂತಹ ಉದ್ದೇಶಗಳಿಗೆ ವೆಚ್ಚ ಮಾಡುವುದು ಹೆಚ್ಚಾಗುತ್ತಿದೆ. ಹಣದುಬ್ಬರ ಕಡಿಮೆ ಆಗಿರುವುದು ಹಾಗೂ ಜಿಎಸ್‌ಟಿ ದರವನ್ನು ತಗ್ಗಿಸಿರುವುದು ಈ ವೆಚ್ಚಗಳಿಗೆ ಪೂರಕವಾಗಿ ಒದಗಿಬಂದಿದೆ ಎಂದು ವರದಿಯು ವಿವರಿಸಿದೆ.
- ಭಾರತದ ಗ್ರಾಹಕರು ಈಗ ಹಣಕಾಸಿನ ವಿಚಾರದಲ್ಲಿ ಹಿಂದೆಂದಿಗಿಂತಲೂ ಹೆಚ್ಚು ವಿಶ್ವಾಸ ಹೊಂದಿದ್ದಾರೆ ಎಂದು ಡೆಲಾಯ್ಟ್ ಸಂಸ್ಥೆಯ ದಕ್ಷಿಣ ಭಾರತ ವಲಯದ ಪಾಲುದಾರ ಆನಂದ್ ರಾಮನಾಥನ್ ಹೇಳಿದ್ದಾರೆ.

## ❖ ಲಾಂಗ್‌ಜಂಪ್: 8 ಮೀ. ಕ್ಲಬ್‌ಗೆ ಅನುರಾಗ್

**ಸಂದರ್ಭ: ಇಂಡಿಯನ್ ಓಪನ್ ಅಥ್ಲೆಟಿಕ್ಸ್: ರಾಜ್ಯದ ಕೃಷಿಕ್‌ಗೆ ಚಿನ್ನ: ಕೇರಳದ ಲಾಂಗ್‌ಜಂಪರ್ ಸಿ.ವಿ.ಅನುರಾಗ್ ಅವರು ಇಂಡಿಯನ್ ಓಪನ್ 23 ವರ್ಷದೊಳಗಿನವರ ಅಥ್ಲೆಟಿಕ್ ಕೂಟದಲ್ಲಿ 8.06 ಮೀ. ದೂರ ಜಿಗಿದು ಚಿನ್ನ ಗೆದ್ದರು. ಎಂಟು ಮೀಟರ್ ಜಿಗಿದವರ ಕ್ಲಬ್‌ಗೆ ಸಾಲಿಗೆ ಹೊಸದಾಗಿ ಸೇರ್ಪಡೆಯಾದರು.**

- ಇದು 21 ವರ್ಷ ವಯಸ್ಸಿನ ಅನುರಾಗ್ ಅವರ ವೈಯಕ್ತಿಕ ಶ್ರೇಷ್ಠ ಸಾಧನೆಯಾಗಿದ್ದು, ಎರಡನೇ ಯತ್ನದಲ್ಲಿ ಈ ದೂರ ದಾಖಲಿಸಿದರು. ಆ ಮೂಲಕ 2024ರಲ್ಲಿ ತಾವೇ ಸ್ಥಾಪಿಸಿದ್ದ 7.87 ಮೀ.ಗಳ ದಾಖಲೆಯನ್ನು ಅವರು ಸುಧಾರಿಸಿದರು.
- ಮೊದಲ ಯತ್ನದಲ್ಲಿ 7.88 ಮಿ. ಜಿಗಿದಿದ್ದರು. ಎರಡನೇ ಯತ್ನದಲ್ಲಿ 8.06 ಮೀ. ಜಿಗಿದ ಅವರು ನಂತರದ ಯತ್ನಗಳಲ್ಲಿ ಕ್ರಮವಾಗಿ 7.96 ಮೀ, 6.62 ಮೀ ಮತ್ತು 7.88 ಮೀ. ದೂರ ಜಿಗಿದರು.
- ತಮಿಳುನಾಡಿನ ಶರನ್ ಜೆ. (7.82 ಮೀ.) ಮತ್ತು ಪೊಲೀಸ್ ತಂಡದ ಆರ್ಯನ್ ಚೌಧರಿ (7.67 ಮೀ.) ಕ್ರಮವಾಗಿ ಎರಡು ಮತ್ತು ಮೂರನೇ ಸ್ಥಾನ ಗಳಿಸಿದರು.

## ❖ ಐಸಿಎಗೆ ಕನ್ನಡತಿ ಶಾಂತಾ ರಂಗಸ್ವಾಮಿ ಅಧ್ಯಕ್ಷೆ

**ಸಂದರ್ಭ: ಭಾರತ ಮಹಿಳಾ ಕ್ರಿಕೆಟ್ ತಂಡದ ಪ್ರಥಮ ನಾಯಕಿ ಯಾಗಿದ್ದ ಶಾಂತಾ ರಂಗಸ್ವಾಮಿ ಅವರನ್ನು ಭಾರತೀಯ ಕ್ರಿಕೆಟಿಗರ ಸಂಘಟನೆ (ಐಸಿಎ)ಗೆ ಅಧ್ಯಕ್ಷೆಯನ್ನಾಗಿ ಆಯ್ಕೆ ಮಾಡಲಾಗಿದೆ. ಕರ್ನಾಟಕದ ಶಾಂತಾ ಅವರು ಈ ಸ್ಥಾನಕ್ಕೆ ಆಯ್ಕೆಯಾದ ಮೊದಲ ಮಹಿಳೆ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ.**

- ಚುನಾವಣೆ ಪ್ರಕ್ರಿಯೆಯಲ್ಲಿ ವೆಂಕಟ್ಟು ಸುಂದರಂ ಮತ್ತು ದೀಪಕ್ ಜೈನ್ ಅವರು ಕ್ರಮವಾಗಿ ಕಾರ್ಯದರ್ಶಿ ಹಾಗೂ ಖಜಾಂಚಿಯಾಗಿ ಆಯ್ಕೆಯಾದರು. ಸಂತೋಷ್ ಸುಬ್ರಮಣಿಯಂ ಮತ್ತು ಜ್ಯೋತಿ ಜಿ ತಟ್ಟೆ ಅವರನ್ನು ಸದಸ್ಯ ಪ್ರತಿನಿಧಿಗಳನ್ನಾಗಿ ನೇಮಕ ಮಾಡಲಾಯಿತು ಎಂದು ಐಸಿಎ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

Dr. Rajkumar's KAS Academy

- ವೆಂಕಿನಾ ಚಾಮುಂಡೇಶ್ವರ್ ನಾಥ್ ಮತ್ತು ಸುಧಾ ಶಾ ಅವರು ಕ್ರಮವಾಗಿ ಬಿಸಿಸಿಐನಲ್ಲಿ ಐಸಿಸಿ ಪ್ರತಿನಿಧಿಗಳಾಗಿ ಆಯ್ಕೆಯಾಗಿದ್ದಾರೆ. ಶುಭಾಂಗಿ ಡಿ ಕುಲಕರ್ಣಿ ಅವರನ್ನು ಐಪಿಎಲ್ ಆಡಳಿತ ಸಮಿತಿಗೆ ನಾಮನಿರ್ದೇಶನ ಮಾಡಲಾಯಿತು.
- 71 ವರ್ಷದ ಶಾಂತಾ, ಮೂಲತಃ ಬೆಂಗಳೂರಿನವರು. 1976 ರಿಂದ 1991ರ ಅವಧಿಯಲ್ಲಿ ಭಾರತ ಮಹಿಳಾ ತಂಡದಲ್ಲಿ ಆಡಿದ್ದರು.
- ಅವರು 16 ಟೆಸ್ಟ್‌ಗಳಲ್ಲಿ ಆಡಿ ಒಂದು ಶತಕ ಹಾಗೂ ಆರು ಅರ್ಧಶತಕಗಳನ್ನು ಗಳಿಸಿದ್ದಾರೆ. ಒಟ್ಟು 750 ರನ್ ಗಳಿಸಿದ್ದಾರೆ. ಜೊತೆಗೆ 21 ವಿಕೆಟ್‌ಗಳನ್ನೂ ಪಡೆದಿದ್ದಾರೆ. 19 ಏಕದಿನ ಪಂದ್ಯಗಳಿಂದ 287 ರನ್ ಪೇರಿಸಿದ್ದಾರೆ.

## ❖ ರ್‍ಯಾಂಕಿಂಗ್: 136ನೇ ಸ್ಥಾನಕ್ಕಿಳಿದ ಭಾರತ

**ಸಂದರ್ಭ: ಭಾರತ ಪುರುಷರ ಫುಟ್‌ಬಾಲ್ ತಂಡ, ಶುಕ್ರವಾರ ಪ್ರಕಟವಾದ ಫಿಫಾ ವಿಶ್ವ ರ್‍ಯಾಂಕಿಂಗ್‌ನಲ್ಲಿ 136ನೇ ಸ್ಥಾನಕ್ಕೆ ಕುಸಿದಿದೆ. 9 ವರ್ಷಗಳಲ್ಲಿ ಇದೇ ಮೊದಲ ಬಾರಿ ಭಾರತ ರ‍್ಯಾಂಕಿಂಗ್‌ನಲ್ಲಿ ಈ ಮಟ್ಟಕ್ಕೆ ಇಳಿದಿದೆ.**

- ಈ ಹಿಂದಿನ ರ್‍ಯಾಂಕಿಂಗ್‌ನಲ್ಲಿ ಭಾರತ 134ನೇ ಸ್ಥಾನ ದಲ್ಲಿದಲ್ಲಿತ್ತು. ಎರಡು ದಿನಗಳ ಹಿಂದೆಯಷ್ಟೇ ಭಾರತ ತಂಡವು ಎಎಫ್‌ಸಿ ಏಷ್ಯನ್ ಕಪ್ ರ‍್ಯಾಂಕಿಂಗ್‌ನಲ್ಲಿ ಸಿಂಗಪುರಕ್ಕೆ ಸೋತು, ಪ್ರಧಾನ ಸುತ್ತಿಗೆ ತಲುಪುವ ಕ್ಷೀಣ ಅವಕಾಶವನ್ನೂ ಕಳೆದುಕೊಂಡಿತ್ತು. ಭಾರತವು, ಕುವೈತ್‌ಗಿಂತ ಒಂದು ಸ್ಥಾನ ಕೆಳಗಿದ್ದು, ಬೋಟ್ಸ್‌ವಾನಾಗಿಂತ ಒಂದು ಸ್ಥಾನ ಮೇಲಿದೆ.
- 2016ರ ಅಕ್ಟೋಬರ್ ನಲ್ಲಿ ಭಾರತ 137ನೇ ಸ್ಥಾನಕ್ಕೆ ಇಳಿದಿದ್ದು, ಈವರೆಗಿನ ಕಳಪೆ ಎನಿಸಿದೆ. 1996ರ ಫೆಬ್ರುವರಿ ಯಲ್ಲಿ 94ನೇ ಸ್ಥಾನಕ್ಕೇರಿದ್ದು ಇದುವರೆಗಿನ ಅತ್ಯುತ್ತಮ ಸಾಧನೆ ಎನಿಸಿದೆ.
- ಸ್ಪೇನ್‌ಗೆ ಅಗ್ರಸ್ಥಾನ: ವಿಶ್ವ ರ್‍ಯಾಂಕಿಂಗ್‌ನಲ್ಲಿ ಸ್ಪೇನ್ ಅಗ್ರಸ್ಥಾನದಲ್ಲಿ ಉಳಿದುಕೊಂಡಿದೆ. ಜರ್ಮನಿ ಎರಡು ಸ್ಥಾನ ಮೇಲೇರಿದ್ದು ಅಗ್ರ 10ರೊಳಗೆ ಮರಳಿದೆ. 2018ರ ವಿಶ್ವಕಪ್ ರನ್ನರ್ ಅಪ್ ಕ್ರೊವೇಷ್ಯಾ 11ನೇ ಸ್ಥಾನದಲ್ಲಿದೆ.
- ವಿಶ್ವ ಕಪ್ ವಿಜೇತ ಅರ್ಜೆಂಟೀನಾ ಎರಡನೇ, ಫ್ರಾನ್ಸ್ ಮೂರನೇ ಸ್ಥಾನದಲ್ಲಿವೆ. ಇಂಗ್ಲೆಂಡ್, ಪೋರ್ಚುಗಲ್ , ನೆದರ್ಲೆಂಡ್ಸ್, ಬ್ರೆಜಿಲ್ ಮತ್ತು ಬೆಲ್ಜಿಯಂ ಕ್ರಮವಾಗಿ ನಾಲ್ಕರಿಂದ ಎಂಟರವರೆಗಿನ ಸ್ಥಾನಗಳನ್ನು ಪಡೆದಿವೆ.

-------------------------------------------ಶುಭವಂದನೆಗಳು-------------------------------------------

